ಸಂಪುಟ: 04 ಸಂಚಿಕೆ: 71 ಪುಟಗಳು: 08 ಶನಿವಾರ 25 ಮೇ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಮನುಷ್ಯನಲ್ಲಿ ದಡ್ಡತನ ಇದ್ದರೂ ಪರವಾಗಿಲ್ಲ, ಆದರೆ ಸಣ್ಣತನ ಇರಬಾರದು.. ಯಾಕೆಂದರೆ ಮನುಷ್ಯ ಗೌರವ ಕಳೆದುಕೊಳ್ಳುವುದು ಸಣ್ಣತನದಿಂದ...!!

## ನವಭಾರತದ ಗರಿ ನಮೋ ಗುರಿ

**ವಿಕಸಿತ ಅಮೃತಕಾಲಕ್ಕೆ ಮನ್ನಣೆ**



- ಸಾಧನೆ ಬಣ್ಣನೆ
- ವಿಕಸಿತ ಭಾರತದ ಗುರಿಗೆ ದೈವ ಪ್ರೇರಣೆ; ಆ ದೈವವೇ ನನಗೆ ಶಕ್ತಿ ತುಂಬುತ್ತಿದೆ.
- ತಾಕತ್ತೇನೆಂದು ಖುದ್ದು ಪರೀಕ್ಷಿಸಿ ಬಂದಿರುವೆ: ಮೋದಿ!
- ನಟಿ ಕಂಗನಾ ಕ್ಷೇತ್ರದಲ್ಲಿ ಮೋದಿ ವಾಗ್ದಾಳಿ

### ರಾಜಕಾರಣದ ವಿರುದ್ಧ ವಾಗ್ದಾಳಿ

ತಮ್ಮ ಪೂರ್ವಜರ ಪರಂಪರೆಯ ಮೇಲೆ ಮಾತ್ರ ಬದುಕುವವರು ಈ ದೇಶವನ್ನು ಕಟ್ಟಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್? ಅನ್ನು ಟೀಕಿಸಿದರು. ಮಣ್ಣಿನಿಂದ ಬೆಳೆದು ಪರ್ವತದಷ್ಟು ಎತ್ತರವನ್ನು ಮುಟ್ಟುವವರಿಂದ ಈ ದೇಶವನ್ನು ನಿರ್ಮಿಸಲಾಗುತ್ತದೆ. ಆದ್ದರಿಂದ ಇಂದಿನ ಭಾರತದ ಭವಿಷ್ಯ, ನಮ್ಮ ಸ್ಟಾರ್ಟ್‌ಅಪ್ಗಳು ಯುವಜನರಿಂದ ನಡೆಸಲ್ಪಡುತ್ತವೆ. ದೇಶದ ಹೆಣ್ಣುಮಕ್ಕಳು ಹೊಲಗಳಲ್ಲಿ ಡ್ರೋನ್ ಗಳನ್ನು ಹಾರಿಸುತ್ತಿದ್ದಾರೆ. ಹೆಣ್ಣುಮಕ್ಕಳು ಯುದ್ಧ ವಿಮಾನಗಳನ್ನು ಹಾರಿಸುತ್ತಿದ್ದಾರೆ. ಇದೆಲ್ಲಾ ನಮ್ಮ ಸರ್ಕಾರದಿಂದ ಸಾಧ್ಯವಾಗಿದೆ ಎಂದರು.

### ಕಾಂಗ್ರೇಸ್ ಮುಕ್ತ ಹಿಮಾಚಲ ಪ್ರದೇಶ

ಕಾಂಗ್ರೇಸ್ ಮಹಿಳಾ ವಿರೋಧಿಯಾಗಿದೆ, ಕಾಂಗ್ರೇಸ್ ಹಿಮಾಚಲ ಪ್ರದೇಶವನ್ನು ವಿನಾಶದ ಹಾದಿಯಲ್ಲಿ ಕೊಂಡೊಯ್ಯುತ್ತಿದೆ. ಹಿಮಾಚಲ ಪ್ರದೇಶವನ್ನು ಕಾಂಗ್ರೇಸ್ ಹಿಡಿತದಿಂದ ಮುಕ್ತಗೊಳಿಸಲು ನನಗೆ ನಿಮ್ಮ ಬೆಂಬಲ ಬೇಕು. ಮತದಾನದ ಮೂಲಕ ರಾಜ್ಯದ ಭವಿಷ್ಯವನ್ನು ಖಾತ್ರಿಪಡಿಸಿಕೊಳ್ಳಿ ಎಂದು ಮೋದಿ ಕರೆ ನೀಡಿದರು.

1. ಪಾಕಿಸ್ತಾನದ ತಾಕತ್ತು ಏನೆಂದು ಲಾಹೋರ್‌ಗೆ ಹೋಗಿ ತಿಳಿದುಕೊಂಡೆ:
2. ವಿಕ್ಷಿತ್ ಭಾರತ್ ಸಾಧನೆಗಾಗಿ ನಾನು 2047ರವರೆಗೆ 24×7 ಕೆಲಸ ಮಾಡಬೇಕು.
3. ನಾನಿದ್ದಿದ್ದರೆ ಕರ್ತಾರ್ಪುರ ಎಂದೋ ವಶಕ್ಕೆ: ಮೋದಿ
4. "ಕೈ' ಗೆದ್ದರೆ ರಾಮ್ ರಾಮ್ ಹೇಳುವವರು ಜೈಲಿಗೆ: ಪಿಎಂ
5. "ಹಸು ಹಾಲು ಕೊಡೋ ಮೊದಲೇ ತುಪ್ಪಕ್ಕೆ ಜಗಳ'

- ಉದಯವಾಹಿನಿ, ನವದೆಹಲಿ

ಭಾರತದ ಜಿಡಿಪಿ 2047ರೊಳಗೆ 35 ಟ್ರಿಲಿಯನ್ ಡಾಲರ್ ಮಟ್ಟ ಮುಟ್ಟಬೇಕೆಂದೂ ಗುರಿ ಇಟ್ಟಿದೆ. ಭಾರತ ವಿಕಸಿತ ಅಥವಾ ಮುಂದುವರಿದ ದೇಶವಾಗಬೇಕಾದರೆ ಅಷ್ಟು ಜಿಡಿಪಿ ಸಾಧನೆ ಅವಶ್ಯ. ಹಾಗೂ ತಲಾದಾಯ ಹೆಚ್ಚಳವೂ ಬಹಳ ಮುಖ್ಯ. ಭಾರತ ಈ ಗುರಿ ಸಾಧಿಸಬೇಕಾದರೆ ವರ್ಷಕ್ಕೆ ಶೇ. 9ರ ದರದಲ್ಲಿ ಬೆಳವಣಿಗೆ ಹೊಂದಬೇಕೆಂದು ಹಲವು ಆರ್ಥಿಕ ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಇತರ ಹಿಂದುಳಿದ ವರ್ಗಗಳ (ಒಬಿಸಿ) ಮೀಸಲಾತಿಗೆ ಸಂಬಂಧಿಸಿದಂತೆ ಪ್ರಧಾನಿ ಮೋದಿ ಅವರು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಂಗಾಳದಲ್ಲಿ ಅವರು ಒಬಿಸಿ ಮೀಸಲಾತಿಯನ್ನು ಕಸಿದುಕೊಂಡು ಮುಸ್ಲಿಮರಿಗೆ ನೀಡಿದರು, ಆದರೆ ಕಲ್ಕತ್ತಾ ಹೈಕೋರ್ಟ್ ಅದನ್ನು ನಿಷೇಧಿಸಿತು. ಶಿಮ್ಲಾದಲ್ಲಿ ಚುನಾವಣಾ ರ್ಯಾಲಿಯಲ್ಲಿನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತ ಮೈತ್ರಿಯ ಪಿತೂರಿಯ ಇತ್ತೀಚಿನ ಉದಾಹರಣೆ ಪಶ್ಚಿಮ ಬಂಗಾಳದಲ್ಲಿ ಹೊರಹೊಮ್ಮಿದೆ. ಎರಡು ದಿನಗಳ ಹಿಂದೆ ಕಲ್ಕತ್ತಾ ಹೈಕೋರ್ಟ್ 77 ಮುಸ್ಲಿಂ ಜಾತಿಗಳ ಮೀಸಲಾತಿಯನ್ನು ರದ್ದುಗೊಳಿಸಿತ್ತು. ಈ 77 ಮುಸ್ಲಿಂ ಜಾತಿಗಳು ಎಲ್ಲೆಡೆ ಉದ್ಯೋಗ, ಶಿಕ್ಷಣ ಸೇರಿದಂತೆ ಇತರೆ ಪ್ರಯೋಜನಗಳನ್ನು ಪಡೆಯುತ್ತಿದ್ದರು ಅಂಥ ಆರೋಪಿಸಿದರು.

ಇಂಡಿಯಾ ಟಿವಿಯ ಅಧ್ಯಕ್ಷ ಮತ್ತು ಪ್ರಧಾನ ಸಂಪಾದಕ ರಜತ್ ಶರ್ಮಾ ಅವರೊಂದಿಗೆ ವಿಶೇಷ ಸಂದರ್ಶನದಲ್ಲಿ ಪ್ರಧಾನಿ ನರೇಂದ್ರ ಮೋದಿ, ಹಿರಿಯ ಕಾಂಗ್ರೆಸ್ ನಾಯಕ ಮಣಿಶಂಕರ್ ಅಯ್ಯರ್ ಅವರ ''ಪಾಕಿಸ್ತಾನದ ಬಳಿ ಪರಮಾಣು ಬಾಂಬ್ ಇದೆ ಎಂಬ ಕಾರಣಕ್ಕೆ ಭಾರತ ಗೌರವಿಸಬೇಕು'' ಎಂಬ ಹೇಳಿಕೆಗೆ ತಿರುಗೇಟು ನೀಡಿದ್ದಾರೆ.

ನಾನು ಸ್ವತಃ ಲಾಹೋರ್‌ಗೆ ಹೋಗಿ ಪಾಕಿಸ್ತಾನದ ತಾಕತ್ತು ಏನು ಅನ್ನೋದನ್ನ ಪರೀಕ್ಷೆ ಮಾಡಿದ್ದೇನೆ ಎಂದು ಹೇಳಿದ್ದಾರೆ. ಪಾಕಿಸ್ತಾನದ ಬಳಿ ಅಣುಬಾಂಬ್ ಇದೆ ಎಂಬ ಕಾರಣಕ್ಕೆ ನಾವು ಭಯಪಡಬೇಕು ಎಂಬ ಕಾಂಗ್ರೆಸ್ ನಾಯಕ ಮಣಿಶಂಕರ್ ಅಯ್ಯರ್ ಅವರ ಹೇಳಿಕೆಗೆ ನಿಮ್ಮ ಅಭಿಪ್ರಾಯವೇನು ಅನ್ನೋದಕ್ಕೆ ಉತ್ತರ ನೀಡಿದ ಪ್ರಧಾನಿ ನರೇಂದ್ರ ಮೋದಿ, ಪಾಕಿಸ್ತಾನದ ತಾಕತ್ತು ಏನು ಅನ್ನೋದನ್ನ ಸ್ವತಃ ನಾನೇ ಲಾಹೋರ್‌ಗೆ ಹೋಗಿ ನೋಡಿಕೊಂಡು ಬಂದಿದ್ದೇನೆ ಎಂದು ಹೇಳುವ ಮೂಲಕ ಕಾಂಗ್ರೆಸ್‌ಗ ತಿರುಗೇಟು ನೀಡಿದರು. 2015ರಲ್ಲಿ ಪಾಕಿಸ್ತಾನಕ್ಕೆ ಭೇಟಿ ನೀಡಿದ ಕ್ಷಣವನ್ನು ವಿವರಿಸಿದ ಪ್ರಧಾನಿ ನರೇಂದ್ರ ಮೋದಿ, ನಾನು ಪಾಕಿಸ್ತಾನಕ್ಕೆ ಭೇಟಿ ನೀಡಿದಾಗ ಹಲವು ಪತ್ರಕರ್ತರು ನನಗೆ ಪ್ರಶ್ನೆ ಮಾಡಿದ್ದರು. 'ಓಹ್ ದೇವರೆ, ನೀವು ಪಾಕಿಸ್ತಾನಕ್ಕೆ ವೀಸಾ ಇಲ್ಲದೆ ಹೇಗೆ ಬಂದಿದ್ದೀರಿ ಎಂದು ಕೇಳಿದ್ದರು. ನಾನು ಹಿಂದೊಮ್ಮೆ ಈ ದೇಶವೂ ನಮ್ಮದೇ ಆಗಿತ್ತು ಎಂದು ಉತ್ತರಿಸಿದ್ದೆ ಎಂದು ಮೋದಿ ಹೇಳಿದ ಬೆನ್ನಲ್ಲಿಯೇ ಭಾರತ ಮಂಟಪಂನಲ್ಲಿದ್ದ ಜನರು ಕರತಾಡನ ಮಾಡಿದ್ದಾರೆ. ವಿದೇಶಾಂಗ ನೀತಿಯ ವಿಷಯದಲ್ಲಿ ವಿರೋಧ ಪಕ್ಷಗಳು ತಮ್ಮನ್ನು ಹೇಗೆ ಪ್ರಶ್ನಿಸುತ್ತಿದ್ದವು ಎಂಬುದನ್ನು ನೆನಪಿಸಿಕೊಂಡ ಪ್ರಧಾನಮಂತ್ರಿ ಮತ್ತು ತಮ್ಮಿಂದಗ ವಿದೇಶಾಂಗ ನೀತಿಯನ್ನು ನಿರ್ವಹಣೆ ಮಾಡಲು ಸಾಧ್ಯವೇ ಎಂದು ಇವರು ಅನುಮಾನ ಪಟ್ಟಿದ್ದರು. ಆದರೆ, ನಾನು ವಿಶ್ವನಾಯಕರೊಂದಿಗೆ ಅಧಿಕೃತ ಸಂಬಂಧ ಮಾತ್ರವಲ್ಲದೆ, ವೈಯಕ್ತಿಕ ಸಂಬಂಧ ಬೆಳೆಸಿಕೊಂಡಿದ್ದರ ಬಗ್ಗೆ ಮಾತನಾಡಿದರು.

### ದೇವರೇ ತನಗೆ ಚೈತನ್ಯ ನೀಡುತ್ತಿದ್ದಾನೆ

ಯಾವುದೋ ಮಹತ್ತರ ಕಾರ್ಯಕ್ಕಾಗಿ ಆ ದೇವರೇ ನನ್ನನ್ನು ಕಳುಹಿಸಿದ್ದಾನೆ. ದೇವರು ನನ್ನ ಕೈಹಿಡಿದು ನಡೆಸುತ್ತಿದ್ದಾನೆ ಎನಿಸುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಭಾರತವು ಮುಂದುವರಿದ ದೇಶವನ್ನಾಗಿ ಮಾಡಲು 2047ರವರೆಗೂ ತಾನು 24 ಗಂಟೆ ಕೆಲಸ ಮಾಡಬೇಕು. ಅದಕ್ಕಾಗಿ ಆ ದೇವರೇ ತನಗೆ ಚೈತನ್ಯ ನೀಡುತ್ತಿದ್ದಾನೆ. 2047ರೊಳಗೆ ವಿಕಸಿತ ದೇಶವನ್ನಾಗಿಸುವ ಗುರಿ ಈಡೇರುತ್ತದೆ ಎನ್ನುವ ವಿಶ್ವಾಸ ತನಗಿದೆ. ಈ ಗುರಿ ಸಾಧನೆಯಾಗುವವರೆಗೂ ಆ ದೇವರು ವಾಪಸ್ ಕರೆಸಿಕೊಳ್ಳುವುದಿಲ್ಲ ಎಂದು ಅವರು ಹೇಳಿದ್ದಾರೆ. ಇಂಡಿಯಾ ಟಿವಿ ವಾಹಿನಿ ಆಯೋಜಿಸಿದ ಕಾರ್ಯಕ್ರಮವೊಂದರಲ್ಲಿ ಅವರು ಮಾತನಾಡುತ್ತಿದ್ದರು.

### ಮಣಿಶಂಕರ್ ಅಯ್ಯರ್ ನೀಡಿದ್ದ ಹೇಳಿಕೆಗೆ ಮೋದಿ ಗೇಲಿ

ಪಾಕಿಸ್ತಾನದ ಬಳಿ ಅಣುಬಾಂಬ್ ಇದೆ, ಹಾಗಾಗಿ ನಾವು ಗೌರವ ಕೊಡಬೇಕು ಎಂದು ಕಾಂಗ್ರೆಸ್ ನಾಯಕ ಮಣಿಶಂಕರ್ ಅಯ್ಯರ್ ನೀಡಿದ್ದ ಹೇಳಿಕೆಗೆ ತಿರುಗೇಟು ನೀಡುವಾಗ ಮೋದಿ ಅವರು ಪಾಕ್ ಭೇಟಿ ವಿಚಾರವನ್ನು ಪ್ರಸ್ತಾಪಿಸಿದ್ದಾರೆ. ಇಂಡಿಯಾ ಟಿವಿಗೆ ನೀಡಿದ ಸಂದರ್ಶನದಲ್ಲಿ, ಅವರಿಗೆ ಏನು ಹೆದರಬೇಕು, ಅವರು ಎಷ್ಟು ಬಲಿಷ್ಠರು ಎಂದು ನಾನು ಲಾಹೋರ್‌ಗೆ ಭೇಟಿ ನೀಡಿ ಪರಿಶೀಲಿಸಿದ್ದೇನೆ ಎಂದು ಮೋದಿ ಗೇಲಿ ಮಾಡಿದರು. ಪಾಕಿಸ್ತಾನ ಎಷ್ಟು ಶಕ್ತಿಯುತವಾಗಿದೆ ಎಂಬುದನ್ನು ಪರಿಶೀಲಿಸಲು ನಾನು ವೈಯಕ್ತಿಕವಾಗಿ ಭೇಟಿ ನೀಡಿದ್ದೆ ಎಂದು ಹೇಳಿದ್ದಾರೆ.

## ಬೆಂಗಳೂರಿನ ರೇವ್ ಪಾರ್ಟಿ ಕೇಸ್ ಗೆ ಬಿಗ್ ಟ್ವಿಸ್ಟ್

- ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಜಿಆರ್ ಫಾರ್ಮ್ ಹೌಸ್ ನಲ್ಲಿ ಇತ್ತೀಚಿಗೆ ರೇವ್ ಪಾರ್ಟಿ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಬಿಗ್ ಟ್ರಸ್ಟ್ ಸಿಕ್ಕಿದ್ದು ಕಾಂಗ್ರೆಸ್ ಸಚಿವರೊಬ್ಬರಿಗೆ ಆಪ್ತ ರಾಗಿರುವ ಪ್ರಕರಣದ ಆರನೇ ಆರೋಪಿಗೆ ಇದೀಗ ಸಿಸಿಬಿ ಪೊಲೀಸರು ನೋಟಿಸ್ ನೀಡಿದ್ದಾರೆ ಎಂದು ತಿಳಿದುಬಂದಿದೆ. ಹೌದು ಪ್ರಕರಣದ ಆರನೇ ಆರೋಪಿಯಾ ಗಿರುವ ಬಿಲ್ಡರ್ ಗೋಪಾಲ್ ರೆಡ್ಡಿಗೆ ಸಿಸಿಬಿ ಪೊಲೀಸರು ನೋಟಿಸ್ ನೀಡಿದ್ದಾರೆ. ಶುಕ್ರವಾರ ಗೋಪಾಲ್ ರೆಡ್ಡಿ ಬಂಧಿಸಲು ಸಿಸಿಬಿ ಪೊಲೀಸರು ತೆರಳಿದ್ದರು ಪ್ರಕರಣದ ಸಂಬಂಧ ದಾಖಲೆ ಸಹಿತ ವಿಚಾರಣೆಗೆ ಬರುವಂತೆ ನೋಟಿಸ್ ನೀಡಿದ್ದಾರೆ ತನಿಕಾಧಿಕಾರಿ, ಲಕ್ಷ್ಮಿನಾರಾಯಣ ಎದುರು ವಿಚಾರಣೆಗೆ ಬರಲು ನೋಟಿಸ್ ನೀಡಿದ್ದರು.

## ಕೇಂದ್ರಕ್ಕೆ ಪತ್ರ ಬರೆದಿದ್ದೇವೆ ಅವರು ರೆಸ್ಪಾನ್ಸ್ ಮಾಡಿಲ್ಲ

- ಉದಯವಾಹಿನಿ, ಬೆಂಗಳೂರು

ನಾನು ಅವರಿವರ ಟ್ವೀಟ್ ಗೆ ಉತ್ತರ ಕೊಡಲ್ಲ. ಕಾನೂನು ಪ್ರಕಾರ ನಡೆದುಕೊಳ್ಳುತ್ತಿದ್ದೇವೆ. ಎಸ್‌ಐಟಿ ತನಿಖೆಯಲ್ಲಿ ಲೋಪವಿದೆಯೇ ಹೇಳಲಿ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು. ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಪಾಸ್‌ಪೋರ್ಟ್ ರದ್ದತಿಗೆ ಸಿಎಂ ಸಿದ್ದರಾಮಯ್ಯ ಪ್ರಧಾನಿಗೆ ಪತ್ರ ಬರೆದಿದ್ದರು. ಎರಡನೇ ಪತ್ರವನ್ನೂ ಬರೆದಿದ್ದಾರೆ. ದೇವೇಗೌಡರು ಪ್ರಜ್ವಲ್ ಬರಲಿ ಎಂದು ಪತ್ರ ಬರೆದಿದ್ದಾರೆ. ಇದು ನಮಗೆ ಗೊತ್ತಾಗಿದೆ. ಅದು ಅವರ ಕುಟುಂಬದ ಆಂತರಿಕ ವಿಚಾರ. ಸಾರ್ವಜನಿಕ ಜೀನವದಲ್ಲಿ ಅವರ ಪತ್ರಕ್ಕೆ ಗೌರವ ಕೊಡಬೇಕು. ಈಗಲಾದ್ರೂ ಪ್ರಜ್ವಲ್ ಬರಬೇಕು. ತನಿಖೆ ಎದುರಿಸಬೇಕು. ನಾನು ಅವರಿವರ ಟ್ವೀಟ್ ಗೆ ಉತ್ತರ ಕೊಡಲ್ಲ. ಕಾನೂನು ಪ್ರಕಾರ ನಡೆದುಕೊಳ್ಳುತ್ತಿದ್ದೇವೆ. ಎಸ್‌ಐಟಿ ತನಿಖೆಯಲ್ಲಿ ಲೋಪವಿದೆಯೇ ಹೇಳಲಿ. ಆಗ ನಾವು ಗಮನ ಹರಿಸ್ತೇವೆ. ನಾವು ಕೇಂದ್ರಕ್ಕೆ ಪತ್ರ ಬರೆದಿದ್ದೇವೆ. ಅವರು ಏನೂ ರೆಸ್ಪಾನ್ಸ್ ಮಾಡಿಲ್ಲ ಎಂದರು.

## ಪ್ರಜ್ವಲ್ ಪಾಸ್‌ಪೋರ್ಟ್ ರದ್ದು, ಕೇಂದ್ರದ ವಿರುದ್ಧ ಕಿಡಿ

- ಉದಯವಾಹಿನಿ, ಮಂಡ್ಯ

ಸಂಸದ ಪ್ರಜ್ವಲ್ ರೇವಣ್ಣದ್ದು ಎನ್ನಲಾದ ಅಶ್ಲೀಲ ವಿಡಿಯೋ ಪ್ರಕರಣ ಸಂಬಂಧ ಆರೋಪಿ ಪ್ರಜ್ವಲ್‌ನ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದು ಮಾಡುವಂತೆ ಕೇಂದ್ರಕ್ಕೆ ಸಿಎಂ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಈ ಸಂಬಂಧ ಸಚಿವ ಪ್ರಿಯಾಂಕ್ ಪ್ರತಿಕ್ರಿಯೆ ನೀಡಿದ್ದು, ರಾಜ್ಯದ ಸಿಎಂ ಆಗಿ ಕೇಂದ್ರಕ್ಕೆ 2 ಬಾರಿ ಪತ್ರ ಬರೆಯಬೇಕಾ ಎಂದು ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು. ಸಿಎಂ ಪತ್ರ ಬರೆದಾಗ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಕನಿಷ್ಠ ಹುಡುಕಾಟದ ಪ್ರಕ್ರಿಯೆಯಲ್ಲಿ ಇದ್ದೇವೆ ಅಂತಾದರೂ ರಾಜ್ಯ ಸರ್ಕಾರಕ್ಕೆ ಮಾಹಿತಿ ನೀಡಬೇಕಲ್ವಾ 25 ದಿನಗಳ ಹಿಂದೆಯೇ ಮೊದಲ ಪತ್ರ ಬರೆಯಲಾಗಿತ್ತು. ಆ ಮೊದಲ ಪತ್ರದ ಮೇಲೆ ಮಲಗಿ, ಕೇಂದ್ರ ಸರ್ಕಾರದವರು ಉರುಳಾಡಿಕೊಂಡಿದ್ರು ಎಂದು ಕಿಡಿಕಾರಿದರು. ಇನ್ನು 2ನೇ ಸಲ ಪತ್ರ ಬರೆದಾಗ ನೋಡುತ್ತೇವೆ, ಮಾಡ್ತೀವಿ ಅಂತಿದ್ದಾರೆ ಎಂದು ಟೀಕಿಸಿದರು.

## ಪ್ರಜ್ವಲ್ ಅವರ ಪಾಸ್ಪೋರ್ಟ್ ರದ್ದು: ಮಾಹಿತಿ ನೀಡಿದ ಜೈಶಂಕರ್

- ಉದಯವಾಹಿನಿ, ಬೆಂಗಳೂರು

ಲೈಂಗಿಕ ದೌರ್ಜನ್ಯದ ಆರೋಪ ಕೇಳಿಬಂದ ನಂತರ ಜರ್ಮನಿಗೆ ಪಲಾಯನ ಮಾಡಿರುವ ಸಂಸದ ಪ್ರಜ್ವಲ್ ರೇವಣ್ಣ ಅವರ ಪಾ ಸ್ಪೋರ್ಟ್ ಮುಟ್ಟುಗೋಲು ಹಾಕಿಕೊಳ್ಳುವಂತೆ ವಿದೇಶಾಂಗ ಸಚಿವಾಲಯಕ್ಕೆ ಮನವಿ ಬಂದಿದೆ ಎಂದು ವಿದೇಶಾಂಗ ವ್ಯವಹಾ ರಗಳ ಸಚಿವ ಎಸ್.ಜೈಶಂಕರ್ ಖಚಿತಪಡಿಸಿದ್ದಾರೆ. ಹಾಸನ ಲೋಕಸಭಾ ಕ್ಷೇತ್ರದ ಎನ್ಡಿಎ ಅಭ್ಯರ್ಥಿಯಾಗಿರುವ 33 ವರ್ಷದ ಪ್ರಜ್ವಲ್ ಹಲವಾರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪವನ್ನು ಎದುರಿಸುತ್ತಿದ್ದಾರೆ. ಏಪ್ರಿಲ್ 27ರಂದು ಹಾಸನ ಲೋಕಸಭಾ ಚುನಾವಣೆ ಮುಗಿದ ಮರುದಿನವೇ ಪ್ರಜ್ವಲ್ ಜರ್ಮನಿಗೆ ತೆರಳಿದ್ದರು. ಪಾಸ್ಪೋರ್ಟ್ ಅನ್ನು ಮುಟ್ಟುಗೋಲು ಹಾಕಿಕೊಳ್ಳುವುದು ಪಾಸ್ಪೋರ್ಟ್ ಕಾಯ್ದೆ ಎಂಬ ಕಾಯ್ದೆಯಿಂದ ನಿಯಂತ್ರಿಸಲ್ಪಡುತ್ತದೆ.

ಹಾಗೆ ಮಾಡಲು ನಮಗೆ ನ್ಯಾಯಾಂಗ ನ್ಯಾಯಾಲಯ ಅಥವಾ ಪೊಲೀಸ್ ವಿನಂತಿ ಬೇಕು. ಎಂಇಎಗೆ ಕರ್ನಾಟಕದಿಂದ ಮೇ 21 ರಂದು ಮಾತ್ರ ಈ ಮನವಿ ಬಂದಿದೆ ಎಂದು ಜೈಶಂಕರ್ ಎಎನ್‌ಐಗೆ ನೀಡಿದ ಸಂದರ್ಶನದಲ್ಲಿ ಹೇಳಿದರು. ಈಗ ಅಮಾನತುಗೊಂಡಿರುವ ಜೆಡಿಎಸ್ ಸಂಸದರಿಗೆ ಎಂಇಎ ಶೋಕಾಸ್ ನೋಟಿಸ್ ನೀಡಿದೆ ಮಾಡಿದೆ. ಕರ್ನಾಟಕ ಸರ್ಕಾರದ ಪತ್ರದ ನಂತರ ಎಂಇಎ ಪ್ರಜ್ವಲ್ ಅವರ ಪಾಸ್ಪೋರ್ಟ್ ರದ್ದುಗೊಳಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿದ ನಂತರ ಈ ವರದಿ ಬಂದಿದೆ. ಏತನ್ಮಧ್ಯೆ, ಕೇಂದ್ರ ತನಿಖಾ ದಳ ಮೂಲಕ ಎಸ್‌ಐಟಿಯ ಕೋರಿಕೆಯ ಮೇರೆಗೆ ಇಂಟರ್ಪೋಲ್ ಈಗಾಗಲೇ ಅವರ ಇರುವಿಕೆಯ ಬಗ್ಗೆ ಮಾಹಿತಿ ಕೋರಿ 'ಬ್ಲೂ ಕಾರ್ನರ್ ನೋಟಿಸ್' ಹೊರಡಿಸಿದೆ.

## ಎಸ್ ಟಿ ಸೋಮಶೇಖರ್ ಶಿವರಾಮ ಹೆಬ್ಬಾರ್ ದಾರಿ ತಪ್ಪಿದ ಮಕ್ಕಳು: ಆರ್.ಅಶೋಕ್

- ಉದಯವಾಹಿನಿ, ಬೆಂಗಳೂರು

ರಾಜ್ಯಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಅಡ್ಡ ಮತದಾನ ಮಾಡಿದ ಬಿಜೆಪಿ ಶಾಸಕ ಎಸ್ ಟಿ ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಅವರು ದಾರಿ ತಪ್ಪಿದ ಮಕ್ಕಳು ಎಂದು ಬೆಂಗಳೂರಿನಲ್ಲಿ ವಿಪಕ್ಷ ನಾಯಕ ಆರ್ ಅಶೋಕ್ ಕಿಡಿ ಕಾರಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಭೇಟಿಯಾದ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಈಗಾಗಲೇ ಇಬ್ಬರೂ ಶಾಸಕರಿಗೂ ಪಕ್ಷ ನೋಟಿಸ್ ನೀಡಿದೆ.

ಎಂಪಿ ಚುನಾವಣೆ ಫಲಿತಾಂಶದ ಬಳಿಕ ಹೈಕಮಾಂಡ್ ಕ್ರಮ ಕೈಗೊಳ್ಳುತ್ತದೆ ಎಂದು ಬೆಂಗಳೂರಿನಲ್ಲಿ ವಿಧಾನಸಭೆಯ ವಿಪಕ್ಷ ನಾಯಕ ಆರ್ ಅಶೋಕ್ ಹೇಳಿಕೆ ನೀಡಿದರು. ಈ ವರ್ಷ ಬಿಬಿಎಂಪಿ ಚುನಾವಣೆ ನಡೆಸುವುದರ ಕುರಿತು ಮಾತನಾಡಿದ ಅವರು, ನಮಗೆ ಕಾಂಗ್ರೆಸ್ ಸರ್ಕಾರದ ಮೇಲೆ ನಂಬಿಕೆ ಇಲ್ಲವಾಗಿದೆ. ಚುನಾವಣೆ ಫಲಿತಾಂಶ ನೋಡಿ ಸರ್ಕಾರ ನಿರ್ಧರಿಸಬಹುದು ಮೋದಿ ಪ್ರಧಾನಿ ಆಗುತ್ತಾರಾ ಇಲ್ಲವಾ ಅಂತ ನೋ ಡಿ ನಿರ್ಧರಿಸಬಹುದು ಬಿಬಿಎಂಪಿ ಚುನಾವಣೆ ನ ಡೆಸುವ ಬಗ್ಗೆ ಸರ್ಕಾರ ತೀರ್ಮಾನ ಮಾ ಡಬಹುದು ಎಂದು ವಿಪಕ್ಷ ನಾಯಕ ಹೇಳಿಕೆ ನೀಡಿದರು.

### ವಿದೇಶಕ್ಕೆ ಪ್ರಜ್ವಲ್ ಓಡಿ ಹೋಗಲು ಬಿಟ್ಟಿದ್ದೆ ಸಿಎಂ ಸಿದ್ದರಾಮಯ್ಯ

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಇದೀಗ ವಿದೇಶದಲ್ಲಿ ತಲೆಮರಿಸಿಕೊಂಡಿದ್ದಾರೆ. ಇದಕ್ಕೆ ಸಿಎಂ ಸಿದ್ದರಾಮಯ್ಯನವರು ನಿನ್ನೆ ಪ್ರಜ್ವಲ್ ರೇವಣ್ಣ ಅವರ ಜೊತೆ ಅಶೋಕ್ ಮಾತನಾಡಿರಬಹುದು ಎಂದು ಹೇಳಿಕೆ ನೀಡಿದರು ಇವರ ಹೇಳಿಕೆಗೆ ಆರ್ ಅಶೋಕ್ ವಿದೇಶಕ್ಕೆ ಪ್ರಜ್ವಲ್ಲರನ್ನು ಓಡಿ ಹೋಗಲು ಬಿಟ್ಟಿದೆ ಸಿಎಂ ಸಿದ್ದರಾಮಯ್ಯ ಎಂದು ಆರೋಪಿಸಿದರು. ಮತದಾನ ಮಾಡಿ ಬಂದಾಗ ಬಂಧಿಸದೆ ಕತ್ತೆ ಕಾಯುತ್ತಿದ್ದರಾ? ಡೋರ್ ಕ್ಲೋಸ್ ಸಭೆ ಮಾಡಿ ನಿಯೋಜಿತ ಪ್ಲಾನ್ ಮಾಡಿದ್ರು ಪ್ರಜ್ವಲ್ ಹಿಡಿಯದಿದ್ದರೆ ಮೋದಿ ದೋಷಣೆ ಮಾಡಬಹುದು ಎಂಬ ಪ್ಲಾನ್ ಮಾಡಲಾಗಿತ್ತು. ಅದರಂತೆ ಸರ್ಕಾರ ಪ್ರಜ್ವಲ್ ರೇವಣ್ಣರನ್ನು ವಿದೇಶಕ್ಕೆ ಕಳುಹಿಸಿದೆ ಎಂದು ಆರೋಪಿಸಿದರು. ವಿದೇಶಕ್ಕೆ ಹೋಗುವ ಮುನ್ನ ನನ್ನ ಜೊತೆ ಮಾತನಾಡಿದರೆ ತನಿಖೆ ಮಾಡಲಿ.



## ಬೆಂಗಳೂರಿನ ಅವ್ಯವಸ್ಥೆಗಳ ವಿರುದ್ಧ ಬೃಹತ್ ಪ್ರತಿಭಟನೆ

- ಉದಯವಾಹಿನಿ, ಬೆಂಗಳೂರು



ಬೆಂಗಳೂರಿನ ಅವ್ಯವಸ್ಥೆಗಳ ವಿರುದ್ಧ ಇದೇ 28ರಂದು ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಪ್ರಕಟಿಸಿದರು. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ತಮ್ಮ ನೇತೃತ್ವದಲ್ಲಿ ಇಂದು ಬೆಂಗಳೂರಿನ ಸಮಸ್ಯೆಗಳ ಕುರಿತು ಚರ್ಚೆಗಾಗಿ ನಡೆಸಿದ ಸಭೆಯ ಬಳಿಕ ಅವರು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿ, ಬೆಂಗಳೂರು ನಗರದ ಸಮಸ್ಯೆಗಳಿಗೆ ಪರಿಹಾರ ದೊರಕಿಸಿ ಕೊಡುವ ನಿಟ್ಟಿನಲ್ಲಿ ಪ್ರತಿ ವಾರ್ಡಿನಲ್ಲಿ ಬಿಜೆಪಿ ವತಿಯಿಂದ ಹೋರಾಟವನ್ನು ಕೈಗೆತ್ತಿಕೊಳ್ಳುವುದಾಗಿ ತಿಳಿಸಿದರು.

ಬೆಂಗಳೂರು ಮಹಾನಗರದ ಜನತೆಗೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಬಿಜೆಪಿ ಹೋರಾಟ ನಿರಂತರವಾಗಿ ಇರಲಿದೆ. ಕೇವಲ ನಾಮಕಾವಾಸ್ತೆ ಹೋರಾಟ ಇದಲ್ಲ ಎಂದು ಸ್ಪಷ್ಟಪಡಿಸಿದರು. ಸಮಸ್ಯೆಗೆ ಪರಿಹಾರ, ಹೋರಾಟಕ್ಕೆ ಜಯ ಸಿಗಬೇಕಿದೆ. ಆ ನಿಟ್ಟಿನಲ್ಲಿ ಹೋರಾಟ ನಡೆಯಲಿದೆ ಎಂದು ವಿವರಿಸಿದರು.

ಇಂದು ನಗರದ ಎಲ್ಲಾ ಶಾಸಕರು, ಮಾಜಿ ಶಾಸಕರು, ಮಾಜಿ ಕಾರ್ಪೊರೇಟರ್ಗಳ ಸಭೆಯನ್ನು ನಡೆಸಲಾಗಿದೆ. ಬೆಂಗಳೂರು ನಗರದಲ್ಲಿ ಇವತ್ತು ಆ ಗುತ್ತಿರುವ ಅವ್ಯವಸ್ಥೆಗಳನ್ನು ಚರ್ಚಿಸಿದ್ದೇವೆ. ಕೇವಲ ಎರಡು ದಿನ ಮಳೆ ಬಂದಾಗ ಬೆಂಗಳೂರಿನ ರಸ್ತೆಗಳು ವಾಹನ ಓಡಾಡದಂತೆ ಬ್ಲಾಕ್ ಆಗಿದ್ದವು. ಬೆಂಗಳೂರು ನಗರದಲ್ಲಿ ಅತಿ ಹೆಚ್ಚು ತೆರಿಗೆ ಪಾವತಿಸುವ ಜನರಿದ್ದಾರೆ. ರಾಜ್ಯದಲ್ಲಿ ಹೊಸ ಸರಕಾರ ಬಂದ ಬಳಿಕ ಒಂದು ವರ್ಷದಲ್ಲಿ ಬೆಂಗಳೂರು ನಗರದ ಅಭಿವೃದ್ಧಿಗೆ ಒಂದು ರೂಪಾಯಿಯನ್ನೂ ಕೊಟ್ಟಿಲ್ಲ ಎಂದು ಟೀಕಿಸಿದರು.

## ಬಿಬಿಎಂಪಿ ಆಯುಕ್ತರ ಹೆಸರಲ್ಲಿ ನಕಲಿ ವಾಟ್ಸಾಪ್

- ಉದಯವಾಹಿನಿ, ಬೆಂಗಳೂರು



ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೆಸರಲ್ಲಿ ನಕಲಿ ವಾಟ್ಸಾಪ್ ತೆರೆದಿರುವ ಕಿಡಿಗೇಡಿಗಳು, ಅಧಿಕಾರಿಗಳಿಗೆ ತಪ್ಪು ಮಾಹಿತಿ ರವಾನಿಸುತ್ತಿದ್ದಾರೆ. ನಕಲಿ ನಂಬರ್ 9428053334 ಸಂಖ್ಯೆಯಿಂದ ಸಂದೇಶಗಳು ರವಾನೆಯಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ಸೈಬರ್ ಕ್ರೈಂ ಗೆ ದೂರು ನೀಡಿದ್ದಾರೆ. ಇದೆ ವೇಳೆ ಪಾಲಿಕೆ ಅಧಿಕಾರಿಗಳು ಅಲರ್ಟ್ ಆಗಿದ್ದು, ಈ ಸಂಖ್ಯೆಯಿಂದ ಕರೆ ಬಂದರೆ ಯಾವುದೇ ಸ್ಪಂದನೆ ಮಾಡಬೇಡಿ. ಒಂದು ವೇಳೆ ಈ ಸಂಖ್ಯೆಯಿಂದ ಕರೆ ಬಂದರೆ ಬಿಬಿಎಂಪಿ ಸಹಾಯವಾಣಿಗೆ ಕರೆ ಮಾಡಿ ಎಂದು ತಿಳಿಸಿದ್ದಾರೆ.

## ತಾಲ್ಲೂಕು, ಜಿಲ್ಲಾ ಪಂಚಾಯತಿ ಹಾಗೂ ಬಿಬಿಎಂಪಿ ಚುನಾವಣೆಗೆ ನಾವು ಸಿದ್ಧ

### ಅಡ್ವೋಕೇಟ್ ಜನರಲ್ ಜೊತೆ ಚರ್ಚೆ ಮಾಡಿ ಅವರು ಕಾನೂನು ಪ್ರಕಾರ ಏನು ಮಾಡಬೇಕೆಂದು ಹೇಳುತ್ತಾರೋ ಹಾಗೆ ಮಾಡುತ್ತೇವೆ: ಸಿಎಂ

- ಉದಯವಾಹಿನಿ, ಮೈಸೂರು

ಲೋಕಸಭಾ ಚುನಾವಣೆ ಫಲಿತಾಂಶದ ನಂತರ ತಾಲ್ಲೂಕು, ಜಿಲ್ಲಾ ಪಂಚಾಯತಿಗಳ ಚುನಾವಣೆ ಹಾಗೂ ಬಿಬಿಎಂಪಿ ಚುನಾವಣೆ ಕೂಡ ನಡೆಸಲಾಗುವುದು. ಸರ್ಕಾರ ಚುನಾವಣೆ ನಡೆಸಲು ಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಅವರು ಇಂದು ಮೈಸೂರಿನ ತಮ್ಮ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಉಚ್ಚ ನ್ಯಾಯಾಲಯಕ್ಕೆ ಹೋಗಲಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಅವರು ಮೇಲಿನಂತೆ ಪ್ರತಿಕ್ರಿಯೆ ನೀಡಿದರು.

ಕ್ಷೇತ್ರ ಪುನರ್ವಿಗಂಡನೆಗೆ ಜನವರಿವರೆಗೆ ಗಡುವು ಇದ್ದುದರ ಬಗ್ಗೆ ಮಾತನಾಡಿ ಈ ಬಗ್ಗೆ ಅಡ್ವೋಕೇಟ್ ಜನರಲ್ ಜೊತೆ ಚರ್ಚೆ ಮಾಡಿ ಅವರು ಕಾನೂನು ಪ್ರಕಾರ ಏನು ಮಾಡಬೇಕೆಂದು ಹೇಳುತ್ತಾರೋ ಹಾಗೆ ಮಾಡುತ್ತೇವೆ. ಪುನರ್ ವಿಂಗಡಣೆಯಾದ ಮೇಲೆ ಮೀಸ ಲಾತಿ ಮಾಡಲೇಬೇಕು ಎಂದರು.

ಈ ಬಾರಿ ಡಾ. ಯತೀಂದ್ರ ಅವರನ್ನು ವಿಧಾನ ಪರಿಷತ್ ಸದಸ್ಯ ರನ್ನಾಗಿಸಲು ಒತ್ತಡವಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಹೈ ಕಮಾಂಡ್ ನವರು ಯತೀಂದ್ರ ಅವರನ್ನು ಎಂ.ಎಲ್.ಸಿ ಮಾಡುವುದಾಗಿ ಹೇಳಿದ್ದರು. ಏನು ಮಾಡುತ್ತಾರೆ ಎಂದು ನನಗೆ ಗೊತ್ತಿಲ್ಲ. ಹೋದ ಬಾರಿ ನಾನು ವರುಣಾದಲ್ಲಿಯೇ ನಿಲ್ಲಬೇಕು ಎಂದು ತೀರ್ಮಾನವಾದಾಗ ಕ್ಷೇತ್ರ ಬಿಟ್ಟುಕೊಡಲು ಸೂಚಿಸಿದ್ದರು. ಈಗ ಏನು ಮಾಡುತ್ತಾರೆ ಎಂದು ತಿಳಿದಿಲ್ಲ ಎಂದರು.



ಪ್ರಜ್ವಲ್ ರೇವಣ್ಣ ಅವರ ಪ್ರಕರಣದಲ್ಲಿ ಡಿ.ಕೆ.ಶಿವಕುಮಾರ್ ಅವರ ಆಡಿಯೋ ಇರುವುದರಿಂದ ಅವರನ್ನೇ ವಿಚಾರಣೆ ಮಾಡಬೇಕೆಂದು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಆಗ್ರಹ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಅವರ ಅಣ್ಣನ ಮಗ ಅತ್ಯಾಚಾರ ಪ್ರಕರಣದಲ್ಲಿ ಆರೋಪಿ. ಅತ್ಯಾಚಾರದ ವಿಡಿಯೊ ಹರಿದಾಡಿತು ಎನ್ನುವುದಕ್ಕಿಂತ, ಅತ್ಯಾಚಾರ ಘೋರ ಅಪರಾಧ. ಅತ್ಯಾಚಾರದ ಸಂಗತಿಯನ್ನು ದುರ್ಬಲಗೊಳಿಸಲು ಡಿ. ಕೆ. ಶಿವಕುಮಾರ್ ಹಾಗೂ ಮತ್ತೊಬ್ಬರ ಮೇಲೆ ಹೇಳುತ್ತಿದ್ದಾರೆ. ಅವರು ಈ ನೆಲದ ಕಾನೂನಿಗೆ ಗೌರವ ಕೊಡಬೇಕು. ಅಣ್ಣನ ಮಗ ಅಪರಾಧಿಯಲ್ಲ ಆರೋಪಿ ಅಷ್ಟೇ ಎಂದಿದ್ದಾರೆ, ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಟ್ಟಂತೆ ನಾನೂ ಕೂಡ ಆರೋಪಿ ಎಂದೇ ಹೇಳಿದ್ದೇನೆ ಎಂದರು. ಪ್ರಜ್ವಲ್ ರೇವಣ್ಣ ಅವರ ಪಾಸ್ ಪೋರ್ಟ್ ರದ್ದತಿಗೆ ಮೋದಿಯವರಿಗೆ ಪತ್ರ ಬರೆದಿದ್ದು ಈವರೆಗೆ ಅವರಿಂದ ಪ್ರತಿಕ್ರಿಯೆ ಬಂದಿಲ್ಲ ಎಂದರು. ಎಲ್ಲರಿಗೂ ಪ್ರಧಾನಮಂತ್ರಿಗಳ ಕಚೇರಿಯಿಂದ ಕೂಡಲೇ ಉತ್ತರ ದೊರಕುತ್ತದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಹಾಗಂತ ನಂಬಿರುವುದೇ ನಿಮ್ಮ ತಪ್ಪು ಎಂದರು. ನಾವು ಬರೆದಿರುವ ಅನೇಕ ಪತ್ರಗಳಿಗೆ ಅವರು ಉತ್ತರ ಕೊಟ್ಟಿಲ್ಲ. ಮೋದಿಯವರು ಸೆಲೆಕ್ಟಿವ್ ಎಂದು ಹೇಳುವುದಿಲ್ಲ ಎಂದರು.

### ಮತ ನೀಡಲು ಪ್ರಚಾರ ಮಾಡಿದ್ದು ಸಂಪರ್ಕವೂ, ಅಲ್ಲವೋ

ದೇವೇಗೌಡರು ಪ್ರಜ್ವಲ ರೇವಣ್ಣ ಅವರನ್ನು ಕುಟುಂಬದಿಂದ ಹೊರಹಾಕುತ್ತೇವೆ ಎಂದಿರುವ ಬಗ್ಗೆ ಮಾತನಾಡಿ ಇವರಿಗೆ ಗೊತ್ತಿಲ್ಲದೆ ಪ್ರಜ್ವಲ ರೇವಣ್ಣ ಹೊರಟು ಹೋಗಿದ್ದಾರಾ? ಕುಮಾರಸ್ವಾಮಿ ಅವರು ಮೊದಲಿನಿಂದಲೂ ಪ್ರಜ್ವಲ್ ರೇವಣ್ಣ ನಮ್ಮ ಸಂಪರ್ಕದಲ್ಲಿ ಇಲ್ಲ ಎಂದು ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಹಾಗಾದರೆ ನನ್ನ ಮಗ ಎಂದು ಮತ ನೀಡಲು ಪ್ರಚಾರ ಮಾಡಿದ್ದು ಸಂಪರ್ಕವೂ, ಅಲ್ಲವೋ ಎಂದು ಪ್ರಶ್ನಿಸಿದರು. ಎಸ್.ಐ.ಟಿ ತನಿಖೆ ತಾತ್ವಿಕ ಅಂತ್ಯ ಪಡೆಯುವುದಿಲ್ಲ ಎಂದು ಹೆಚ್ ಡಿ ಕುಮಾರಸ್ವಾಮಿಯವರು ಹೇಳಿರುವ ಬಗ್ಗೆ ಮಾತನಾಡಿ ನಮಗೆ ಎಸ್.ಐ.ಟಿ ಬಗ್ಗೆ ಸಂಪೂರ್ಣ ವಿಶ್ವಾಸವಿದೆ. ಕುಮಾರಸ್ವಾಮಿ ಕಾಲದಲ್ಲಿ ಎಷ್ಟು ಪ್ರಕರಣಗಳನ್ನು ಎಸ್ .ಐ.ಟಿ ಗೆ ವಹಿಸಿದ್ದಾರೆ ಎನ್ನುವ ಬಗ್ಗೆ ನನಗೆ ತಿಳಿದಿಲ್ಲ. ಎಸ್.ಐ.ಟಿ ರಚನೆ ಮಾಡುವುದು ಪ್ರಕರಣದ ಬಗ್ಗೆ ಗಮನವನ್ನು ಕೇಂದ್ರೀಕರಿಸಲು ಎಂದರು.

**ಪಿಎಂ ಉತ್ತರ ಕೊಡುತ್ತಾರೆ ಎಂಬ ನಂಬಿಕೆ ಇದೆ:**

ಚುನಾಯಿತ ಸರ್ಕಾರದ ಮುಖ್ಯಮಂತ್ರಿ ಪ್ರಧಾನಿಗಳಿಗೆ ಪತ್ರ ಬರೆದಾಗ ಸ್ವಾಭಾವಿಕವಾಗಿ ಉತ್ತರ ಕೊಡುತ್ತಾರೆ ಎಂಬ ನಂಬಿಕೆ ಇದೆ. ರಾಜತಾಂತ್ರಿಕ ಪಾಸ್ ಪೋರ್ಟ್ ರದ್ದು ಮಾಡಲು ಬರೆದ ಮೊದಲ ಪತ್ರಕ್ಕೆ ಉತ್ತರ ಕೊಟ್ಟಿಲ್ಲ. ಎರಡನೇ ಪತ್ರಕ್ಕೆ ಉತ್ತರ ಕೊಡುತ್ತಾರೆನೋ ನೋಡೋಣ ಎಂದರು.

ಚುನಾವಣಾ ಫಲಿತಾಂಶಕ್ಕಾಗಿ ಇದನ್ನು ವಿಳಂಬ ಮಾಡಲಾಗುತ್ತಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ಈ ಪ್ರಶ್ನೆಯನ್ನು ಬಿಜೆಪಿಯ ಪ್ರಹ್ಲಾದ್ ಜೋಶಿ ಅವರನ್ನು ಕೇಳಿ ಎಂದರು.

**ಈ ದಿನದ ದರ** | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,244 /Gram(24ct) ₹6,640 /Gram(22ct) | ಬೆಳ್ಳಿ: ₹92.50 /Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

**ನಭವನಿಲಾದಿಗಳಂ ತೀವಿಹುದು ಶುಭರವ.**

ನಿಜಗುಣರ ಪರಮಾರ್ಥ ಗೀತೆಯ ಮಾತು. ಆಕಾಶ ಮೊದಲಾದ ಪಂಚ ಭೂತಗಳಲ್ಲಿ ಶಬ್ದ ಮೊದಲಾದ ಪಂಚ ತನ್ಮಾತ್ರಗಳು ಹಾಸುಹೊಕ್ಕಾಗಿವೆ. ಆಕಾಶದಲ್ಲಿ ಶಬ್ದ ಒಂದೇ ಗುಣ. ಇನ್ನೊಂದಿಲ್ಲ. ವಾಯುವು ಆಕಾಶ ಹಾಗೂ ಸ್ಪರ್ಶದಿಂದ ಹುಟ್ಟಿದ್ದರಿಂದ ವಾಯುವಿನಲ್ಲಿ ಶಬ್ದ ಹಾಗೂ ಸ್ಪರ್ಶ ಎಂಬ ಎರಡು ಗುಣಗಳಿವೆ. ಅಗ್ನಿಯು ವಾಯು ಹಾಗೂ ರೂಪದಿಂದ ಹುಟ್ಟಿದ್ದರಿಂದ ಅಗ್ನಿಯಲ್ಲಿ ಶಬ್ದ ಸ್ಪರ್ಶ ರೂಪ ಎಂಬ ಮೂರು ಗುಣಗಳಿವೆ. ಜಲವು ಅಗ್ನಿ ಹಾಗೂ ರಸದಿಂದ ಹುಟ್ಟಿದ್ದರಿಂದ ಜಲದಲ್ಲಿ ಶಬ್ದ ಸ್ಪರ್ಶ ರೂಪ ರಸ ಎಂಬ ನಾಲ್ಕು ಗುಣಗಳಿವೆ. ಪೃಥ್ವಿಯು ಜಲ ಹಾಗೂ ಗಂಧಗಳಿಂದ ಹುಟ್ಟಿದ್ದರಿಂದ ಪೃಥ್ವಿಯಲ್ಲಿ ಶಬ್ದ ಸ್ಪರ್ಶ ರೂಪ ರಸ ಗಂಧ ಎಂಬ ಐದು ಗುಣಗಳಿವೆ.

## ರಾಜ್ಯದ ಮದ್ಯಪ್ರಿಯರಿಗೆ ಬಿಗ್ ಶಾಕ್ ಜೂನ್ ಮೊದಲ ವಾರ ಎಣ್ಣೆ ಸಿಗೋಲ್ಲ

• ಉದಯವಾಹಿನಿ, ಬೆಂಗಳೂರು




ಜೂನ್ 1 ರಿಂದ ರಾಜ್ಯದ ಮದ್ಯಪ್ರಿಯರಿಗೆ ಮದ್ಯ ಸಿಗುವುದು ಅನುಮಾನ ಎನ್ನಲಾಗಿದೆ. ಹೌದ, ಜೂನ್ 1 ರಿಂದ 6ರ ವರೆಗೆ ವೈನ್ ಶಾಪ್, ಎಂಆರ್‌ಪಿ ಔಟ್‌ಲೇಟ್‌ಗಳು ಬಂದ್ ಆಗುತ್ತಿದ್ದಾವೆ ಎನ್ನಲಾಗಿದೆ. ಪದವೀಧರ ಕ್ಷೇತ್ರದ ಚುನಾವಣೆ, ಲೋಕಸಭಾ ಚುನಾವಣೆಯ ಮತ ಎಣಿಕೆ ಸಲುವಾಗಿ ಬೆಂಗಳೂರು ಜಿಲ್ಲಾಡಳಿತ ಮದ್ಯ ಮಾರಾಟವನ್ನ ಬಂದ್ ಮಾಡುವಂತೆ ಆದೇಶವನ್ನು ಹೊರಡಿಸಲಾಗಿದೆ.

ಇದಲ್ಲದೇ ಜೂನ್ 3 ರಂದು ಪದವೀಧರ ಕ್ಷೇತ್ರ ಚುನಾವಣೆಗೆ ಮತದಾನ ನಡೆಯುವುದರಿಂದ ಜೂನ್ 1ರ ಸಂಜೆ 4 ಗಂಟೆಯಿಂದಲೇ ಬಾರ್ ಬಂದ್ ಆಗಲಿದ್ದು, ಜೂನ್ 3 ರವರೆಗೆ ಬಂದ್ ಮಾಡಬೇಕಾಗುತ್ತೆ. ಇನ್ನೂ ಜೂನ್ 4 ರಂದು ದೇಶದ್ಯಾಂತ ಲೋಕಸಭಾ ಚುನಾವಣೆಯ ಮತ ಎಣಿಕೆ ನಡೆಯಲಿರುವ ಹಿನ್ನಲೆಯಲ್ಲಿ ಅಂದ ಕೂಡ ಮದ್ಯ ಮಾರಾಟ ಸಂಪೂರ್ಣ ಬಂದ್ ಆಗಲಿದೆ. ಜೂನ್ 6 ರಂದು ಎಂಎಲ್‌ಸಿ ಮತ ಎಣಿಕೆ ಇರೋದ್ರಿಂದ ಅಂದೂ ಸಹ ಬಾರ್ ಬಂದ್ ಮಾಡುವಂತೆ ಬೆಂಗಳೂರು ಜಿಲ್ಲಾಧಿಕಾರಿ ಆದೇಶದಲ್ಲಿ ತಿಳಿಸಿದ್ದಾರೆ. ಒಟ್ಟಿನಲ್ಲಿ ಜೂನ್ ಮೊದಲ ವಾರ ಪೂರ ಮದ್ಯ ಪ್ರಿಯರಿಗೆ ಎಣ್ಣೆ ಸಿಗುವುದು ಅನುಮಾನವಾಗಿದೆ.

## ಕೆಪಿಟಿಸಿಎಲ್‌ನಲ್ಲಿ 902 ಹುದ್ದೆಗಳ ನೇಮಕ ಆದೇಶ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) 902 ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಆದೇಶ ಹೊರಡಿಸಿದೆ.

ಮಾರ್ಚ್ 2024 ರಲ್ಲಿ, ಮಾದರಿ ನೀತಿ ಸಂಹಿತೆ ಜಾರಿಗೆ ಬರುವ ಮೊದಲು, 368 ಸಹಾಯಕ ಎಂಜಿನಿಯರ್ (ಎಲೆಕ್ಟ್ರಿಕಲ್), 17 ಸಹಾಯಕ ಎಂಜಿನಿಯರ್ (ಸಿವಿಲ್) ಮತ್ತು 15 ಕಿರಿಯ ಎಂಜಿನಿಯರ್ (ಸಿವಿಲ್) ಅಭ್ಯರ್ಥಿಗಳಿಗೆ ಕೌನ್ಸೆಲಿಂಗ್ ನಡೆಸಿ ಅವರ ನೇಮಕಾತಿ ಆದೇಶಗಳನ್ನು ನೀಡಲಾಗಿದೆ ಎಂದು ಇಲಾಖೆ ಹೇಳಿಕೆಯಲ್ಲಿ ತಿಳಿಸಿದೆ.

ಹೊಸ ಪ್ರತಿಭೆಗಳನ್ನು ಕರೆತರುವ ಮೂಲಕ ನಮ್ಮ ವಿದ್ಯುತ್ ಮೂಲಸೌಕರ್ಯವನ್ನು ಬಲಪಡಿಸಲು ನಾವು ಬದ್ಧರಾಗಿದ್ದೇವೆ. ಕೆಪಿಟಿಸಿಎಲ್ ಕರ್ನಾಟಕದಾದ್ಯಂತ ವಿಶ್ವಾಸಾರ್ಹ, ದಕ್ಷ ವಿದ್ಯುತ್ ಪ್ರಸರಣ ಸೇವೆಗಳನ್ನು ಒದಗಿಸುವುದನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಈ ನೇಮಕಾತಿ ಮಹತ್ವದ ಹೆಜ್ಜೆಯಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

## ಸ್ಟಂಟ್ ಮಾಡಿ ಶೈನ್ ಆಗಲು ರೂಲ್ಸ್ ಬ್ರೇಕ್ ಮಾಡಿದ್ರೆ, ಇದೇ ಗತಿ ನೋಡಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಇತ್ತೀಚೆಗೆ ಬೈಕ್ ಸ್ಟಂಟ್, ಕಾರಿನಲ್ಲಿ ಸ್ಟಂಟ್‌ಗಳು ಹೆಚ್ಚಾಗಿವೆ. ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿ ಹೆಚ್ಚಿನ ಲೈಕ್ಸ್ ಪಡೆಯಲು ಸುರಕ್ಷತೆ ಲೆಕ್ಕಿಸದೇ ಅನೇಕ ಸಾಹಸಗಳನ್ನು ಮಾಡುತ್ತಿದ್ದು ತಮ್ಮ ಜೀವದ ಜೊತೆಗೆ ಇನ್ನೊಬ್ಬರ ಜೀವಕ್ಕೂ ಕುತ್ತು ತರುತ್ತಿದ್ದಾರೆ. ಹೀಗಾಗಿ ಸ್ಟಂಟ್ ಮಾಡಿ ಸಂಚಾರಿ ನಿಯಮ ಉಲ್ಲಂಘಿಸಿದರೆ ಏನಾಗಲಿದೆ ಎಂಬ ಬಗ್ಗೆ ಬೆಂಗಳೂರು ಸಂಚಾರಿ ಪೊಲೀಸರು ಪೋಸ್ಟ್ ಹಂಚಿಕೊಂಡಿದ್ದು ರಸ್ತೆಯಲ್ಲಿ ಸ್ಟಂಟ್ ಮಾಡಿದರೆ ದಂಡ ಹಾಕುವುದು ಪಕ್ಕಾ ಎಂದು ತಿಳಿಸಿದ್ದಾರೆ. ತಿಲಕ್ ನಗರ ಹುಡುಗರು ಒಬ್ಬರ ಮೇಲೊಬ್ಬರು ಕೂತು ಸ್ಕೂಟರ್‌ನಲ್ಲಿ ಸವಾರಿ ಮಾಡಿದ್ದು ಪೊಲೀಸರು ವಾಹನ ಪತ್ತೆಹಚ್ಚಿ ದಂಡ ವಿಧಿಸಿದ್ದಾರೆ. ಹೀಗಾಗಿ ಸಂಚಾರಿ ನಿಯಮ ಉಲ್ಲಂಘನೆ ಮಾಡುವ ಕೆಲಸ ಮಾಡಲೇಬೇಡಿ.

## ಓವರ್ ಟೇಕ್ ಮಾಡಿದ್ದಕ್ಕೆ ಕಿರಿಕ್ ಬಸ್ ಚಾಲಕನಿಗೆ ಚಾಕು ಇರಿತ

• ಉದಯವಾಹಿನಿ, ನೆಲಮಂಗಲ

ಟಾಟಾಏಸ್ ವಾಹನವನ್ನು ಓವರ್‌ಟೇಕ್ ಮಾಡಿದ್ದಕ್ಕೆ ಸಾರಿಗೆ ಬಸ್ ಚಾಲಕನಿಗೆ ಚಾಕುವಿನಿಂದ ಇರಿದ ಆರೋಪದ ಮೇಲೆ ಟಾಟಾಏಸ್ ಚಾಲಕನನ್ನು ಪೊಲೀಸರು ಬಂಧಿಸಿದ್ದಾರೆ. ಭರತರೆಡ್ಡಿ ಬಂಧಿತ ಟಾಟಾಏಸ್ ಚಾಲಕ. ಚಾಕು ಇರಿತದಿಂದ ಗಂಭೀರವಾಗಿ ಗಾಯಗೊಂಡಿರುವ ಸಾರಿಗೆ ಬಸ್ ಚಾಲಕ ಶಿವಪ್ಪ ಮಡಿವಾಳ ಎಂದು ಗುರುತಿಸಲಾಗಿದೆ. ಕೊಪ್ಪಳದಿಂದ ಬೆಂಗಳೂರಿಗೆ ಸಾರಿಗೆ ಬಸ್ ಬರುತ್ತಿದ್ದು ದಾಬಸ್‌ಪೇಟೆ ಬಳಿಕ ಟಾಟಾ ಏಸ್ ವಾಹನವನ್ನು ಓವರ್‌ಟೇಕ್ ಮಾಡಲು ಸಾರಿಗೆ ಚಾಲಕ ಯತ್ನಿಸಿದ್ದಾನೆ.

ಇದರಿಂದ ಆಕ್ರೋಶಗೊಂಡ ಟಾಟಾಏಸ್ ಚಾಲಕ ಭರತ್‌ರೆಡ್ಡಿ ಏಕಾಏಕಿ ಸಾರಿಗೆ ಬಸ್‌ನ ಚಾಲಕ ಶಿವಪ್ಪ ಮಡಿವಾಳರಿಗೆ ಇರಿದು ಪರಾರಿಯಾಗಲು ಯತ್ನಿಸಿದ್ದಾನೆ. ಕೂಡಲೇ ಸಾರ್ವಜನಿಕರು ಭರತ್‌ರೆಡ್ಡಿಯನ್ನು ಹಿಡಿದು ಪೊಲೀ ಸರಿಗೆ ಒಪ್ಪಿಸಿದ್ದಾರೆ. ಬಸ್ ಚಾಲಕ ಶಿವಪ್ಪ ಮಡಿವಾಳ ಅವರನ್ನು ತುಮಕೂರಿನ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಬಗ್ಗೆ ಪೊಲೀಸರು ದೂರು ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಶಿವರಾಮ್ ಹೆಬ್ಬಾರ್ ನಮ್ಮ ಫ್ರೆಂಡ್ ಎಂದ ಡಿಕೆಶಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್ ನಮ್ಮ ಫ್ರೆಂಡ್ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವರಾಮ್ ಹೆಬ್ಬಾರ್ ಆಗಾಗ ಬಂದು ಭೇಟಿಯಾಗುತ್ತಾರೆ. ಇದರಲ್ಲಿ ಯಾವುದೇ ವಿಶೇಷವಿಲ್ಲ. ತಮ್ಮ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಬಂದು ಚರ್ಚೆ ಮಾಡುತ್ತಾರೆಂದು ತಿಳಿಸಿದರು.

ಸಂಸದ ಪ್ರಜ್ವಲ್ ರೇವಣ್ಣ ಬರಲಿ ಎಂದು ದೇವೇಗೌಡ ಪತ್ರ ವಿಚಾರದ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ನಾನು ಈ ವಿಷಯದಲ್ಲಿ ಕಮೆಂಟ್ ಮಾಡಲು ಹೋಗುವುದಿಲ್ಲ, ಇದು ಅವರ ಕುಟುಂಬದ ವಿಚಾರ ಎಂದರು. ಇನ್ನು ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ ಅವರ ಟೀಕೆ ಬಗ್ಗೆ ಪ್ರತಿಕ್ರಿಯಿಸಿದ ಅವರು ಟೀಕೆ ಮಾಡುವವರು ಟೀಕೆ ಮಾಡಲಿ ಆಮೇಲೆ ಮಾತಾಡ್ತೇನೆ ಎಂದರು.

# ಕಾಮೆಡ್ ಕೆ ಫಲಿತಾಂಶ ಪ್ರಕಟ; ಬಾಲಸತ್ಯ ಸರವಣನ್ ಫಸ್ಟ್ ರ‍್ಯಾಂಕ್

### ಅಭ್ಯರ್ಥಿಗಳು ಪರೀಕ್ಷಾ ಫಲಿತಾಂಶವನ್ನು ಕಾಮೆಡ್‌ಕೆ www.comedk.org ಅಧಿಕೃತ ವೆಬ್‌ಸೈಟ್‌ನಲ್ಲಿ ವೀಕ್ಷಿಸಬಹು

• ಉದಯವಾಹಿನಿ, ಬೆಂಗಳೂರು

ಕಾಮೆಡ್ ಕೆ ನಡೆಸಿದ್ದ ಯುಜಿಇಟಿ ಪರೀಕ್ಷೆ ಫಲಿತಾಂಶ ಮೇ 24ರ ಶುಕ್ರವಾರ ಮಧ್ಯಾಹ್ನ ಪ್ರಕಟಗೊಂಡಿದೆ. ಬೆಂಗಳೂರಿನ ಬಾಲಸತ್ಯ ಸರವಣನ್ ಪ್ರಥಮ ಸ್ಥಾನ ಗಳಿಸಿದ್ದಾರೆ. ಅಭ್ಯರ್ಥಿಗಳು ಪರೀಕ್ಷಾ ಫಲಿತಾಂಶವನ್ನು ಕಾಮೆಡ್‌ಕೆ www.comedk.org ಅಧಿಕೃತ ವೆಬ್‌ಸೈಟ್‌ನಲ್ಲಿ ವೀಕ್ಷಿಸಬಹುದಾಗಿದೆ. ರ‍್ಯಾಂಕ್ ಮತ್ತು ಸ್ಕೋರ್ ಕಾರ್ಡ್‌ಗಳನ್ನು 24ರ ಮಧ್ಯಾಹ್ನ 3 ಗಂಟೆಯಿಂದ ಅಭ್ಯರ್ಥಿಗಳಿಗೆ ಲಭ್ಯವಿರುತ್ತವೆ. ಮೊದಲ 10 ರ‍್ಯಾಂಕ್ ಪಡೆದವರಲ್ಲಿ 8 ಅಭ್ಯರ್ಥಿಗಳು ಕರ್ನಾಟಕದವರೇ ಆಗಿದ್ದಾರೆ.

ಕರ್ನಾಟಕದ 150 ಖಾಸಗಿ ಎಂಜಿನಿಯರಿಂಗ್ ಕಾಲೇಜು, ದೇಶದ ಕೆಲವು ಕಡೆ ಇರುವ 40 ಖಾಸಗಿ ವಿವಿಗಳಲ್ಲಿನ ಸುಮಾರು 22 ಸಾವಿರ ಎಂಜಿನಿಯರಿಂಗ್ ಸೀಟುಗಳ ಪ್ರವೇಶಾತಿಗಾಗಿ ಈ ಅರ್ಹತಾ ಪರೀಕ್ಷೆಯನ್ನು ನಡೆಸಲಾಗಿತ್ತು. ದೇಶದ 1,03,799 (ಶೇಕಡಾ 87.96) ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆದಿದ್ದರು. ವಿದ್ಯಾರ್ಥಿಗಳು ತಮ್ಮ ಶ್ರೇಯಾಂಕದ ಪಟ್ಟಿಯನ್ನು ಪರಿಶೀಲಿಸಿಕೊಂಡು ಸ್ಕೋರ್ ಕಾರ್ಡ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.


ಉದಯವಾಹಿನಿ ಚಿತ್ರ

2024ನೇ ಸಾಲಿನ ಎಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಮೇ 12 ರಂದು ಪರೀಕ್ಷೆ ನಡೆದಿತ್ತು. ಕಾಮೆಡ್ ಕೆ ಕೀ ಉತ್ತರಗಳನ್ನು ಮೇ 21ರಂದು ಬಿಡುಗಡೆ ಮಾ ಡಿತ್ತು. ದೇಶಾದ್ಯಾಂತ 191 ನಗರಗಳಲ್ಲಿರುವ 264 ಪರೀಕ್ಷಾ ಕೇಂದ್ರಗಳಲ್ಲಿ ಮೂರು ಸೆಷನ್‌ಗಳಲ್ಲಿ ಆನ್‌ಲೈನ್‌ನಲ್ಲಿ ಪರೀಕ್ಷೆ ನಡೆಸಲಾಗಿತ್ತು. ಎಂಜಿನಿಯರಿಂಗ್ ಯುಜಿ ಸೀಟುಗಳನ್ನು ಕೋರಿ 1,18,005 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಈ ಪೈಕಿ ಸುಮಾರು 1,03,799 ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದರು. 35,124 ಮಂದಿ ಕರ್ನಾಟಕದವರು ಮತ್ತು 68,675 ಕರ್ನಾಟಕೇತರ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆದಿದ್ದರು.

**COMEDK UGET ಫಲಿತಾಂಶ 2024 ಪರಿಶೀಲನೆ ಹೇಗೆ?**

- ಹಂತ 1: ಕಾಮೆಡ್‌ಕೆ ಪರೀಕ್ಷಾ ಪೋರ್ಟಲ್‌ಗೆ ಭೇಟಿ ನೀಡಿ.
- ಹಂತ 2: COMEDK UGET 2024 ಫಲಿತಾಂಶದ ಲಾಗಿನ್ ಲಿಂಕ್ ಮೇಲೆ ಕ್ಲಿಕ್ ಮಾಡಿ.
- ಹಂತ 3: ನಿಮ್ಮ ಲಾಗಿನ್ ರುಜುವಾತುಗಳನ್ನು ನಮೂದಿಸಿ - ಅಪ್ಲಿಕೇಶನ್ ಸಂಖ್ಯೆ ಅಥವಾ ಬಳಕೆದಾರ ID, ಪಾಸ್‌ವರ್ಡ್ ಮತ್ತು ನಂತರ ಸಲ್ಲಿಸು ಮೇಲೆ ಕ್ಲಿಕ್ ಮಾಡಿ.
- ಹಂತ 4: COMEDK UGET ಫಲಿತಾಂಶ 2024 ಪರದೆಯ ಮೇಲೆ ಕಾಣಿಸುತ್ತದೆ.
- ಹಂತ 5: ಕೀ ಉತ್ತರವನ್ನು ಪರಿಶೀಲಿಸಿ, ಡೌನ್‌ಲೋಡ್ ಮಾಡಿ.

**ಇಂದಿನಿಂದಲೇ ಕೌನ್ಸೆಲಿಂಗ್ ನೋಂದಣಿ ಆರಂಭ**

ಕೌನ್ಸೆಲಿಂಗ್ ನೋಂದಣಿ, ಡಾಕ್ಯುಮೆಂಟ್ ಅಪ್ಲೋಡ್ ಮೇ 24 ರ ಸಂಜೆ 4 ರಿಂದ ಪ್ರಾರಂಭವಾಗುತ್ತದೆ. ಅಭ್ಯರ್ಥಿಗಳ ಶೇಕಡವಾರು ಅಂಕ, ರ‍್ಯಾಂಕ್ ಆಧಾರದ ಮೇಲೆ ಶಾರ್ಟ್ ಲಿಸ್ಟ್ ಮಾಡಿ ಕೌನ್ಸಿಲಿಂಗ್ ನಡೆಸುವುದಾಗಿ ಕಾಮೆಡ್‌ಕೆ ತಿಳಿಸಿದೆ.


ಕರ್ನಾಟಕದಲ್ಲಿರುವ 150 ಖಾಸಗಿ ಎಂಜಿನಿಯರಿಂಗ್ ಕಾಲೇಜು ಮತ್ತು ದೇಶದ ವಿವಿಧ ಕಡೆ ಇರುವ 40 ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ಯಾವ ಕಡೆಯಲ್ಲಾದರೂ ಪ್ರವೇಶ ಪಡೆಯಬೇಕೆಂದರೆ ಇಲ್ಲಿ ನೋಂದಣಿಯನ್ನು ಮಾಡಿಕೊಂಡಿರಬೇಕು.

**ಟಾಪ್ 10 ರ‍್ಯಾಂಕ್ ಪಡೆದವರು**

- ಬಾಲಸತ್ಯ ಸರವಣನ್- ಕರ್ನಾಟಕ
- ದೇವಾಂಶ್ ತ್ರಿಪಾಠಿ ಕರ್ನಾಟಕ
- ಸನಾ ತಬಸ್ಸುಮ್ ಕರ್ನಾಟಕ
- ಪ್ರಕೇತ್ ಗೋಯೆಲ್- ಕರ್ನಾಟಕ
- ಮಾನಸ್ ಸಿಂಗ್ ರಜಪೂತ- ಹಿಮಾಚಲ ಪ್ರದೇಶ
- ಗಾನಿಪಿಸೆಟ್ಟಿ ನಿಶ್ಚಲ್- ಆಂಧ್ರಪ್ರದೇಶ
- ನಿಕೇತ್ ಪ್ರಕಾಶ್ ಅಚಂತಾ- ಕರ್ನಾಟಕ
- ನೇಹಾ ಪ್ರಭು -ಕರ್ನಾಟಕ
- ಜಗದೀಶ್ ರೆಡ್ಡಿ ಮಾರ್ಲ -ಕರ್ನಾಟಕ
- ಈಶ್ವರ್ ಚಂದ್ರ ರೆಡ್ಡಿ ಮುಲ್ಕಾ- ಕರ್ನಾಟಕ

## ಪ್ರಜ್ವಲ್‌ಗೆ ಶೋಕಾಸ್ ನೋಟಿಸ್ ಜಾರಿ

• ಉದಯವಾಹಿನಿ, ಬೆಂಗಳೂರು



ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಸನ ಸಂಸದ ಪ್ರಜ್ವಲ ರೇವಣ್ಣ ಅವರ ರಜತಾಂತ್ರಿಕ ಪಾಸ್ಪೋರ್ಟ್ ರದ್ದು ಮಾಡುವಂತೆ ಎಸ್‌ಐಟಿ ಕೇಂದ್ರಕ್ಕೆ ಪತ್ರ ಬರೆದಿರುವ ಬೆನ್ನಲ್ಲೇ ಅಲರ್ಟ್ ಆಗಿರುವ ವಿದೇಶಾಂಗ ಸಚಿವಾಲಯ ಇದೀಗ ಉತ್ತರ ಕೊಡುವಂತೆ ಪ್ರಜ್ವಲ್ ರೇವಣಗೆ ಶೋಕಾಸ್ ನೋಟಿಸ್ ಜಾರಿ ಮಾಡಿದೆ ಎಂದು ತಿಳಿದುಬಂದಿದೆ. ಹೌದು ಪ್ರಜ್ವಲ್ ರೇವಣ್ಣಗೆ ಶೋಕಾಸ್ ನೋಟಿಸ್ ಜಾರಿ ಮಾಡಲಾಗಿದೆ. ವಿದೇಶಾಂಗ ಸಚಿವಾಲಯ ನೋಟಿಸ್ ನೀಡಿದೆ ಎಂದು ತಿಳಿದುಬಂದಿದೆ. ಪಾಸ್ಪೋರ್ಟ್ ರದ್ದು ಮಾಡುವಂತೆ ಎಸ್‌ಐಟಿ ಪತ್ರ ಬರೆದಿತ್ತು. ಈ ಹಿನ್ನೆಲೆಯಲ್ಲಿ ಖುಖಿ ಪತ್ರ ಬರೆದ ಬೆನ್ನಲ್ಲೆ ವಿದೇಶಾಂಗ ಸಚಿವಾಲಯ ಅಲರ್ಟ್ ಆಗಿದ್ದು ಪ್ರಜ್ವಲ್‌ಗೆ ಇದೀಗ ಶೋಕಸ್ ನೋಟಿಸ್ ಜಾರಿ ಮಾಡಿ ಈ ಮೂಲಕ ವಿದೇಶಾಂಗ ಸ ಚಿವಾಲಯ ಉತ್ತರ ಕೇಳಿದೆ ಎಂದು ತಿಳಿದುಬಂದಿದೆ.

ಯಾವ ಕಾರಣಕ್ಕೆ ವಿದೇಶಕ್ಕೆ ಹೋಗಿದ್ದೇನೆ. ಯಾ ವ ಕಾರಣಕ್ಕೆ ವಿದೇಶದಲ್ಲಿದ್ದೇನೆ. ನನ್ನ ಕೆಲಸ ಏನು ಯಾವಾಗ ಬಂದು ಹಾಜರಾಗುತ್ತೇನೆ ಎಂಬುದರ ಕುರಿತು ಶೋಕಾಸ್ ನೋಟಿಸ್‌ಗೆ ಪ್ರಜ್ವಲ್ ರೇವಣ್ಣ ಅವರು ಉತ್ತರಿಸಬೇಕಾಗುತ್ತದೆ. ಹೀಗಾಗಿ ಈಗಾಗಲೇ ಪ್ರಜ್ವಲ್ ರೇವಣೆಗೆ ನೋಟಿಸ್ ಮೇಲೆ ನೋಟಿಸ್ ನೀಡಲಾಗಿದ್ದು ಇದಕ್ಕೆ ಯಾವ ರೀತಿ ಉತ್ತರಿಸುತ್ತಾರೆ ಎಂದು ಕಾದು ನೋಡಬೇಕಾಗಿದೆ

## ದೇವೇಗೌಡ್ರೇ ಮೊಮ್ಮಗ ಪ್ರಜ್ವಲ್ ನನ್ನು ವಿದೇಶಕ್ಕೆ ಕಳುಹಿಸಿದ್ದಾರೆ: ಸಿಎಂ

• ಉದಯವಾಹಿನಿ, ಬೆಂಗಳೂರು

ಹೆಚ್.ಡಿ.ದೇವೇಗೌಡರೇ ಮೊಮ್ಮಗ ಪ್ರಜ್ವಲ್‌ನನ್ನು ವಿದೇಶಕ್ಕೆ ಕಳುಹಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಆರೋಪ ಮಾಡಿದ್ದಾರೆ.ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ತಮ್ಮ ಮೊಮ್ಮಗ ಪ್ರಜ್ವಲ್ ರೇವಣ್ಣ ಜರ್ಮನಿಗೆ ಪಲಾಯನ ಮಾಡಲು ಸಹಾಯ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋ ಪಿಸಿದ್ದಾರೆ. ಲೈಂಗಿಕ ಕಿರುಕುಳ ಆರೋಪದ ಮೇಲೆ ಪ್ರಜ್ವಲ್ ಎಸ್‌ಐಟಿ ತನಿಖೆಯನ್ನು ಎದುರಿಸುತ್ತಿದ್ದಾರೆ.



ದೇವೇಗೌಡರೇ ಪ್ರಜ್ವಲ್ ಅವರನ್ನು ಕಳುಹಿಸಿದ್ದಾರೆ ಎಂದು ನಾನು ಭಾವಿಸುತ್ತೇನೆ. ಈಗ ಅವರು ಬರೆದಿರುವ ಪತ್ರ ಸಾರ್ವಜನಿಕ ಬಳಕೆಗಾಗಿ ಮಾತ್ರ ಎಂದು ಸಿದ್ದರಾಮಯ್ಯ ಸುದ್ದಿಗಾರರಿಗೆ ತಿಳಿಸಿದರು. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ತಮ್ಮ ಮೊಮ್ಮಗನಿಗೆ ಬಹಿರಂಗ ಪತ್ರ ಬರೆದು, ಶರಣಾಗುವಂತೆ ಎಚ್ಚರಿಕೆ ನೀಡಿದ್ದಾರೆ. ಮೇ 18ರಂದು ನಾನು ಪೂಜೆ ಸ ಲ್ಲಿಸಲು ದೇವಸ್ಥಾನಕ್ಕೆ ತೆರಳುತ್ತಿದ್ದಾಗ ಪ್ರಜ್ವಲ್ ರೇವಣ್ಣ ಬಗ್ಗೆ ಮಾಧ್ಯಮ ಗಳೊಂದಿಗೆ ಮಾತನಾಡಿದ್ದೆ.

**ಮೊಮ್ಮಗನಿಗೆ ಬಹಿರಂಗ ಪತ್ರ**

ಅವರು ನನಗೆ, ನನ್ನ ಇಡೀ ಕುಟುಂಬಕ್ಕೆ, ನನ್ನ ಸಹೋದ್ಯೋಗಿಗಳಿಗೆ, ಸ್ನೇಹಿತರಿಗೆ ಮತ್ತು ಪಕ್ಷದ ಕಾರ್ಯಕರ್ತರಿಗೆ ಉಂಟುಮಾಡಿದ ಆಘಾತ ಮತ್ತು ನೋವಿನಿಂದ ಚೇತರಿಸಿಕೊಳ್ಳಲು ನನಗೆ ಸ್ವಲ್ಪ ಸಮಯ ಹಿಡಿಯಿತು.

ತಪ್ಪಿತಸ್ಥನೆಂದು ಸಾಬೀತಾದರೆ ಕಾನೂನಿನ ಅಡಿಯಲ್ಲಿ ಅವನಿಗೆ ಕಠಿಣ ಶಿಕ್ಷೆ ನೀಡಬೇಕು ಎಂದು ನಾನು ಈಗಾಗಲೇ ಹೇಳಿದ್ದೇನೆ ಎಂದು ದೇವೇಗೌಡರು ತಮ್ಮ ಸಾರ್ವಜನಿಕ ಪತ್ರದಲ್ಲಿ ಬರೆದಿದ್ದಾರೆ.

## ಘಮಘಮ ಮಾವು , ಹಲವು ಬಗೆಯ ಹಲಸು, ಮಾವು, ಹಲಸು ಮೇಳ!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಲಾಲ್‌ಬಾಗ್‌ನಲ್ಲಿ ಜೂ.10ರವರೆಗೆ ಮಾವು-ಹಲಸಿನ ಮೇಳ ನಡೆಯಲಿದೆ.

ಸತತ 18 ದಿನಗಳ ಕಾಲ ನಡೆಯುವ ಈ ಮೇಳವನ್ನು ತೋಟಗಾರಿಕಾ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿದೆ. ಸುಮಾರು 97 ಮಳಿಗೆಗಳ ವ್ಯವಸ್ಥೆ ಮಾಡಲಾಗಿದ್ದು ಮೇಳದಲ್ಲಿ ವಿವಿಧ ಬಗೆಯ ಮಾವಿನ ತಳಿಗಳು ಲಭ್ಯ ದೊರೆಯಲಿವೆ.ಈ ಮೇಳವು ಬೆಳಗ್ಗೆ 7 ರಿಂದ ಸಂಜೆ 7ರವರೆಗೆ ಈ 18 ದಿನಗಳ ಕಾಲ ನಡೆಯಲಿದೆ. ಮೇಳದಲ್ಲಿ ಬಾದಾಮಿ, ಮಲ್ಲಿಕಾ, ನೀಲಂ, ತೋತಾಪುರಿ, ರಸಪುರಿ, ಸಕ್ಕರೆ ಗುತ್ತಿ ಸೇರಿದಂತೆ ಇತರೆ ತಳಿಗಳ ಮಾವು ಹಲಸಿನ ಮಾರಾಟ ಮಾಡಲಾಗುತ್ತಿದೆ. ಮಾವು-ಹಲಸು ಬೆಳೆಗಾರರು ಮತ್ತು ಗ್ರಾಹಕರ ನಡುವೆ ನೇರ ಸಂಪರ್ಕ ಕಲ್ಪಿಸಿ ಬೆಳೆಗಾರರಿಗೆ ಯೋಗ್ಯ ಬೆಲೆ, ಗ್ರಾಹಕರಿಗೆ ಗುಣಮಟ್ಟದ ಹಣ್ಣುಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಈ ಮೇಳವನ್ನು ಆಯೋಜಿಸಲಾಗಿದೆ.

## ಪ್ರಜ್ವಲ್‌ಗೆ ಪಾಸ್ಪೋರ್ಟ್ ನೀಡಿದ್ದು ಕೇಂದ್ರ ಕಾಂಗ್ರೆಸ್ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ

• ಉದಯವಾಹಿನಿ, ಬೆಂಗಳೂರು




ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಜ್ವಲ್ ವಿದೇಶಕ್ಕೆ ಹೋಗಲು ಆತನಿಗೆ ಪಾಸ್ಪೋರ್ಟ್ ನೀಡಿದ್ದು ಕೇಂದ್ರ ಸರ್ಕಾರ ತಾನೇ ಹಾಗಾದರೆ ಕಾಂಗ್ರೆಸ್ ಮೇಲೆ ಗೂಬೆ ಕೂರಿಸುವುದು ಯಾಕೆ ಎಂದು ಕಾಂಗ್ರೆಸ್‌ನ ಹಿರಿಯ ನಾಯಕ ಎಸ್‌ಆರ್ ಪಾಟೀಲ್ ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆನ್ ಡ್ರೈವ್ ಕೇಸ್ ನಲ್ಲಿ ಎರಡು ಬಾರಿ ಪತ್ರ ಬರೆದಿದ್ದಾರೆ. ಎರಡು ಬಾರಿ ಪತ್ರ ಬರೆದರು ಪಾಸ್ಪೋರ್ಟ್ ರದ್ದಾಗಿಲ್ಲ. ಪಾಸ್ ಪೋರ್ಟ್ ರದ್ದು ಮಾಡದಿರುವುದು ಯಾರ ತಪ್ಪು ಎಂದು ಕಾಂಗ್ರೆಸ್ ಹಿರಿಯ ನಾಯಕ ಎಸ್‌ಆರ್ ಪಾಟೀಲ್ ಪ್ರಶ್ನಿಸಿದ್ದಾರೆ. ಬಾಯಿಗೆ ಬಂದಂತೆ ಮಾತಾಡಿ ಗೂಬೆ ಕೂರಿಸುವುದು ಒಳ್ಳೆಯದಲ್ಲ. ಕಾನೂ ನಿನ ಮುಂದೆ ಎಲ್ಲರೂ ಕೂಡ ಒಂ ದೇ. ಪ್ರಜ್ವಲ್‌ಗೆ ಪಾಸ್ಪೋರ್ಟ್ ನೀ ಡಿದ್ಯಾರು? ಕೇಂದ್ರ ಸರ್ಕಾರ ತಾನೇ? ಪ್ರಜ್ವಲ್ ವಿದೇಶಕ್ಕೆ ಹೋಗಿದ್ದು ಎಫ್‌ಐಆರ್ ಆದಮೇಲೆ ಅಲ್ಲ. ಎಫ್‌ಐಆರ್ ಗಿಂತ ಮೊದಲೇ ಆತ ವಿದೇಶಕ್ಕೆ ಹೋಗಿದ್ದಾನೆ. ದೇವೇ ಗೌಡರಿಗೆ ಕಳಂಕ ತರವ ಕೆಲಸ ನಮ್ಮ ಪಕ್ಷ ಮಾ ಡಿಲ್ಲ ಪ್ರಜ್ವಲ್‌ಗೆ ತಪ್ಪು ಮಾಡುವಂತ ಕಾಂಗ್ರೆಸ್ ಸ ಲಹೆ ನೀಡಿತ್ತಾ? ಎಂದು ಬೆಂಗಳೂರಿನಲ್ಲಿ ಕಾಂಗ್ರೆಸ್ ನಾಯಕ ಎಸ್‌ಆರ್ ಪಾಟೀಲ್ ಕಿಡಿಕಾರಿದರು.

## ಮುಂಗಾರು ಮುನ್ನವೇ ರಾಜ್ಯದಲ್ಲಿ ಮಳೆಯ ಆರ್ಭಟ

• ಉದಯವಾಹಿನಿ, ಬೆಂಗಳೂರು



ಮುಂಗಾರು ಮುನ್ನವೇ ರಾಜ್ಯದಲ್ಲಿ ಮಳೆಯ ಆರ್ಭಟ ಹೆಚ್ಚಾಗಿದೆ. ತೀವ್ರ ಬರಗಾಲದಿಂದಾಗಿ ಬೋರ್‌ವೆಲ್‌ಗಳು ಬತ್ತಿಹೋಗಿ ಜನರು ಕುಡಿಯುವ ನೀರಿಗೂ ಹಾಗೂ ಬೆಳೆದ ಬೆಳೆಗಳನ್ನು ರಕ್ಷಣೆ ಮಾಡಲು ರೈತರುಪರದಾಡಬೇಕಾಗಿತ್ತು. ಆದರೆ ರಾಜ್ಯದಲ್ಲಿ ಈ ಬಾರಿ ಶೇ.26 ಹೆಚ್ಚು ಪೂರ್ವ ಮುಂಗಾರು ಅಬ್ಬರಿಸಿದೆ.ಕಳೆದ ಬಾರಿಗಿಂತ ಈ ಬಾರಿ ಪೂರ್ವ ಮುಂಗಾರು ಮಳೆ ಪ್ರಮಾಣ ಹೆಚ್ಚಳವಾಗಿದೆ. ಬಂಗಾಳಕೊಲ್ಲಿ ವಾಯುಭಾರ ಕುಸಿತದಿಂದ ಈ ಬಾರಿ ರಾಜ್ಯದಲ್ಲಿ ಜೂನ್ ಮೊದಲ ವಾರದಲ್ಲಿ ಮುಂಗಾರು ಆರಂಭವಾಗುವ ಸಾಧ್ಯತೆ ಇದೆ ಎನ್ನಲಾಗಿದೆ. ಇದೀಗ ಸುರಿಯುತ್ತಿರುವ ಮಳೆಯ ಹಿನ್ನೆಲೆಯಲ್ಲಿ ರೈತರು ಹೊಲಗಳಲ್ಲಿ ಬಿತ್ತನೆ ಕಾರ್ಯಕ್ಕೆ ಮುಂದಾಗಿದ್ದಾರೆ. ಇತ್ತ ನೀರಿಲ್ಲದೆ ಒಣಗಿಹೋಗಿದ್ದ ಕೆರೆಕಟ್ಟೆಗಳಿಗೆ ಮಳೆಯಿಂದ ಹೊಸ ಕಳೆಬಂದಿದೆ.

## ರಸ್ತೆ ಬದಿ ಅಂಗಡಿಗಳ ತೆರವು

• ಉದಯವಾಹಿನಿ, ನೆಲಮಂಗಲ

ವಾಹನ ದಟ್ಟಣೆ ಉಂಟಾಗುತ್ತದೆ ಎಂದು ರಸ್ತೆ ಬದಿ ವ್ಯಾಪಾರಿಗಳನ್ನು ಹಾಗೂ ಅಂಗಡಿಗಳ ಮಾಲೀಕರು ಮಾಡಿಕೊಂಡಿದ್ದ ಒತ್ತುವರಿಯನ್ನು ನಗರಸಭೆ ಅಧಿಕಾರಿಗಳು ತೆರವುಗೊಳಿಸಿದರು.

ಪಟ್ಟಣದ ಸೊಂಡೇಕೊಪ್ಪ ರಸ್ತೆಯಲ್ಲಿ ತಳ್ಳು ಗಾಡಿಯಲ್ಲಿ ವ್ಯಾಪಾರ ಮಾಡುತ್ತಿದ್ದವರು, ರಸ್ತೆಗೆ ಅಂಗಡಿ ವಿಸ್ತರಿಸಿಕೊಂಡವನ್ನು ನಗರಸಭೆ ಅಧಿಕಾರಿಗಳು, ಆರೋಗ್ಯಾಧಿಕಾರಿಗಳು ಪೊಲೀಸರ ಸಹಾಯದಿಂದ ತೆರವುಗೊಳಿಸಿದರು. ತಳ್ಳುಗಾಡಿಗಳನ್ನು ಕಸದ ಗಾಡಿಯಲ್ಲಿ ತುಂಬಿಸಿದರು.


ಉದಯವಾಹಿನಿ ಚಿತ್ರ

ಇಲ್ಲೇ ಏಕೆ ತೆರವು ಮಾಡುತ್ತಿದ್ದೀರಿ? ಎಲ್ಲಾ ಕಡೆ ಯಾಕೆ ಕ್ರಮ ಕೈಗೊಳ್ಳುತ್ತಿಲ್ಲ ಬಡವರಿಗೆ ಅನ್ಯಾಯ ಮಾಡುತ್ತಿದ್ದೀರಿ' ಎಂದು ಸ್ಥಳೀಯರು ಅಧಿಕಾರಿಗಳೊಂದಿಗೆ ವಾಗ್ವಾದ ನಡೆಸಿದರು. ಪೊಲೀಸರು ವಾತಾವರಣವನ್ನು ತಿಳಿಗೊಳಿಸಿದರು.

ಅಂಗಡಿಗಳ ಮುಂದೆ ಇದ್ದ ಸಾಮಗ್ರಿಗಳನ್ನು ಕೂಡ ಅಧಿಕಾರಿಗಳು ತೆರವುಗೊಳಿಸಿದರು. ರಸ್ತೆಯನ್ನು ಅಳತೆ ಮಾಡಬೇಕು. ಎಲ್ಲಿಯವರೆಗೆ ರಸ್ತೆ ಇದೆ ಎಲ್ಲಿ ಪಾದಚಾರಿ ಮಾರ್ಗ ಇದೆ ಎಂಬುದನ್ನು ಗುರುತಿಸಿ ನೋಟಿಸ್ ನೀಡಿದರೆ ಅನುಕೂಲವಾಗುತ್ತದೆ.

> ಮೊದಲು ಪಾದಚಾರಿ ಮಾರ್ಗ ನಿರ್ಮಾಣ ಮಾಡಿ. ಈಗಾಗಲೇ ರಸ್ತೆ ವಿಸ್ತರಣೆಯಿಂದ ನಾವು ಸಾಕಷ್ಟು ಜಾಗ ಕಳೆದುಕೊಂಡಿದ್ದೇವೆ. ಹೀಗೆ ಏಕಾಏಕಿ ಬಂದು ತೆರವುಗೊಳಿಸಿದರೆ ಬಡವರ, ವ್ಯಾಪಾರಸ್ಥರ ಗತಿ ಏನು
> -ಸಂತೋಷ್‌ಕುಮಾರ್, ಮಾಲೀಕ

## ಆತ್ಮ ಗೌರವ ಇದ್ದರೆ, ಕೇಳದೆಯೇ ಅನ್ಯರಲ್ಲಿ ಗೌರವ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಆತ್ಮಗೌರವವನ್ನು ಬೆಳೆಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಆದಾಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತ , ನಟ, ನಿರ್ದೇಶಕ, ಬರಹಗಾರ ಎಸ್. ಎನ್ ಸೇತುರಾಂ ಸಲಹೆ ನೀಡಿದರು.

ನಗರದ ಎಂ.ಎಸ್ ರಾಮಯ್ಯ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು. ಆತ್ಮ ಗೌರವ ಇದ್ದರೆ, ಕೇಳದೆಯೇ ಅನ್ಯರಲ್ಲಿ ಗೌರವ ಮನೋಭಾವನೆ ಮೂಡುತ್ತದೆ, ಪರಸ್ಪರ ಗೌರವ ನೀಡುವುದು, ಉತ್ತಮ ಸಂಬಂಧಗಳಿಗೆ ಪ್ರಬಲವಾದ ಅಡಿಪಾಯ ಎಂದರು. ಮನೆಯೇ ಮಂತ್ರಾಲಯ, ವಿದ್ಯಾಸಂಸ್ಥೆಯೆ ದೇವಾಲಯ ಎಂಬುದನ್ನು ಇಂದಿನ ವಿದ್ಯಾರ್ಥಿಗಳು ಮರೆಯುತ್ತಿದ್ದಾರೆ. ವಿದ್ಯಾರ್ಥಿಗಳು ನಮ್ಮ ಸಂಸ್ಕೃತಿಕ್ಕೆಯನ್ನು ಬೆಳೆಸಿ ಉಳಿಸಬೇಕಿದೆ ಎಂದರು.

ಇದೇ ವೇಳೆ ವಿದ್ಯಾರ್ಥಿಗಳೊಂದಿಗೆ ಸೇತರಾಂ ಅವರು ಸಂವಾದ ನಡೆಸಿದರು, ನಾಟ್ಯ, ನಾಟಕ, ಸಂಗೀತ, ನೃತ್ಯ ಸೇರಿದಂತೆ ಮನೋರಂಜನಾ ಹಾಗೂ ಸಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಿದರು. ಪ್ರಾಂಶುಪಾಲರಾದ ವತ್ಸಲಾ.ಜಿ, ಮುಖ್ಯಸ್ಥರಾದ ಎಂ.ಆರ್. ಜಾನಕಿರಾಮ್, ಎಂ.ಆರ್. ಕೋದಂಡರಾಮ್, ಬಿ.ಎಸ್.ರಾಮಪ್ರಸಾದ್, ಜಿ.ರಾಮಚಂದ್ರ, ಡಾ.ಆನಂದಪ್ಪಾ ಇನ್ನಿತರರಿದ್ದರು.

## ಗುಣವಂತ, ಸಿರಿವಂತ, ಅಮ್ಮಾ ನನ್ನ ಗಂಡ ಹೀಗಿರಬೇಕು ಭಕ್ತೆಯ ಪತ್ರ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ದೇವಸ್ಥಾನದಲ್ಲಿನ ಕಾಣಿಕೆಹುಂಡಿ ಇತ್ತೀಚೆಗೆ ಅಂಚೆ ಡಬ್ಬಿಯೇ ಆಗುತ್ತಿದೆ. ಕಾಣಿಕೆ ಜೊತೆ ವಿವಿಧ ಬೇಡಿಕೆಗಳ ಪತ್ರ ಹುಂಡಿ ಸೇರುತ್ತಿದ್ದು, ಹುಂಡಿ ಎಣಿಕೆ ಸಮಯದಲ್ಲಿ ಪತ್ರ ಓದಿದ ದೇವಸ್ಥಾನದ ಆಡಳಿತ ಮಂಡಳಿ ದಂಗಾಗಿದೆ.ಬೆಂಗಳೂರಿನ ಬನಶಂಕರಿ ದೇವಿಗೆ ಪತ್ರ ಬರೆದು ಕಾಣಿಕೆ ಹುಂಡಿಗೆ ಹಾಕಿರುವ ಭಕ್ತೆಯೊಬ್ಬರು ತಾಯಿಯಲ್ಲಿ ತನ್ನ ಗಂಡ ಹೇಗಿರಬೇಕು ಎಂಬ ಬೇಡಿಕೆ ಇಟ್ಟಿದ್ದಾರೆ ಜೊತೆಗೆ ಈ ಹಿಂದೆ ಬೇಡಿಕೊಂಡಿದ್ದು ಈಗ ಬೇಡ ಕ್ಷಮಿಸು ಎಂದೂ ಬರೆದಿದ್ದಾರೆ.ಈ ಮೊದಲು ಗೋಪಿನಾಥ ಎಂಬುವವನನ್ನು ಬಿಟ್ಟರೆ ಬೇರೆಯವರನ್ನ ಮದುವೆಯಾಗಲ್ಲ ಎಂದಿದ್ದೆ ಆದರೆ ಈಗ ಅವನು ನನಗೆ ಬೇಡ ಐಎಎಸ್ ಅಧಿಕಾರಿಯೇ ಬೇಕು ಎಂಬ ದೊಡ್ಡ ಬೇಡಿಕೆಯನ್ನು ಬನಶಂಕರಿ ಎದುರು ಇಟ್ಟಿದ್ದಾರೆ. ಗುಣವಂತ, ಸಿರಿವಂತ, ಐಶ್ವರ್ಯವಂತ, ಹೃದಯವಂತ ಯಾವ ಹೀರೋಗಿಂತಲೂ ಕಮ್ಮಿ ಇರಬಾರದು , ನಾನವರ ಜೀವವಾಗಬೇಕು, ಬೇರೆ ಹೆಂಗಸರನ್ನು ಕೆಟ್ಟ ದೃಷ್ಟಿಯಲ್ಲಿ ನೋಡಬಾರದು, ನೂರು ಕಾಲ ಮಕ್ಕಳು ಮೊಮ್ಮಕ್ಕಳ ಜೊತೆ ಬಾಳಬೇಕು ಎಂದು ಭಕ್ತೆ ಪತ್ರದಲ್ಲಿ ಕೋರಿಕೆ ಇಟ್ಟಿದ್ದಾರೆ. ಈ ಭಕ್ತೆಯ ಪ್ರಾರ್ಥನೆ ಈಡೇರಲಿ .

> ಇಷ್ಟೇ ಅಲ್ಲ, ದಂಪತಿಯನ್ನು ದೂರು ಮಾಡು ಅವರಿಗೆ ಶಿಕ್ಷೆ ಕೊಡು, ತಾಯಿ ಮನೆ ಆಸ್ತಿ ನನಗೇ ಸಿಗಲಿ, ನನ್ನ ಮಗನ ಮದುವೆ ಒಳ್ಳೆ ರೀತಿಯಿಂದ ನಡೆಯಲಿ ಹೀಗೆ ನಾನಾ ರೀತಿಯ ಬೇಡಿಕೆ ಪತ್ರ ಬನಶಂಕರಿ ದೇವಿ ಹುಂಡಿಯಲ್ಲಿ ಸಿಕ್ಕಿದೆ.

# ನಾಗರಕೆರೆಗೆ ಹೊಸ ರೂಪ: ತೇಲುವ ದೀಪಗಳು, ಕಾರಂಜಿ ಅತ್ಯಾಕರ್ಷಕ

### ನಗರದ ಹೃದಯಭಾಗದ ನಾಗರಕೆರೆ ಪುನಃಶ್ಚೇತನ ಕಾರ್ಯ ವಿಳಂಬದಿಂದಾಗಿ ಕಲುಷಿಗೊಂಡಿದೆ. ಇದು ಜೀವ ವೈವಿಧ್ಯಕ್ಕೆ ಮಾರಕ

• ಉದಯವಾಹಿನಿ, ದೊಡ್ಡಬಳ್ಳಾಪುರ

ನಗರದ ಹೃದಯಭಾಗದ ನಾಗರಕೆರೆ ಪುನಃಶ್ಚೇತನ ಕಾರ್ಯ ವಿಳಂಬದಿಂದಾಗಿ ಕಲುಷಿಗೊಂಡಿದೆ. ಇದು ಜೀವ ವೈವಿಧ್ಯಕ್ಕೆ ಮಾರಕವಾಗಿದೆ. ಈ ದಿಸೆಯಲ್ಲಿ ಡಬ್ಲ್ಯೂ.ಡಬ್ಲ್ಯೂ.ಎಫ್ ಇಂಡಿಯಾ ವತಿಯಿಂದ ಕೈಗೊಂಡಿರುವ ವಿಭಿನ್ನ ಯೋಜನೆಗಳಿಂದಾಗಿ ಕೆರೆ ಪುನಃಶ್ಚೇತನ ಸಾರ್ವಜನಿಕರಲ್ಲಿ ಒಂದಿಷ್ಟು ಭರವಸೆ ಮೂಡಿಸಿದೆ.

2018ರಲ್ಲಿ ಸಿ.ಎಸ್.ಕರೀಗೌಡ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಆಗಿದ್ದ ಸಂದರ್ಭದಲ್ಲಿ ಸಾರ್ವಜನಿಕರ ಹಾಗೂ ಕೈಗಾರಿಕೆಗಳ ಸಹಕಾರದೊಂದಿಗೆ ನಾಗರಕೆರೆ ಹೂಳು ತೆಗೆಸಿ ನಡುಗಡ್ಡೆಗಳನ್ನು ನಿರ್ಮಿಸಲಾಗಿತ್ತು. ನಾಗಕೆರೆ ಪ್ರದೇಶ ಪ್ರಸ್ತುತ 68 ಹೆಕ್ಟೇರ್ ವಿಸ್ತೀರ್ಣ ಹೊಂದಿದೆ. ಕೆರೆ ಏರಿ ಉದ್ದ 1,194 ಮೀಟರ್, ಆಳ ಸುಮಾರು 5 ಮೀ. ಕೆರೆ ಜಲಾನಯನ ಪ್ರದೇಶ 7.60 ಚದರ ಕಿ.ಮೀ. 2.27 ಮಿಲಿಯನ್ ಕ್ಯು.ಮೀ ನೀರು ನಿಲ್ಲುವ ಸಾಮರ್ಥ್ಯ ಹೊಂದಿದೆ.


ಉದಯವಾಹಿನಿ ಚಿತ್ರ

ನಗರಸಭೆ ವ್ಯಾಪ್ತಿಯಿಂದ ಬರುವ ಎಲ್ಲಾ ಒಳಚರಂಡಿ ನೀರು ಸಹ ಹರಿದು ಹೋಗುವ ಬೃಹತ್ ಪೈಪ್‌ಲೈನ್, ಚೇಂಬರ್ ನಾಗರಕೆರೆಯಲ್ಲಿಯೇ ನಿರ್ಮಿಸಲಾಗಿದೆ. ಹಲವು ಬಾರಿ ಈ ಚೇಂಬರ್ ಮೂಲಕ ನೀರು ಹೊರಗೆ ಬಂದು ಕೆರೆಗೆ ಸೇರ್ಪಡೆಯಾಗುತ್ತಿದೆ. ನಗರದ ಡಿ.ಕ್ರಾಸ್ ಮುಖ್ಯ ರಸ್ತೆ ಅಯ್ಯಪ್ಪಸ್ವಾಮಿ ದೇವಾಲಯ ಸಮೀಪದ ರಾಜಕಾಲುವೆ ಮೂಲಕ ನಗರದಲ್ಲಿನ ಕೊಳಚೆ ನೀರು ನೇರವಾಗಿ ಕೆರೆ ಅಂಗಳ ಸೇರುತ್ತಿದೆ. ಈ ರಾಜಕಾಲುವೆ ಮೂಲಕ ನಗರದಲ್ಲಿನ ಪ್ಲಾಸ್ಟಿಕ್ ತ್ಯಾಜ್ಯ ಸೇರಿದಂತೆ ಎಲ್ಲಾ ರೀತಿಯ ಕಲುಷಿತ ನೀರಿನಿಂದ ಕೆರೆ ಮಲಿನವಾಗಲು ಕಾರಣವಾಗಿದೆ. ಇದರಿಂದ ಕೆರೆಯಲ್ಲಿನ ಜಲಚರಗಳು ಮೃತಪಡುವ ಸ್ಥಿತಿ ನಿರ್ಮಾಣವಾಗುತ್ತಿದೆ.

> ಡಬ್ಲ್ಯೂ.ಡಬ್ಲ್ಯೂ.ಎಫ್ ಇಂಡಿಯಾ (ವಲ್ಡರ್ ವೈಡ್ ಫಂಡ್ ಫಾರ್ ನೇಚರ್) ಸಂಸ್ಥೆ ಕ್ಲೈಮೇಟ್ ಸಲ್ಯೂಷನ್ ಪಾರ್ಟನರ್ ಶಿಪ್ ಕಾರ್ಯಕ್ರಮದಡಿ ಕೆರೆ ಸಂಪರ್ಕ ಕಾಲುವೆ ಪುನಃಶ್ಚೇತನ ಕೆರೆಯಲ್ಲಿನ ನೀರಿನಲ್ಲಿ ತೇಲುವ ಕಾರಂಜಿ ತೇಲುವ ದ್ವೀಪಗಳ ನಿರ್ಮಾಣ ಜೊಂಡು ತೆರವು ಕೆರೆ ಬಗ್ಗೆ ಫಲಕಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ಮುಂತಾದ ಕೆರೆ ಪುನಃಶ್ಚೇತನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ
> -ವೈ.ಟಿ.ಲೋಹಿತ್, ಯೋಜನಾಧಿಕಾರಿ

**ತೇಲುವ ದ್ವೀಪಗಳು:** ಕೆರೆಯಲ್ಲಿ ನೀರು ಬಳ್ಳಿ, ಕೆನ, ಜೊಂಡು, ಕೆಸವೇದಂಟು ಗಿಡಗಳನ್ನೊಳಗೊಂಡ 10 ತೇಲುವ ದ್ವೀಪಗಳನ್ನು ಕೆರೆಯಲ್ಲಿ ಬಿಡಲಾಗಿದೆ. 10★10 ಅಡಿ ಅಳತೆ ತೇಲುವ ದ್ವೀಪಗಳಲ್ಲಿ ದೇಸಿ ಜಲ ಗಿಡಗಳನ್ನು ಹಾಕಲಾಗಿದೆ. ಇವು ಕೆರೆಯಲ್ಲಿರುವ ಅಕ್ರಮಣಕಾರಿ ಜಲ ಕಳೆಯಾದ ಜಂಬು ಕೆರೆಯಲ್ಲಿ ಅವರಿಸದಂತೆ ತಡೆಯುತ್ತವೆ. ಇವು ಕೆರೆ ನೀರಿನಲ್ಲಿರುವ ಮಲಿನ ಪೋಷಕಾಂಶ ಸೆಳೆದು ನೀರಿನ ಮಲಿನತೆ ಕಡಿಮೆ ಮಾಡುತ್ತವೆ.

ಈ ಮಾದರಿ ಈಗಾಗಲೇ ಬೆಂಗಳೂರಿನ ಮಡಿವಾಳ ಮೊದಲಾದ ಕೆರೆಗಳಲ್ಲಿ ಅಳವಡಿಸಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿದೆ ಎನ್ನುತ್ತಾರೆ ವೈ.ಟಿ.ಲೋಹಿತ್. ನಾಗರಕೆಯಲ್ಲಿ ಬಾತು ಕೊಕ್ಕರೆ ಸೇರಿದಂತೆ ವಿವಿಧ ಜಾತಿ ಪಕ್ಷಿಗಳು ಜಲಚರ ಸೇರಿದಂತೆ ಹಲವು ರೀತಿಯ ಜೀವ ವೈವಿಧ್ಯತೆಗಳಿವೆ. ಇವುಗಳ ಬಗ್ಗೆ ಜನರಿಗೆ ಮಾಹಿತಿ ನೀಡುವ ಜೀವವೈವಿಧ್ಯ ಫಲಕ ಪ್ರಕಟಿಸಲಾಗಿದೆ.

**ಊರಿನ ನೀರು ಈ ಗಿಡಗಳಿಗೆ ಪೌಷ್ಟಿಕಾಂಶ ನೀಡಿ ಪೋಷಣೆ**

ಆಫ್ರಿಕಾ ಮೂಲದ ಅಕ್ರಮಣಕಾರಿ ತೇಲುವ ಜಲ ಕಳೆ ಜಂಬು ಅಥವಾ ವಾಟರ್ ಹಯಾಸಿಂತ್ 20 ಹೆಕ್ಟೇರ್ ಹೆಚ್ಚು ಪ್ರದೇಶವನ್ನು ನಾಗರಕೆರೆಯಲ್ಲಿ ಆವರಿಸಿದೆ. ಈ ಜಲ ಕಳೆ ಒಮ್ಮೆ ಯಾವುದಾದರೂ ಜಲಾಮೂಲ ಸೇರಿದರೆ ಇಡೀ ಕೆರೆಯನ್ನೇ ಅಕ್ರಮಿಸಿ ಹಬ್ಬುತ್ತದೆ. ಊರಿನ ನೀರು ಈ ಗಿಡಗಳಿಗೆ ಪೌಷ್ಟಿಕಾಂಶ ನೀಡಿ ಪೋಷಿಸುತ್ತದೆ. ಸಂಸ್ಥೆಯು ಕೆರೆಯಲ್ಲಿ 5 ಹೆಕ್ಟೇರ್ ಜಲಕಳೆ ತೆಗಿಸಿದ್ದು, ಇದನ್ನು ಗೊಬ್ಬರವಾಗಿ ಮಾಡಲು ನಗರಸಭೆ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ತಲುಪಿಸಿದೆ ಮತ್ತು ಕೆಲವು ರೈತರು ಕೃಷಿ ಭೂಮಿಗೆ ಬಳಸಿಕೊಂಡಿದ್ದಾರೆ.

# ಈಡೇರುವುದೇ ಪುನರ್‌ವಸತಿಯ ಬೇಡಿಕೆ?

## ಮನವಿಗೆ ಸ್ಪಂದಿಸಿರುವ ಜಿಲ್ಲಾಧಿಕಾರಿ ಸಿ.ಟಿ .ಶಿಲ್ಪಾನಾಗ್ ಅವರು ಮೆಂದರೆ ಗ್ರಾಮದಲ್ಲಿ ಜಂಟಿ ಸರ್ವೆ ನಡೆಸಲು ಸೂಚನೆ

• ಉದಯವಾಹಿನಿ, ಚಾಮರಾಜನಗರ

ಮಹದೇಶ್ವರ ಬೆಟ್ಟ ವ್ಯಾಪ್ತಿಯ ಇಂಡಿಗನತ್ತದಲ್ಲಿ ಘರ್ಷಣೆ ನಡೆದ ನಂತರ ಭಯಭೀತರಾಗಿರುವ ನೆರೆ ಮೆಂದರೆ ಗ್ರಾಮದವರು, ತಮಗೆ ಪಾಲಾರ್ ನಲ್ಲಿರುವ ಗಿರಿಜನ ಕಾಲೊನಿಯಲ್ಲಿ ಪುನರ್‌ವಸತಿ ಕಲ್ಪಿಸುವಂತೆ ಜಿಲ್ಲಾಡಳಿತಕ್ಕೆ ಮನವಿ ಮಾಡಿದ್ದಾರೆ.

ಮನವಿಗೆ ಸ್ಪಂದಿಸಿರುವ ಜಿಲ್ಲಾಧಿಕಾರಿ ಸಿ.ಟಿ .ಶಿಲ್ಪಾನಾಗ್ ಅವರು ಮೆಂದರೆ ಗ್ರಾಮದಲ್ಲಿ ಜಂಟಿ ಸರ್ವೆ ನಡೆಸಲು ಸೂಚಿಸಿದ್ದಾರೆ.

ಉಪವಿಭಾಗಾಧಿಕಾರಿಯವರ ಉಸ್ತುವಾರಿಯಲ್ಲಿ ಇದೇ 27ರಂದು ಸರ್ವೆ ಕಾರ್ಯ ಆರಂಭವಾಗಲಿದೆ. ಕಂದಾಯ, ಭೂಮಾಪನ, ಅರಣ್ಯ ಇಲಾಖೆಗಳು ಸರ್ವೆ ನಡೆಸಲಿವೆ. ಜಿಲ್ಲಾಡಳಿತದ ಕ್ಷಿಪ್ರ ಸ್ಪಂದನೆಯಿಂದ ಗಿರಿಜನರಲ್ಲಿ ಆಶಾ ಭಾವನೆ ಮೂಡಿದೆ.

ಆದರೆ, ಮಲೆ ಮಹದೇಶ್ವರ ವನ್ಯಧಾಮದ ವ್ಯಾಪ್ತಿಯಲ್ಲಿ ಚಂಗಡಿ ಗ್ರಾಮವನ್ನು ಬೇರೆಗೆ ಸ್ಥಳಾಂತರ ಮಾಡುವ ಯೋಜನೆ ನಾಲ್ಕು ವರ್ಷಗಳಿಂದ ನನೆಗುದಿಗೆ ಬಿದ್ದಿದೆ. ಕುಟುಂಬಗಳು ಊರು ಬಿಟ್ಟು ಬರಲು ತಯಾರಿದ್ದರೂ, ಪುನರ್ವಸತಿಗೆ

ಉದಯವಾಹಿನಿ ಚಿತ್ರ


ಸ್ಥಳಗುರುತಿಸಿದ್ದರೂ, ಪರಿಹಾರ ಪ್ಯಾಕೇಜ್ ನಿಗದಿ ಪಡಿಸಿದ್ದರೂ, ಅನುದಾನದ ಕೊರತೆಯಿಂದ ಇನ್ನೂ ಅನುಷ್ಠಾನಕ್ಕೆ ಬಂದಿಲ್ಲ. ಸ್ಥಳಾಂತರದ ನಿರೀಕ್ಷೆಯಲ್ಲಿದ್ದ ಚಂಗಡಿ ಗ್ರಾಮಸ್ಥರು ನಿರಾಸೆಗೊಂಡಿದ್ದಾರೆ. ಹಾಗಿರುವಾಗ ಮೆಂದರೆ ಪುನರ್ವಸತಿ ಪ್ರಸ್ತಾವ ತ್ವರಿತವಾಗಿ ನಡೆಯಲಿದೆಯೇ ಎಂಬ ಪ್ರಶ್ನೆ ಎದ್ದಿದೆ.

**ಭೂಮಿ ಇಲ್ಲ:** ಮೆಂದರೆಯಲ್ಲಿ 60ರಷ್ಟು ಸೋಲಿಗ ಕುಟುಂಬಗಳಿವೆ. 300ಕ್ಕೂ ಹೆಚ್ಚು ಜನಸಂಖ್ಯೆ ಇದೆ. ಇವರಿಗೆ ಯಾರಿಗೂ ಜಮೀನು ಇಲ್ಲ. ಪುಟ್ಟ ಪುಟ್ಟ ಮನೆಗಳನ್ನು ಬಿಟ್ಟು ಬೇರೇನೂ ಇಲ್ಲ. ಕೂಲಿಯೇ ಜೀವನಾಧಾರ. ಸ್ಥಳೀಯವಾಗಿ ಕೂಲಿ ಸಿಗದಿದ್ದರೆ, ನೆರೆಯ ತಮಿಳುನಾಡಿಗೆ ಹೋಗಿ ಕೆಲಸ ಮಾಡುತ್ತಾರೆ.

ಎಲ್ಲಾ ಕುಟುಂಬಗಳೂ ಅರ್ಜಿ ಹಾಕಿವೆ. ದಾಖಲೆಗಳು ಇಲ್ಲ ಎಂಬ ಕಾರಣಕ್ಕೆ ವಿಳಂಬವಾಗಿತ್ತು. ಈಗ ದಾಖಲೆಗಳನ್ನು ಸಿದ್ಧಪಡಿಸಿ ನೀಡಲಾಗಿದೆ. ಗ್ರಾಮ ಸಭೆ ನಡೆಯಬೇಕಿದೆ. ಅಷ್ಟರಲ್ಲಿ ಇಂಡಿಗನತ್ತ ಪ್ರಕರಣ ನಡೆದಿದೆ. ಸಮುದಾಯದವರು ಮೆಂದರೆಯಲ್ಲಿ ಇರಲು ಭಯಭೀತರಾಗಿದ್ದಾರೆ.

> **'ನಾವು ಹಿಂದಿನಿಂದಲೂ ಸೌಲಭ್ಯಗಳ ಕೊರತೆಯ ನಡುವೆಯೇ ಜೀವನ ನಡೆಸಿಕೊಂಡು ಬಂದವರು. ಇಂಡಿಗನತ್ತದ ಘರ್ಷಣೆಯ ಬಳಿಕ ನಮಗೆ ಮೆಂದರೆಯಲ್ಲಿ ಇರಲು ಆಗುತ್ತಿಲ್ಲ. ಮುಂದೇನಾಗುತ್ತದೋ ಎಂಬ ಭಯ ನಮ್ಮನ್ನು ಕಾಡುತ್ತಿದೆ. ನಮ್ಮ ಸುರಕ್ಷತೆಯ ದೃಷ್ಟಿಯಿಂದ ಸ್ಥಳಾಂತರಗೊಳ್ಳಲು ನಾವು ಸಿದ್ಧರಿದ್ದೇವೆ. ಜಿಲ್ಲಾಡಳಿತ ನಮಗೆ ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ ಜಮೀನು ನೀಡುವುದರ ಜೊತೆಗೆ ಪಾಲಾರ್‌ನಲ್ಲಿ ಪುನರ್ವಸತಿ ಕಲ್ಪಿಸಬೇಕು**
> **-ಮಾದಯ್ಯ, ಮೆಂದರೆ ಮುಖಂಡ**

### ಭೂಮಿ ಪರಿಹಾರ ನೀಡಬಹುದು

**ಡಿಸಿ ಈ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಅವರು ನಾನು ಖುದ್ದಾಗಿ ಮೆಂದರೆಗೆ ಕಾಲ್ನಡಿಗೆಯಲ್ಲಿ ಹೋಗಿ ಅವರ ಕಷ್ಟಗಳನ್ನು ಅರಿತಿದ್ದೇನೆ. ಅವರ ಸ್ಥಳಾಂತರಕ್ಕೆ ಕಾನೂನಿನಲ್ಲಿ ಅವಕಾಶ ಇದೆ. ಅರಣ್ಯ ಹಕ್ಕು ಕಾಯ್ದೆಯ ಅಡಿಯಲ್ಲಿ ಭೂಮಿಯನ್ನೂ ನೀಡಬಹುದು. ಪರಿಹಾರವನ್ನೂ ಕೊಡಬಹುದು. ಈಗ ಮೆಂದರೆ ಗ್ರಾಮಸ್ಥರೇ ಸ್ವಯಂ ಪ್ರೇರಿತರಾಗಿ ಸ್ಥಳಾಂತರ ಗೊಳ್ಳಲು ಒಪ್ಪಿರುವುದರಿಂದ ಸರ್ಕಾರದ ಅನುಮತಿ ಪಡೆದು ಅವರಿಗೆ ಪುನರ್ವಸತಿ ಕಲ್ಪಿಸಲು ಕ್ರಮವಹಿಸಲಾಗುವುದು ಎಂದರು.**

ಪಾಲಾರ್‌ನಲ್ಲಿ ಪುನರ್ವಸತಿ ಕಲ್ಪಿಸಬೇಕು ಎಂಬ ಬೇಡಿಕೆ ಇಟ್ಟಿದ್ದಾರೆ. ಜಿಲ್ಲಾಡಳಿತ ಇದಕ್ಕೆ ಸ್ಪಂದಿಸಬೇಕು. ಅರಣ್ಯ ಹಕ್ಕು ಕಾಯ್ದೆಯ ಅಡಿಯಲ್ಲಿ ಭೂಮಿ ನೀಡಿ ಸಮುದಾಯದವರ ಬದುಕಿಗೆ ನೆರವಾಗಬೇಕು' ಎಂದು ಸೋಲಿಗ ಮುಖಂಡ ಗಿರಿಯ ತಿಳಿಸಿದರು.

ಪಾಲಾರ್‌ನಲ್ಲಿ 90 ಸೋಲಿಗ ಕುಟುಂಬಗಳು ವಾಸಿಸುತ್ತಿವೆ. ಇಲ್ಲಿನ ಗಿರಿಜನರು ಮೊದಲು ಬೆಟ್ಟ ವ್ಯಾಪ್ತಿಯ ಹಣೆಹೊಲ ಸೇರಿದಂತೆ ಅರಣ್ಯದ ವಿವಿಧ ಕಡೆಗಳಲ್ಲಿ ವಾಸವಿದ್ದವರು. ಸರ್ಕಾರ ಅವರನ್ನು ಪಾಲಾರ್‌ನಲ್ಲಿ ಪುನರ್ವಸತಿ ಕಲ್ಪಿಸಿ ಅರಣ್ಯ ಹಕ್ಕು ಕಾಯ್ದೆಯಡಿ ಜಮೀನು ಕೂಡ ನೀಡಿದೆ.

ಮೆಂದರೆ ಗ್ರಾಮಸ್ಥರ ಪುನರ್ವಸತಿ ಬೇಡಿಕೆಯೂ ಚಂಡಗಿ ಸ್ಥಳಾಂತರ ಯೋಜನೆಯನ್ನು ಪರಸ್ಪರ ಹೋಲಿಸಲು ಸಾಧ್ಯವಿಲ್ಲ ಎಂದು ಹೇಳುತ್ತಾರೆ ರಾಜ್ಯ ಮೂಲನಿವಾಸಿ ಬುಡಕಟ್ಟು ಜನರ ವೇದಿಕೆ ಕಾರ್ಯದರ್ಶಿ ಮುತ್ತಯ್ಯ. 'ಚಂಗಡಿಯಲ್ಲಿ ಗಿರಿಜನ ಕುಟುಂಬಗಳು ಕೇವಲ 12 ಇದ್ದವು. ಉಳಿದವರು ಆದಿವಾಸಿಗಳಲ್ಲ. ಮೆಂದರೆಯಲ್ಲಿ ಇರುವವರೆಲ್ಲರೂ ಆದಿವಾಸಗಳಿದ್ದಾರೆ. ಗಿರಿಜನರಿಗೆ ಪುನರ್ಸವತಿ ಕಲ್ಪಿಸಲು ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ನೀಡಲು ಅವಕಾಶ ಇದೆ' ಎಂದರು.

# ಯಶಸ್ಸಿಗೆ ಕಠಿಣ ಪರಿಶ್ರಮ ಅಗತ್ಯ : ವಿದ್ಯಾರ್ಥಿಗಳಿಗೆ ಕರೆ

• ಉದಯವಾಹಿನಿ, ತುಮಕೂರು

ಯಾವುದೇ ಕ್ಷೇತ್ರದಲ್ಲಿ ಯಶಸ್ಸು ದೊರೆಯಬೇಕಾದರೆ ಕಠಿಣ ಪರಿಶ್ರಮ ಅಗತ್ಯವೆಂದು ರಾಜ್ಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ನಿರ್ದೇಶಕ ಬಿ.ಕಲ್ಲೇಶ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಜಿಲ್ಲೆಯ ಕೊರಟಗೆರೆ ತಾಲ್ಲೂಕು ಬಜ್ಜನಹಳ್ಳಿ ಗ್ರಾಮದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ಶುಕ್ರವಾರ ಇಸ್ರೋ, ಕೇಂದ್ರ ಬುಡಕಟ್ಟು ಮಂತ್ರಾಲಯ, ಕರ್ನಾಟಕ ಪರಿಶಿಷ್ಟ ವಸತಿ ಶಾಲಾ ಸಂಸ್ಥೆಗಳ ಸಂಘದ ಸಹಯೋಗದಲ್ಲಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗಾಗಿ 7 ದಿನಗಳ ಕಾಲದ ಅಂತರಿಕ್ಷ ಶಿಕ್ಷಣದ ಬಗ್ಗೆ ಹಮ್ಮಿಕೊಂಡಿದ್ದ JAYAKAR ಎಂಬ ವಿನೂತನ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮೆರಿಟ್ ಆಧಾರದ ಮೇಲೆ ಬಜ್ಜನಹಳ್ಳಿ ವಸತಿ ಶಾಲೆಯ 30 ಹಾಗೂ ಕೋಲಾರ ಜಿಲ್ಲೆಯ ಗಂಗಾನರಪಲ್ಲಿ ವಸತಿ ಶಾಲೆಯ 10 ಸೇರಿ 40 ವಿದ್ಯಾರ್ಥಿಗಳನ್ನು ಈ ತರಬೇತಿಗೆ ಆಯ್ಕೆ ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಇಂತಹ ಅವಕಾಶ ಜೀವನದಲ್ಲಿ ಮತ್ತೊಮ್ಮೆ ದೊರೆಯುವುದಿಲ್ಲ. ಈ ತರಬೇತಿಯ ಸದುಪಯೋಗ ಪಡೆದು ಕಠಿಣ ಅಭ್ಯಾಸ ಮಾಡಿದಲ್ಲಿ ಉಜ್ವಲ ಭವಿಷ್ಯ ನಿಮ್ಮದಾಗುತ್ತದೆ


ಉದಯವಾಹಿನಿ ಚಿತ್ರ

ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ವಿದ್ಯಾರ್ಥಿಗಳು ಅಂತರಿಕ್ಷದ ಬಗ್ಗೆ ಜ್ಞಾನ ಹೆಚ್ಚಿಸಿಕೊಳ್ಳಬೇಕು. ಸಾಧಕರ ಯಶಸ್ಸಿನ ಹಾದಿಯನ್ನು ಅನುಸರಿಸಬೇಕು. ನಿರಂತರ ಅಭ್ಯಾಸ ಮಾಡಿ ಮುಂದೊಂದು ದಿನ ಇಸ್ರೋ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುವಂತರಾಗಬೇಕು. ಕಳೆದು ಹೋದ ಸಮಯ ಮತ್ತೆ ಬರುವುದಿಲ್ಲ. ಕಾಲಹರಣ ಮಾಡದೆ ಓದಿನಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು. ಸವಾಲುಗಳನ್ನು ಎದುರಿಸುವ ಮೂಲಕ ಸಾಧನೆಯ ಹೆಜ್ಜೆಗಳನ್ನಿಟ್ಟು ಸ್ವಾವಲಂಬಿಗಳಾಗಬೇಕು ಎಂದು ಸ್ಫೂರ್ತಿ ತುಂಬುವ ಮಾತುಗಳನ್ನಾಡಿದರು.

ಇಸ್ರೋ ಅಧ್ಯಕ್ಷ ಎಸ್. ಸೋಮನಾಥ್, ಕೇಂದ್ರದ NESTS ಆಯುಕ್ತ ಅಜಿತ್ ಕುಮಾರ್ ಶ್ರೀವಾಸ್ತವ, ರಾಜ್ಯ ಬುಡಕಟ್ಟು ಸಚಿವಾಲಯದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮಂಜುನಾಥ್ ಎನ್. ಪ್ರಸಾದ್, ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದ ಕಾರ್ಯದರ್ಶಿ ವಿಭು ನಾಯರ್ ಹಾಗೂ ಕರ್ನಾಟಕ, ರಾಜಸ್ಥಾನ, ತೆಲಂಗಾಣ ರಾಜ್ಯಗಳ ಏಕಲವ್ಯ ಮಾದರಿ ವಸತಿ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

> **ಕಡಿಮೆ ಸಮಯದಲ್ಲಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ರೂಪಿಸಲಾಗಿದೆ ಎಂದು ಅಧಿಕಾರಿಗಳ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಮೊದಲ ಹಂತದ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, 20 ವಿದ್ಯಾರ್ಥಿ ಹಾಗೂ 20 ವಿದ್ಯಾರ್ಥಿನಿಯರಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿ ನೀಡುವ ತರಬೇತಿದಾರರು ವಿದ್ಯಾರ್ಥಿಗಳ ಸಂದೇಹಗಳನ್ನು ಸಮರ್ಪಣಾ ಮನೋಭಾವದಿಂದ ಪರಿಹರಿಸಬೇಕು. ಮುಂದಿನ ವರ್ಷ 500 ರಿಂದ 1000 ವಿದ್ಯಾರ್ಥಿಗಳಿಗೆ ಬಾಹ್ಯಾಕಾಶ ಜ್ಞಾನದ ಬಗ್ಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು**
> **-ಪಿಯೂಷ್ ಆನಂದ್, ಪ್ರತಿನಿಧಿ**

# ಒತ್ತುವರಿ ಕದಂಬಬಾಹು: ರಾಜಕಾಲುವೆ ಸಮಾಧಿ

ಉದಯವಾಹಿನಿ ಚಿತ್ರ


• ಉದಯವಾಹಿನಿ, ಗೌರಿಬಿದನೂರು

ನಗರ ವ್ಯಾಪ್ತಿಯಲ್ಲಿ ಸುಮಾರು 80ಕ್ಕೂ ಹೆಚ್ಚು ಸಣ್ಣ ಮತ್ತು ದೊಡ್ಡ ರಾಜಕಾಲುವೆಗಳಿದ್ದವು. ಆದರೆ ಒತ್ತು ವರಿಯ ಕದಂಬಬಾಹುನಿಂದ ರಾಜಕಾಲುವೆಗಳು ಕಣ್ಮರೆಯಾಗಿವೆ.ಇರುವ ಕೆಲವು ಕಾಲುವೆಗಳು ಗಟಾರಗಳಾದರೆ, ಹಲವು ಕಾಲುವೆಗಳಿಗೆ ಮಣ್ಣು ತುಂಬಿಕೊಂಡಿದೆ. ಕಟ್ಟಡ ತ್ಯಾಜ್ಯವನ್ನು ಕಾಲುವೆಯಲ್ಲಿ ಸುರಿಯಲಾಗಿತ್ತಿದ್ದು, ನಗರದ ಬಹುತೇಕ ರಾಜಕಾಲುವೆಗಳು ಸಮಾಧಿಯಾಗಿವೆ.

ರಾಜಕಾಲುವೆ ಒತ್ತುವರಿ ಆಗುವುದರಿಂದ ಅಪಾಯ ಕಟ್ಟಿಟ್ಟ ಬುತ್ತಿ ಎಂದು ತಿಳಿದಿದ್ದರೂ ಅಧಿಕಾರಿಗಳು ಜಾಣ ಮೌನವಹಿಸಿರುತ್ತಾರೆ. ಮಳೆ ಬಂದೂ ಹಾನಿ ಉಂಟು ಮಾಡಿದ ಮೇಲೆ ಎಚ್ಚೆತ್ತು ಕಾಲುವೆ ಸ್ವಚ್ಛತೆ, ಒತ್ತುವರಿ ತೆರವುಗೊಳಿಸುತ್ತಾರೆ. ಆದರೆ ಮಳೆ ನಿಲ್ಲುವ ಹೊತ್ತಿಗೆ ಇವರ ಕೆಲಸವೂ ನಿಲ್ಲುತ್ತದೆ. ಕಳೆದ ವರ್ಷ ಅಕ್ಟೋಬರ್‌ನಲ್ಲಿ ಜೋರು ಮಳೆಯಿಂದ ಗಂಗಸಂದ್ರ, ಗೊಟಕನಾಪುರ, ಹಿರೇಬಿದನೂರು, ಮೂರುಮನೆಹಳ್ಳಿ ವ್ಯಾಪ್ತಿಯಲ್ಲಿ ಸೃಷ್ಟಿಯಾಗಿದ್ದ ಅವಾಂತರದಿಂದ ಜಾಗೃತಗೊಂಡಿದ್ದ ಆಡಳಿತ ವರ್ಗ, ಸಮರೋಪಾದಿಯಲ್ಲಿ ರಾಜಕಾಲುವೆ ಒತ್ತುವರಿ ತೆರವುಗೊಳಿಸುವ ಕಾರ್ಯಾಚರಣೆ ನಡೆಸಿತು. ಆದರೆ ಮಳೆ ನಿಂತ ಕೂಡಲೇ ಅಧಿಕಾರಿಗಳ ಕೆಲಸವು ನಿಂತಿತ್ತು.ಈಗ ಮತ್ತೆ ಮಳೆಗಾಲ ಆರಂಭವಾಗುತ್ತಿದೆ. ಮಳೆ ಬಂದರೆ ಮನೆಗಳಿಗೆ ನೀರು ನುಗ್ಗುವ ಭೀತಿಯಲ್ಲಿ ನಗರದ ಸಾರ್ವಜನಿಕರು. ರಾಜಕಾಲವೆ ಸಂಬಂಧ ಕೈಗೊಳ್ಳುವ ಯಾವುದೇ ಕಾಮಗಾರಿ ಪೂರ್ಣಗೊಳ್ಳುವುದಿಲ್ಲ. ಒತ್ತು ದಾರಿದಾರರ ಪ್ರಭಾವ, ಸ್ಥಳೀಯ ಮುಖಂಡರ ಪ್ರಭಾವದಿಂದ ಕಾಮಗಾರಿ ಆರಂಭದಲ್ಲೇ, ಇಲ್ಲವೇ ಅರ್ಧಕ್ಕೆ ನಿಲ್ಲುತ್ತದೆ.

ನಗರದ ಮಾನಸ ವೃತ್ತದಿಂದ ಉತ್ತರ ಪಿನಾಕಿನಿ ನದಿಗೆ ಸಾಗುವ ರಾಜ ಕಾಲುವೆ ಎಲ್ಲಿದೆ ಎಂಬುದೇ ಯಾರಿಗೂ ಗೊತ್ತಿಲ್ಲ. ಅಧಿಕಾರಿಗಳು ಮೈ ಮರೆತರೆ ರಾಜಕಾಲುವೆ ಕಣ್ಮರೆಯಾಗುತ್ತದೆ ಎಂಬುದಕ್ಕೆ ಸಾಕ್ಷಿಯಾಯಿತು.

> **ಕೆಇಬಿ ಹಿಂಭಾಗ ಕರೇಕಲ್ಲಹಳ್ಳಿ ಕೆರೆಗೆ ಸಂಪರ್ಕ ಕಲ್ಪಿಸುವ ಎಷ್ಟೋ ರಾಜಕಾಲುವೆಗಳು ಕೆಲವರ ಸ್ವಾರ್ಥಕ್ಕೆ ಸಮಾಧಿಯಾಗಿವೆ. ಇನ್ನೂ ಕೆಲವೆಡೆ ಇರುವ ಸಣ್ಣ ಪುಟ್ಟ ರಾಜ ಕಾಲುವೆಗಳು ಚರಂಡಿಗಳಂತಾಗಿವೆ. ಈ ಬಗ್ಗೆ ಗಮನ ಹರಿಸಬೇಕಾದ ಅಧಿಕಾರಿಗಳು ಜಾಣ ಪ್ರದರ್ಶಿಸುತ್ತಿದ್ದಾರೆ ಎನ್ನುವುದು ಸ್ಥಳೀಯರ ಅಸಮಾಧಾನ.**

# ಹಸಿರುಕ್ಕಿಸಿದ ಕಾಫಿತೋಟಗಳು

• ಉದಯವಾಹಿನಿ, ನಾಪೋಕ್ಲು

ಈ ವರ್ಷ ಹಿಂದಿನ ಎಲ್ಲಾ ವರ್ಷಗಳಿಗಿಂತ ಬಿಸಿಲಿನ ಬೇಗೆ ಹೆಚ್ಚಾಗಿ, ಬಾಡುತ್ತಿದ್ದ ಕಾಫಿತೋಟಗಳಿಗೆ ಈಚೆಗೆ ಸುರಿದ ಸಮೃದ್ಧ ಮಳೆಯಿಂದ ಜೀವ ಕಳೆ ಮರಳಿದೆ. ಹೂಮಳೆಯೂ ಬಾರದೇ, ಒಂದು ಹನಿ ಯೂ ಹನಿಯದೇ, ಕಂಗಾಲಾಗಿದ್ದ ಬೆಳೆಗಾರರು ಇದರಿಂದ ನಿಟ್ಟುಸಿರು ಬಿಟ್ಟಿದ್ದಾರೆ. ಬೇಸಿಗೆ ಹೇಗಿತ್ತೆಂದರೆ, ಅಂತ ರ್ಜಲ ಭಾರಿ ಪ್ರಮಾಣದಲ್ಲಿ ಕುಸಿತ ಕಂಡಿತ್ತು. ತೋಟ ಗಳ ಕೆರೆಗಳು ಮಾತ್ರವಲ್ಲ, ಕೊಳವೆಬಾವಿಗಳೂ ಬತ್ತಿ ಹೋಗಿದ್ದವು. ಬಹುತೇಕ ಕೊಳವೆಬಾವಿಗಳಲ್ಲಿ ನೀರು ಕಡಿಮೆಯಾಗಿತ್ತು. ಇದರಿಂದ ತೋಟವನ್ನು ಕಾಪಾಡಿಕೊಳ್ಳಲು ಬೆಳೆಗಾರರು ಇನ್ನಿಲ್ಲದ ಪಡಿಪಾಟೀಲು ಅನುಭವಿಸಿದ್ದರು.

ತೋಟದೊಳಗಿನ ಕೆರೆಗಳು ಬತ್ತಿದ ನಂತರ ಹೊಳೆ, ತೋಡುಗಳಿಂದ ನೀರು ಪಡೆಯುವ ಬೆಳೆಗಾರರ ಚಿಂತನೆಗೆ ಜಿಲ್ಲಾಡಳಿತ ನಿರ್ಬಂಧ ಹೇರಿತು. ಹೊಳೆಗಳಿಂದ ನೀರು ಎತ್ತುವುದನ್ನು ಸಂಪೂರ್ಣ ನಿಷೇಧಿಸಿತು. ಇದು ಬೆಳೆಗಾರರ ಆಕ್ರೋಶಕ್ಕೂ ಕಾರಣವಾಗಿತ್ತು. ಮೇ ತಿಂಗಳ ಬಿಸಿಲ ಝಳದ ನಡುವೆ ನಾಲ್ಕುನಾಡಿನಲ್ಲಿ ರೈತರು ಕೆರೆ

ಉದಯವಾಹಿನಿ ಚಿತ್ರ


ವಿಸ್ತರಣೆಯಲ್ಲಿ ತೊಡಗಿದ್ದರು. ಗದ್ದೆಗಳಲ್ಲಿ ಇದ್ದ ಪುಟ್ಟ ಕೃಷಿಹೊಂಡಗಳನ್ನು ಹಿಗ್ಗಿಸುವ, ಕೆರೆಯನ್ನು ವಿಸ್ತರಿಸುವ ಕಾರ್ಯವನ್ನೂ ಮಾಡಿದರು. ಪ್ರತಿವರ್ಷ ಫೆಬ್ರುವರಿ ಕೊನೆಯ ವಾರ ತಪ್ಪಿದಲ್ಲಿ ಮಾರ್ಚ್ ಮೊದಲ ವಾರದಲ್ಲಿ ನಾಲ್ಕು ನಾಡಿನಲ್ಲಿ ಮಳೆ ಸುರಿದು ಕಾಫಿ ಬೆಳೆಗಾರರು ಸಂತಸಗೊಳ್ಳುತ್ತಿದ್ದರು.

ಕಾಫಿಯ ತೋಟಗಳಲ್ಲಿ ಹೂಗಳು ಅರಳಿ ಬೆಳೆಗಾರರಿಗೆ ಆರ್ಥಿಕ ಚೈತನ್ಯದ ಭರವಸೆ ನೀಡುತ್ತಿತ್ತು. ಈ ವರ್ಷ ಮಳೆಯ ಕೊರತೆ ಬಹುತೇಕ ಬೆಳೆಗಾರರನ್ನು ಕಾಡಿತ್ತು. ತೋಟಗಳಿಗೆ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಕಾಫಿಯ ಹೂಗಳು ಅರಳದೆ ಇಳುವರಿಗೆ ಹೊಡೆತ ಬೀಳುವ ಆತಂಕದಲ್ಲಿದ್ದರು.

# ಮಕ್ಕಳ ಮತ್ತು ಮಹಿಳೆಯರ ಹಕ್ಕುಗಳನ್ನು ರಕ್ಷಿಸಿ

• ಉದಯವಾಹಿನಿ,ಶಿಡ್ಲಘಟ್ಟ

ಪ್ರತಿಯೊಬ್ಬರೂ ಮಕ್ಕಳು ಮತ್ತು ಮಹಿಳೆಯರ ಹಕ್ಕುಗಳಿಗೆ ಸಂಬಂಧಿಸಿದಂತೆ ಕಾನೂನುಗಳ ಬಗ್ಗೆ ಅರಿವು ಪಡೆದುಕೊಳ್ಳುವುದು ಅಗತ್ಯವಾಗಿದೆ ಎಂದು ಆರಕ್ಷಕ ವೃತ್ತ ನಿರೀಕ್ಷಕ ಎಂ ಶ್ರೀನಿವಾಸ್ ಹೇಳಿದರು. ನಗರದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್(ರಿ) ಕಛೇರಿಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಶಿಡ್ಲಘಟ್ಟ ಪೋಲಿಸ್ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಮಹಿಳಾ ಮತ್ತು ಮಕ್ಕಳ ಕಾನೂನಿನ ಬಗ್ಗೆ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ, ಮಹಿಳೆಯರ ಕಾನೂನು ರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿಯಾಗಿದೆ. ಕಾನೂನಿನ ಅರಿವಿನ ಕೊರತೆ ಇರುವುದರಿಂದ ಬಾಲ ಕಾರ್ಮಿಕ ಪದ್ಧತಿ, ಬಾಲ್ಯ ವಿವಾಹ, ದೌರ್ಜನ್ಯ, ವರದಕ್ಷಿಣೆ ಕಿರುಕುಳ, ಕುಡಿದು ಹಿಂಸೆ ಕೊಡುವುದು ಈ ರೀತಿ ಪ್ರಕರಣಗಳು ನಡೆಯುತ್ತಲೇ ಇರುತ್ತವೆ.

ಉದಯವಾಹಿನಿ ಚಿತ್ರ


ಈ ನಿಟ್ಟಿನಲ್ಲಿ ಅಪರಾಧ ತಡೆಗಟ್ಟುವಲ್ಲಿ ಮಹಿಳೆಯರ ಪಾತ್ರ ಬಹಳ ಮುಖ್ಯ ಎಂದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಮಾಜಮುಖಿ ಕೆಲಸಗಳ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ನಗರದ ಸಬ್ ಇನ್ಸ್‌ಪೆಕ್ಟರ್ ಎಂ ವೇಣುಗೋಪಾಲ್, ಸಬ್ ಇನ್ಸ್‌ಪೆಕ್ಟರ್ ವೆಂಕಟರವಣಪ್ಪ, ಧನಂಜಯ್, ರಾಘವೇಂದ್ರ, ಪೋಲಿಸ್ ಇಲಾಖೆ, ಧರ್ಮಸ್ಥಳ ಯೋಜನೆ, ಪ್ರಗತಿ ಬಂಧು ಹಾಗೂ ಸ್ವ ಸಹಾಯ ಸಂಘಗಳ ಸದಸ್ಯರು ಉಪಸ್ಥಿತರಿದ್ದರು.

> **ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಹಿಳಾ ಸಬಲೀಕರಣ, ಕಾನೂನುಗಳ ಅರಿವು, ರಕ್ಷಣೆಗಾಗಿ ಹಲವಾರು ಕಾರ್ಯಕ್ರಮಗಳ ಮೂಲಕ ನಿರಂತರ ಕರ್ತವ್ಯ ನಿರ್ವಹಿಸುತ್ತಿದೆ. ಡಾ.ಡಿ.ವೀರೇಂದ್ರ ಹೆಗ್ಗಡೆಯವರು ಮತ್ತು ಮಾತೃಶ್ರೀ ಡಾ.ಹೇಮಾವತಿ ವಿ.ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಜ್ಞಾನವಿಕಾಸ ಮಹಿಳಾ ಕಾರ್ಯಕ್ರಮ ಎಂಬ ಪ್ರತ್ಯೇಕ ವಿಭಾಗವನ್ನು ರಚಿಸುವ ಮೂಲಕ ಪ್ರತೀ ತಾಲ್ಲೂಕಿನ 125 ಸ್ವ ಸಹಾಯ ಸಂಘಗಳ ಒಟ್ಟು 1250 ಮಂದಿ ಮಹಿಳಾ ಸದಸ್ಯರಿಗೆ ಪ್ರತಿ ತಿಂಗಳು ಮಹಿಳಾ, ಮಕ್ಕಳ ಕಾನೂನಿನ ಬಗ್ಗೆ ಅರಿವು, ಶಿಕ್ಷಣದ ಮಹತ್ವ, ಪೋಷಕರ ಪಾತ್ರ ಮುಂತಾದ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಗ್ರಾಮೀಣ ಭಾಗದ ಮಹಿಳೆಯರಲ್ಲಿ ಕಾನೂನಿನ ಬಗ್ಗೆ ಅರಿವು ಮೂಡಿಸಲಾಗುತ್ತಿದೆ**
> **- ಸುರೇಶ್ ಗೌಡ, ಯೋಜನಾಧಿಕಾರಿ**

# ಪುತ್ರನ ರಾಜಕೀಯ ಜೀವನದ ಬಗ್ಗೆ ಸಿಎಂ ಮಾತು

• ಉದಯವಾಹಿನಿ, ಮೈಸೂರು

ವಿಧಾನಸಭಾ ಚುನಾವಣೆಯಲ್ಲಿ ವರುಣಾ ಕ್ಷೇತ್ರವನ್ನು ತಂದೆಗೆ ಬಿಟ್ಟುಕೊಟ್ಟ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಲೋಕಸಭಾ ಚುನಾವಣೆ ಟಿಕೆಟ್ ಕೂಡ ಸಿಗಲಿಲ್ಲ. ಹೀಗಾಗಿ ಇನ್ನು ಯತೀಂದ್ರ ರಾಜಕೀಯ ಭವಿಷ್ಯ ಏನು ಎಂಬ ಪ್ರಶ್ನೆಗೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು , ಯತೀಂದ್ರ ಅವರನ್ನು ಎಂಎಲ್‌ಸಿ ಮಾಡುತ್ತೇವೆ ಎಂದು ಹೈಕಮಾಂಡ್ ಹೇಳಿದೆ. ವಿಧಾನಸಭಾ ಚುನಾವಣೆಯಲ್ಲಿ


ಉದಯವಾಹಿನಿ ಚಿತ್ರ

ವರುಣಾ ಕ್ಷೇತ್ರವನ್ನು ತಂದೆಗೆ ಬಿಟ್ಟುಕೊಡು ಎಂದು ಸೂಚನೆ ನೀಡಿದ್ದರು ಅದರಂತೆ ಕ್ಷೇತ್ರ ಬಿಟ್ಟುಕೊಡಲಾಗಿತ್ತು, ಎಂಎಲ್‌ಸಿ ಮಾಡುತ್ತೇವೆ ಎಂದಿದ್ದಾರೆ ಕಾದು ನೋಡಬೇಕಿದೆ ಎಂದು ಸಿಎಂ ಹೇಳಿದರು. ಜೊತೆಗೆ ಪ್ರಜ್ವಲ್ ರೇವಣ್ಣ ಪಾಸ್‌ಪೋರ್ಟ್ ರದ್ದು ಮಾಡಲು ಪ್ರಧಾನಿಗೆ ಎರಡು ಬಾರಿ ಪತ್ರ ಬರೆದಿದ್ದೇನೆ, ಯಾವುದೇ ಪ್ರತಿಕ್ರಿಯೆ ಇಲ್ಲ ಎಂದು ಸಿಎಂ ಹೇಳಿದ್ದಾರೆ.

> **40 ಫೋನ್‌ಗಳನ್ನು ಸರ್ಕಾರ ಟ್ಯಾಪ್ ಮಾಡಿದೆ ಎಂಬ ಹೆಚ್ ಡಿ ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯಿಸಿದ ಸಿಎಂ, ಪ್ರಜ್ವಲ್ ರೇವಣ್ಣ ಪ್ರಕರಣ ಡೈವರ್ಟ್ ಮಾಡಲು ಈ ರೀತಿ ಹೇಳುತ್ತಿದ್ದಾರೆ, ಕುಮಾರಸ್ವಾಮಿ ಈ ನೆಲದ ಕಾನೂನಿಗೆ ಬೆಲೆ ಕೊಡಬೇಕು**
> **-ಸಿದ್ದರಾಮಯ್ಯ, ಸಿಎಂ**

# ಯೋಧನ ಮೇಲೆ ಮದ್ಯದ ಬಾಟಲಿಯಿಂದ ಮಾರಣಾಂತಿಕ ಹಲ್ಲೆ

• ಉದಯವಾಹಿನಿ, ತುಮಕೂರು

ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರ ಕ್ಷೇತ್ರದಲ್ಲಿ ಪುಂಡರು ಗಲಾಟೆ ನಡೆಸಿದ್ದು, ಕೇವಲ ದಾರಿ ಬಿಡಿ ಎಂದಿದಕ್ಕೆ ಯೋಧನ ಮೇಲೆ ಬಾಟಲಿಯಿಂದ ಮಾರಣಾಂತಿಕವಾಗಿ ಹಲ್ಲೆ ನಡೆಸಿರುವ ಘಟನೆ ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಬೈರೇ ನಹಳ್ಳಿ ಕ್ರಾಸ್‌ಬಳಿ ನಡೆದಿದೆ.

ಉದಯವಾಹಿನಿ ಚಿತ್ರ


ಹೌದು, ಕೇವಲ ದಾರಿ ಬಿಡಿ ಎಂದಿ ದಕ್ಕೆ ಯೋಧನ ಮೇಲೆ ಮರಣಾಂತಿಕ ಹಲ್ಲೆ ನಡೆಸಲಾಗಿದೆ. ಹ ಲ್ಲೆಗೆ ಒಳಗಾಗಿರುವ ಯೋಧನನ್ನು ಗೋವಿಂದರಾಜು (30) ಎಂದು ಹೇಳಲಾಗಿತ್ತಿದೆ. ಭರತ್, ಪುನೀತ್, ಗೌರಿಶಂಕರ, ಶಿವಾ, ದಿಲೀಪ್ ಯೋಧನ ಮೇಲೆ ಹಲ್ಲೆ ಮಾಡಿರುವ ಪುಂಡರು ಎಂದು ತಿಳಿದುಬಂದಿದೆ.

ಹಲ್ಲೆಗೆ ಒಳಗಾಗಿರುವ ಯೋಧ ಗೋವಿಂದ ರಾಜು ಅವರು ಜಮ್ಮುಕಾಶ್ಮಿರದ ರಜೌರಿನಲ್ಲಿ ಭಾರತೀಯ ಭೂಸೇನೆ ಸಿಪಾಯಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.ರಜೆಯ ಮೇಲೆ ಊರಿಗೆ ಬಂದಿದ್ದು, ಬೈರೇನಹಳ್ಳಿ ಕ್ರಾಸ್‌ಗೆ ಬರುತ್ತಿದ್ದರು. ಈ ವೇಳೆ ದಾರಿ ಮಧ್ಯೆ ನಿಂತಿದ್ದವರಿಗೆ ಯೋಧ ಗೋವಿಂದರಾಜು ಅವರು ದಾರಿ ಬಿಡಿ ಎಂದಿದ್ದಾರೆ.

ಈ ವೇಳೆ ಕುಡಿದ ಮತ್ತಲ್ಲಿ ಐವರು ಮದ್ಯದ ಬಾಟಲಿಯಿಂದ ಯೋಧ ಗೋವಿಂದರಾಜು ಅವರ ಮೇಲೆ ಹಲ್ಲೆ ಮಾಡಿದ್ದಾರೆ. ತಕ್ಷಣ ಅವರನ್ನ ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಸದ್ಯ ಘಟನೆ ಕುರಿತಂತೆಆರೋಪಿಗಳ ವಿರುದ್ಧ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿಜೃಂಭಣೆಯ ರೇವಣಸಿದ್ದೇಶ್ವರ ರಥೋತ್ಸವ

## ಜೈ ರೇವಣ ಸಿದ್ದೇಶ್ವರ, ಜೈ ಜೈ ರೇವಣ ಸಿದ್ದೇಶ್ವರ ಎಂದು ದೇವರಿಗೆ ಜೈಕಾರ ಹಾಕುತ್ತಾ ರಥವನ್ನು ಭಕ್ತಿಯಿಂದ ಎಳೆದು ಪುನೀತಾದರು

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಕೈಲಾಂಚ ಹೋಬಳಿಯ ಅವ್ವೇರಹಳ್ಳಿಯ ರೇವಣ ಸಿದ್ದೇಶ್ವರ ಮಹಾರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು. ಜಿಲ್ಲೆ ಸೇರಿದಂತೆ ವಿವಿಧ ಭಾಗಗಳಿಂದ ಹೆಚ್ಚಿನ ಸಂ ಖ್ಯೆಯಲ್ಲಿ ಬಂದಿದ್ದ ಭಕ್ತರು ರೇವ ಣಸಿದ್ಧೇಶ್ವರರ ರಥವನ್ನು ಎಳೆದು ಪುನೀತರಾದರು. ಜಾತ್ರಾ ಮ ಹೋತ್ಸವ, ರಥೋತ್ಸವದ ಅಂಗವಾಗಿ ಬೆಳಿಗ್ಗೆಯಿಂದಲೇ ದೇವರ ಮೂ ರ್ತಿಗೆ ವಿಶೇಷ ಅ ಲಂಕಾರ ಮಾಡಿ ಪೂಜೆ ನೆರ ವೇರಿಸಲಾಯಿತು. ಜೊತೆಗೆ, ಭೀಮೇಶ್ವರ ದೇವಾಲಯ, ರೇಣುಕಾಂಬಾ ಅಮ್ಮನವರ ದೇವಾಲಯದಲ್ಲಿಯೂ ವಿಶೇಷ ಪೂಜೆ, ವಿಶೇಷ ಅಲಂಕಾರ ಹಾಗೂ ರುದ್ರಾಭಿಷೇಕ ನಡೆದವು.

ಧಾರ್ಮಿಕ ವಿಧಿ-ವಿಧಾನಗಳು ನೆರವೇರಿದ ಬಳಿಕ, ಬೆಳಿಗ್ಗೆ 6 ಗಂಟೆಗೆ ದೇಗುಲದ ಆವರಣದಲ್ಲಿರುವ

ಉದಯವಾಹಿನಿ ಚಿತ್ರ


**ವಿವಿಧ ಭಾಗಗಳ ಭಕ್ತರು ಭಾಗಿ**

ಬಸ ವೇಶ್ವರ ಸ್ವಾಮಿ ಅಗ್ನಿಕೊಂಡವನ್ನು ಅರ್ಚಕ ರುದ್ರೇಶ್ ಅವರು ಭಕ್ತಿಯಿಂದ ಹಾಯ್ದುರು. ಮಧ್ಯಾಹ್ನ 12 ಗಂ ಟೆಗೆ ರೇವಣಸಿದ್ದೇಶ್ವರರ ಉತ್ಸವ ಮೂರ್ತಿಯನ್ನು ಮಂಗಳವಾದ್ಯದೊಂದಿಗೆ ಮೆರವಣಿಗೆಯಲ್ಲಿ ತಂದು ವಿಶೇಷವಾಗಿ ಅಲಂಕಾರಗೊಂಡಿದ್ದ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಅಲಂಕೃತ ರಥಕ್ಕೆ ಅರ್ಚಕರು ಪೂಜೆ ಹಾಗೂ ಇತರ ಧಾರ್ಮಿಕ ವಿಧಿ ವಿಧಾನಗಳನ್ನು ನೆರವೇರಿಸಿದ ಬಳಿಕ ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ ಅವರು ರಥೋತ್ಸವಕ್ಕೆ ಚಾಲನೆ ನೀಡಿದರು.

ಭಕ್ತರು 'ಜೈ ರೇವಣ ಸಿದ್ದೇಶ್ವರ', 'ಜೈ ಜೈ ರೇವಣ ಸಿದ್ದೇಶ್ವರ' ಎಂದು ದೇವರಿಗೆ ಜೈಕಾರ ಹಾಕುತ್ತಾ ರಥವನ್ನು ಭಕ್ತಿಯಿಂದ ಎಳೆದು ಪುನೀತಾದರು. ವಿವಿಧ ಭಾಗಗಳಿಂದ ಬಂದಿದ್ದ ಭಕ್ತರು ರಥಕ್ಕೆ ಬಾಳೆಹಣ್ಣು, ಹೂ ಎಸೆದು ತಮ್ಮ ಭಕ್ತಿ ಸರ್ಮಪಿಸಿದರು.

ವೀರಗಾಸೆ, ಡೋಲು, ಹಗಲು ವೇಷ, ನಂದಿ ಧ್ವಜ ತಂಡಗಳು ಸೇರಿದಂತೆ ವಿವಿಧ ಜಾನಪದ ಕಲಾ ಮೇಳಗಳು ರಥೋತ್ಸವಕ್ಕೆ ಮೆರಗು ತಂದವು. ದಾಸೋಹ ಮಠದ ಮಠದ ಬಸವಲಿಂಗರಾಜ ಸ್ವಾಮೀಜಿ, ರಾಜಶೇಖರ ಶಿವಾ ಚಾರ್ಯ ಸ್ವಾಮೀಜಿ, ಮಾಜಿ ಶಾಸಕ ಕೆ. ರಾಜು, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಉಪತಹಶೀಲ್ದಾರ್ ರುದ್ರಮ್ಮ, ಧಾರ್ಮಿಕ ದತ್ತಿ ಇಲಾಖೆಯ ಸುಮಿತ್ರ, ಅಧಿಕಾರಿ ಯೇಸುರಾಜ್, ಮುಖಂಡ ಎಂ. ರುದ್ರೇಶ್ ಸೇರಿದಂತೆ ಪ್ರಮುಖರು ರಥೋತ್ಸವದಲ್ಲಿ ಪಾಲ್ಗೊಂಡರು.

ಜಾತ್ರೆ ಅಂಗವಾಗಿ ರೇವಣ ಸಿದ್ದೇಶ್ವರಸ್ವಾಮಿ ಅಭಿವೃದ್ಧಿ ಸೇವಾ ಟ್ರಸ್ಟ್ ರಂಗೋಲಿ ಸ್ಪರ್ಧೆ ಹಮ್ಮಿಕೊಂಡಿತ್ತು. ದೇಗುಲದ ಆವರಣದಲ್ಲಿ ಮಹಿಳೆಯರು ಬಿಡಿಸಿದ್ದ ಬಗೆ ಬಗೆಯ ರಂಗೋಲಿಗಳು ನೋಡುಗರ ಗಮನ ಸೆಳೆದವು. ಅತ್ಯುತ್ತಮ ಎನಿಸಿದ ರಂಗೋಲಿಗಳಿಗೆ ಟ್ರಸ್ಟ್ ವತಿಯಿಂದ ಬಹುಮಾನ ವಿತರಿಸಲಾಯಿತು.

> **ಜಾತ್ರಾ ಮಹೋತ್ಸವ, ರಥೋತ್ಸವಕ್ಕೆ ಬಂದಿದ್ದ ಭಕ್ತರಿಗೆ ರೇವಣಸಿದ್ದೇಶ್ವರ ಸ್ವಾಮಿ ಅಭಿವೃದ್ಧಿ ಸೇವಾ ಟ್ರಸ್ಟ್ ಮತ್ತು ರೇವಣಸಿದ್ದೇಶ್ವರ ಬೆಟ್ಟದ ದಾಸೋಹ ಮಠದಲ್ಲಿ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಅವರೆಕಾಳು ಸಾರು ಮುದ್ದೆ ಅನ್ನ ಪಲ್ಯ ಒಳಗೊಂಡ ಪ್ರಸಾದವನ್ನು ನೀಡಲಾಯಿತು. ಜೊತೆಗೆ ಸ್ಥಳೀಯರು ಬಿಸಿಲಿನಿಂದ ಬಾಯಾರಿದವರಿಗೆ ಮಜ್ಜಿಗೆ ಪಾನಕ ಹಾಗೂ ಕೋಸಂಬರಿ ವಿತರಿಸಿದರು. ಹುಲಿಕೆರೆ-ಗುನ್ನೂರು ಗ್ರಾಮ ಪಂಚಾಯಿತಿ ವತಿಯಿಂದ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿತ್ತು.**

### ವೈದ್ಯಕೀಯ ತಂಡ ನಿಯೋಜನೆ

**ರಥೋತ್ಸವ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಸ್ಥಳದಲ್ಲಿ ರಾಮನಗರ ಗ್ರಾಮಾಂತರ ವೃತ್ತ ನಿರೀಕ್ಷಕ ರಮೇಶ್ ಮತ್ತು ನಗರ ವೃತ್ತ ನಿರೀಕ್ಷಕ ಲಕ್ಷ್ಮಯ್ಯ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ತುರ್ತು ಸಂದರ್ಭಕ್ಕಾಗಿ ಆಂಬುಲೆನ್ಸ್, ಅಗ್ನಿಶಾಮಕ ದಳದ ವಾಹನವನ್ನು ಸನ್ನದ್ಧ ಸ್ಥಿತಿಯಲ್ಲಿದ್ದರು. ವೈದ್ಯಕೀಯ ತಂಡವನ್ನು ಸಹ ನಿಯೋಜನೆ ಮಾಡಲಾಗಿತ್ತು.**

# ಮಿನಿ ನ್ಯೂಸ್

## ಬಸ್ ಡಿಕ್ಕಿ: ಬೈಕ್ ಸವಾರ ಸಾವು

• ಉದಯವಾಹಿನಿ, ಶ್ರೀರಂಗಪಟ್ಟಣ

ಬೈಕ್‌ಗೆ ರಾಜ್ಯ ಸಾರಿಗೆ ಸಂಸ್ಥೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಮೃತಪಟ್ಟಿರುವ ಘಟನೆ ಪಟ್ಟಣದ ಪಶ್ಚಿಮವಾಹಿನಿ ಬಳಿ, ಕಾವೇರಿ ನದಿ ಸೇತುವೆ ಮೇಲೆ ನಡೆದಿದೆ. ತಾಲ್ಲೂಕಿನ ಪಾಲಹಳ್ಳಿಯ ಗಾರೆ ರಾಮಣ್ಣ (60) ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹಿಂಬದಿ ಸವಾರ ಅದೇ ಗ್ರಾಮದ ಸುಬ್ಬಣ್ಣ ಎಂಬವರು ಗಾಯ ಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಪಿಎಸ್‌ಐ ಶಿವಲಿಂಗ ದಳವಾಯಿ ಭೇಟಿ ನೀಡಿದ್ದರು. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸರಣಿ ಅಪಘಾತ: ಮಹಿಳೆ ಸಾವು

• ಉದಯವಾಹಿನಿ, ಕುದೂರು

ರಾಷ್ಟ್ರೀಯ ಹೆದ್ದಾರಿ 75ರ ನಾರಸಂದ್ರ ಬಸ್ ನಿಲ್ದಾಣದಲ್ಲಿ ಕಾರೊಂದು ಡಿಕ್ಕಿ ಹೊಡೆದ ಪರಿಣಾಮ, ಬಸ್‌ಗೆ ಕಾಯುತ್ತಿದ್ದ ನಿಂತಿದ್ದ ಮಹಿಳೆಯೊಬ್ಬರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ. ತಿಪ್ಪಸಂದ್ರ ಗ್ರಾಮದ ಮಂಗಳಾ (45) ಮೃತಪಟ್ಟ ಮಹಿಳೆ. ಇವರು ನಾಗರಸಂದ್ರದ ಎಸ್‌ಬಿಐ ಬ್ಯಾಂಕ್‌ನಲ್ಲಿ ಹೌಸ್ ಕೀಪಿಂಗ್ ಕೆಲಸ ಮಾಡುತ್ತಿದ್ದರು. ಇದೇ ಬ್ಯಾಂಕಿನಲ್ಲಿ ಕೆಲಸ ಮಾಡುತ್ತಿದ್ದ ಮಂಗಳಾ ಅವರ ಪತಿ ಆರು ತಿಂಗಳ ಹಿಂದಷ್ಟೇ ಮೃತಪಟ್ಟಿದ್ದರು.

ಬೆಂಗಳೂರು ಕಡೆಯಿಂದ ಕುಣಿಗಲ್ ಕಡೆಗೆ ಹೊರಟಿದ್ದ ಕಾರು ಅತಿ ವೇಗದಿಂದ ಪ್ಯಾಸೆಂಜರ್ ಆಟೋ ಮತ್ತು ಗೂಡ್ಸ್ ಆಟೋಗೆ ಡಿಕ್ಕಿ ಹೊಡೆದು ಬಳಿಕ ಮಂಗಳಾ ಅವರಿಗೆ ಹೊಡೆದಿದೆ. ಘಟನೆಯಲ್ಲಿ ಪ್ಯಾಸೆಂಜರ್ ಆಟೋ ಚಾಲಕ ಕೂಡ ಗಾಯಗೊಂಡಿದ್ದಾನೆ. ಈ ಸಂಬಂಧ ಕುದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಡಾನೆ ದಾಳಿ: ವಿದ್ಯಾರ್ಥಿ ಪಾರು

• ಉದಯವಾಹಿನಿ, ವಿರಾಜಪೇಟೆ

ಕಾಲೇಜಿಗೆ ತೆರಳುತ್ತಿದ್ದ ವಿದ್ಯಾರ್ಥಿಯೋರ್ವನ ಮೇಲೆ ಕಾಡಾನೆ ದಾಳಿ ಮಾಡಲು ಯತ್ನಿಸಿದ ಘಟನೆ ಗುರುವಾರ ಸಮೀಪದ ಚಂಬೆಬೆಳ್ಳೂರು ಗ್ರಾಮದ ಪುದುಕೋಟೆಯಲ್ಲಿ ನಡೆದಿದೆ. ಗೋಣಿಕೊಪ್ಪಲು ಕಾವೇರಿ ಕಾಲೇಜಿನಲ್ಲಿ ಪ್ರಥಮ ವರ್ಷದ ಪದವಿ ವ್ಯಾಸಂಗ ಮಾಡುತ್ತಿರುವ ಚಂಗಪ್ಪ ಎಂಬುವ ವಿದ್ಯಾರ್ಥಿ ಬೆಳಿಗ್ಗೆ ಕಾಲೇಜಿಗೆ ತೆರಳಲು ಬಸ್ ಗಾಗಿ ರಸ್ತೆಯಲ್ಲಿ ನಡೆದುಕೊಂಡು ಬರುತ್ತಿದ್ದಾಗ ದಿಢೀರ್ ಎದುರಾದ ಕಾಡಾನೆ ಆತನನ್ನು ಬೆನ್ನಟ್ಟಿದೆ. ವಿದ್ಯಾರ್ಥಿ ಚಂಗಪ್ಪ ಓಡಿ ಕಾಡಾನೆಯ ದಾಳಿಯಿಂದ ತಪ್ಪಿಸಿಕೊಂಡಿದ್ದಾರೆ. ಆದರೆ ಓಡುವ ಸಂದರ್ಭ ಬಿದ್ದು ವಿದ್ಯಾರ್ಥಿಗೆ ಗಾಯಗಳು ಉಂಟಾಗಿವೆ. ಬಳಿಕ ವಿದ್ಯಾರ್ಥಿಗೆ ವಿರಾಜಪೇಟೆಯ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಯಿತು. ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸ್ಥಳಕ್ಕೆ ತೆರಳಿ ಘಟನೆ ಕುರಿತು ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಮೈಲಾರಿ ಹೋಟೆಲ್ ದೋಸೆಯ ನೆನಪಿನಲ್ಲಿ ಕರಗಿಹೋದ ಸಿಎಂ

• ಉದಯವಾಹಿನಿ, ಮೈಸೂರು

ಸುಪ್ರಸಿದ್ಧ ವಿನಾಯಕ ಮೈಲಾರಿ ಹೊಟೇಲ್‌ನಲ್ಲಿ ಸಿಎಂ ಸಿದ್ದರಾಮಯ್ಯ ದೋಸೆ ಸವಿದು ತಮ್ಮ ಬಾಲ್ಯದ ದಿನಗಳನ್ನು ನೆನೆದು ಖುಷಿಪಟ್ಟಿದ್ದಾರೆ. ಊಟ ತಿಂಡಿಗೆ ಫೇಮಸ್ ಆಗಿರುವ ಮೈಸೂರಿನ ಓಲ್ಡ್ ಒರಿಜಿನಲ್ ವಿನಾಯಕ ಮೈಲಾರೊ ಹೊಟೇಲ್‌ಗೆ ಸಿಎಂ ಸಿದ್ದರಾಮಯ್ಯ ಖಾಯಂ ಗ್ರಾಹಕ. 83 ವರ್ಷ ಹಳೆಯದಾದ ಈ ಹೊಟೇಲ್‌ಗೆ ವಿದ್ಯಾರ್ಥಿ ಜೀವನದಿಂದಲೂ ಸಿದ್ದರಾಮಯ್ಯ ಚಿರಪರಿಚಿತರು.

ಹೀಗಾಗಿ ಮೇ.24 ಹೊಟೇಲ್‌ಗೆ ಭೇಟಿ ನೀಡಿದ ಸಿಎಂ ಕೊನೇಯ ಸೀಟ್‌ನಲ್ಲಿ ಕೂತು ದೋಸೆ ತಿಂದಿದ್ದಾರೆ ಈ ಬಗ್ಗೆ ಪೋಸ್ಟ್ ಹಾಕಿ ಮೈಸೂರಿನಲ್ಲಿ ತಮ್ಮ ಬಾಲ್ಯದ ದಿನಗಳನ್ನು ನೆನೆದಿದ್ದಾರೆ. ನನ್ನ ಬದುಕಿನ ಅವಿಸ್ಮರಣೀಯ ನೆನಪುಗಳೆಲ್ಲವೂ ಮೈಸೂರಿನ ಜೊತೆ ಬೆಸೆದುಕೊಂಡಿವೆ. ಮೈಸೂರು ನನಗೆ ಹುಟ್ಟೂರು ಮಾತ್ರವಲ್ಲ ಬದುಕು ಕೊಟ್ಟ ಊರು. ದೈಹಿಕವಾಗಿ ದೂರವಿದ್ದಾಗಲೂ ಮೈಸೂರಿನ ನೆನಪು ಮನಸ್ಸಿಗೆ ಸದಾ ಹತ್ತಿರವಾಗಿರುತ್ತದೆ. ಈ ಮಣ್ಣಿನ ಋಣ ಬಹಳ ದೊಡ್ಡದು, ಅದರೆದುರು ನಾವು ಸಣ್ಣವರು' ಎಂದು ಬರೆ ದುಕೊಂಡಿದ್ದಾರೆ. ಸಿಎಂ ಹೊಟೇಲ್‌ಗೆ ಬಂದ ಹಿ ನ್ನೆಲೆ ಉಳಿದ ಗ್ರಾಹ ಕರು ಖಾಲಿ ತಟ್ಟೆ ಇಟ್ಟುಕೊಂಡು ತಿಂಡಿಗಾಗಿ ಕಾದ ಪ್ರಸಂಗವೂ ಕಂಡುಬಂತು. ಇನ್ನು ಸಿಎಂಗೆ ಯತೀಂದ್ರ ಸಿದ್ದರಾಮಯ್ಯ ಸೇರಿ ಹಲವರು ಸಾಥ್ ನೀಡಿದ್ದರು.

## ಹಿಂದುತ್ವ ಪ್ರತಿಪಾದಕರಿಗೆ ಟಿಕೆಟ್ ಇಲ್ಲ: ಕೆ.ರಘುಪತಿ ಭಟ್

• ಉದಯವಾಹಿನಿ, ಮಡಿಕೇರಿ

ಹಿಂದುತ್ವ ಮತ್ತು ರಾಷ್ಟ್ರೀಯವಾದವನ್ನು ಪ್ರಬಲವಾಗಿ ಪ್ರತಿಪಾದನೆ ಮಾಡಿದವರಿಗೆ ಬಿಜೆಪಿಯಲ್ಲಿ ಟಿಕೆಟ್ ತಪ್ಪುತ್ತಿದೆ ಎಂಬ ಭಾವನೆ ಬಲವಾಗುತ್ತಿದೆ ಎಂದು ನೈರುತ್ಯ ಪದವೀಧರರ ಕ್ಷೇತ್ರದ ಸ್ವತಂತ್ರ ಅ ಭ್ಯರ್ಥಿ ಕೆ.ರಘುಪತಿ ಭಟ್ ಹೇಳಿದರು. 'ನನಗೆ ಪಕ್ಷದಿಂದ ಯಾವುದೇ ನೋಟಿಸ್ ಬಂದಿಲ್ಲ. ಬಂದರೆ ವಿವರವಾದ ಉತ್ತರ ಕೊಡುವೆ. ಮಾತ್ರವಲ್ಲ, ಪಕ್ಷದ ಶಿಸ್ತು ಸಮಿತಿ ವಿಚಾರಣೆಗೆ ಕರೆದರೆ ಹಾಜರಾಗಿ ವಿವರಣೆ ಕೊಡುವೆ' ಎಂದು ಅವರು ಇಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ನನಗೆ ಏಕೆ ಎರಡು ಬಾರಿ ಟಿಕೆಟ್ ಕೊಡಲಿಲ್ಲ ಎಂಬುದು ಗೊತ್ತಿಲ್ಲ. ಯಾರು ಟಿಕೆಟ್ ತಪ್ಪಿಸಿದರು ಎಂಬುದೂ ಗೊತ್ತಿಲ್ಲ. ಆದರೆ ಯಾರೊ ನಾಯಕರು ತಪ್ಪಿಸಿದಂತೂ ಹೌದು' ಎಂದರು. ಹಿಜಾಬ್ ವಿಷಯವನ್ನು ನಾನು ಸೃಷ್ಟಿ ಮಾಡಿದ್ದಲ್ಲ. ಕೆಲವು ಹೆಣ್ಣು ಮಕ್ಕಳನ್ನು ಕೆಲವೊಂದು ಸಂಘಟನೆಗಳು ದಾರಿ ತಪ್ಪಿಸಿದರು. ನಾನು ಮುಸ್ಲಿಮರು ಮತ್ತು ಕ್ರೈಸ್ತರ ವಿರೋಧಿ ಅಲ್ಲ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

## ನರಸಿಂಹ ಜಯಂತಿ ವಿಜೃಂಭಣೆ

• ಉದಯವಾಹಿನಿ, ಕುದೂರು

ಪಟ್ಟಣ, ಹೋಬಳಿಯಾದ್ಯಂತ ನರಸಿಂಹ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಪಟ್ಟಣದ ಪುರಾಣ ಪ್ರಸಿದ್ಧ ಲಕ್ಷ್ಮಿ ನರಸಿಂಹ ದೇವಾಲಯದಲ್ಲಿ ಬುಧವಾರ ಬೆಳಗ್ಗೆಯಿಂದಲೇ ದೇವರಿಗೆ ವಿಶೇಷ ಅಭಿಷೇಕ, ಹೂವಿನ ಅಲಂಕಾರ, ಸುದರ್ಶನ ನಾರಸಿಂಹ ಹೋಮ, ಪೂರ್ಣಾಹುತಿ ನಂತರ ಪ್ರಾಕಾರ ಉತ್ಸವ, ಮಹಾ ಮಂಗಳಾರತಿ, ನೆರೆದಿದ್ದ ಭಕ್ತರಿಗೆ ಪ್ರಸಾದದ ವ್ಯವಸ್ಥೆಯನ್ನು ದೇವಾಲಯದ ಸಮಿತಿ ವತಿಯಿಂದ ಮಾಡಲಾಗಿತ್ತು. ಹೋಬಳಿಯ ಪುರಾಣ ಪ್ರಸಿದ್ಧ ಸುಗ್ಗನಹಳ್ಳಿ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವಾಲಯದಲ್ಲಿ ನರಸಿಂಹ ಜಯಂತಿಯನ್ನು ವಿಜೃಂಭಣೆಯಿಂದ ನಡೆಸಲಾಯಿತು.

# ಬರದ ಬವಣೆ ನೀಗಿಸಿತು 'ಉಲ್ಲಾಸದ ಮಳೆ': ಗರಿಗೆದರಿದ ಕೃಷಿ ಚಟುವಟಿಕೆ

## • ಕುಡಿಯುವ ನೀರಿಗೂ ತತ್ವಾರ ಉಂಟಾಗಿದ್ದ ಗ್ರಾಮೀಣ ಪ್ರದೇಶದ ಜಲಮೂಲಗಳಲ್ಲಿ ನೀರು ಕಾಣಿಸಿಕೊಂಡಿದೆ

• **ಉದಯವಾಹಿನಿ ಚಿತ್ರದುರ್ಗ**

ಬೇಸಿಗೆಯಲ್ಲಿ ಬಿಸಿಗಾಳಿಗೆ ತತ್ತರಿಸಿದ್ದ ಜಿಲ್ಲೆಯ ಕೃಷಿಕರ ಬದುಕು ವಾರದಲ್ಲಿ ಬದಲಾಗಿದೆ. ಕುಡಿಯುವ ನೀರಿಗೂ ತತ್ವಾರ ಉಂಟಾಗಿದ್ದ ಗ್ರಾಮೀಣ ಪ್ರದೇಶದ ಜಲಮೂಲಗಳಲ್ಲಿ ನೀರು ಕಾಣಿಸಿಕೊಂಡಿದೆ. ಕೃತಿಕಾ ಮಳೆ ಇಳೆಯನ್ನು ತಂಪಾಗಿಸಿದ್ದು, ಬರದ ಬವಣೆಯನ್ನು ದೂರ ಮಾಡಿದೆ.

**ಕೃಷಿಕರ ಬದುಕು ವಾರದಲ್ಲಿ ಬದಲು**

ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಉಂಟಾಗಿದ್ದ ಮಳೆಯ ಕೊರತೆಯ ಪರಿಣಾಮ ಜಿಲ್ಲೆ ಭೀಕರ ಬರಕ್ಕೆ ತುತ್ತಾಗಿತ್ತು. ಬೇಸಿಗೆಯಲ್ಲಿ ಜನ ಮತ್ತು ಜಾನುವಾರು ಕುಡಿಯುವ ನೀರಿಗೂ ಪರಿತಪಿಸುವಂತಾಗಿತ್ತು. ಕೊಳವೆಬಾವಿಗಳು ಬತ್ತಿದ ಪರಿಣಾಮವಾಗಿ ಅಡಿಕೆ, ತೆಂಗಿನ ತೋಟಗಳು ಒಣಗಿ ಬರದ ತೀವ್ರತೆಯನ್ನು ಸಾರುತ್ತಿದ್ದವು. ಅಡಿಕೆ ತೋಟಗಳನ್ನು ಉಳಿಸಿಕೊಳ್ಳಲು ರೈತರು ಟ್ಯಾಂಕರ್ ಮೊರೆ ಹೋಗಿದ್ದರು 10 ದಿನಗಳಿಂದ ಸುರಿದ ಮುಂಗಾರುಪೂರ್ವ ಮಳೆ ಈ ಸಮಸ್ಯೆಗಳನ್ನು ನಿವಾರಿಸಿದೆ. ಜ.1ರಿಂದ ಮೇ 21ರವರೆಗೆ ಜಿಲ್ಲೆಯಲ್ಲಿ ಸರಾಸರಿ 79 ಮಿ.ಮೀ ಮಳೆಯಾಗಬೇಕಿತ್ತು.

ವಾಸ್ತವವಾಗಿ ಸರಾಸರಿ 118 ಮಿ.ಮೀ ಮಳೆಯಾಗಿದ್ದು, ಶೇ 48ರಷ್ಟು ಹೆಚ್ಚುವರಿ ಸುರಿದಿದೆ. ಮೇ ತಿಂಗಳಲ್ಲಿ 41 ಮಿ.ಮೀ ವಾಡಿಕೆ ಮಳೆಯಾಗಬೇಕಿತ್ತು. ಮೇ 1ರಿಂದ 21ರವರೆಗೆ 105 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 131 ಮಿ.ಮೀ ಮಳೆಯಾಗಿದ್ದು, ಜಿಲ್ಲೆಯಲ್ಲಿ ದಾಖಲಾದ ಅತಿ ಹೆಚ್ಚು ಮಳೆಯಾಗಿದೆ.

ಜಿಲ್ಲೆಯಾದ್ಯಂತ ಉತ್ತಮವಾಗಿ ಮಳೆ ಸುರಿದಿದ್ದರಿಂದ ಕೃಷಿ ಚಟುವಟಿಕೆ ಗರಿಗೆದರಿದೆ. ಮುಂಗಾರು ಬಿತ್ತನೆಗೆ ಭೂಮಿ ಹದ ಮಾಡಿಕೊಳ್ಳುವಲ್ಲಿ ರೈತರು ಉತ್ಸುಕತೆ ತೋರುತ್ತಿದ್ದಾರೆ. ನಿತ್ಯ ನೀರು ಎತ್ತುತ್ತಿದ್ದ ಕೊಳವೆಬಾವಿಗಳು ತಾತ್ಕಾಲಿಕವಾಗಿ ಕೆಲಸ ನಿಲ್ಲಿಸಿವೆ. ಜಮೀನುಗಳಲ್ಲಿ ಜೋಡೆತ್ತು ಬೇಸಾಯ, ಟ್ರ್ಯಾಕ್ಟರ್ ಸದ್ದು ಕೇಳತೊಡಗಿದೆ. ಬಿತ್ತನೆಯ ಕಡೆ ರೈತರ ಚಿತ್ತ


ಉದಯವಾಹಿನಿ ಚಿತ್ರ

ಹರಿದಿದೆ. ಜಿಲ್ಲೆಯ ಕೃಷಿ ಭೂಮಿಯಲ್ಲಿ ಶೇ 85ರಷ್ಟು ಪ್ರದೇಶ ಮುಂಗಾರು ಹಂಗಾಮನ್ನೇ ಅವಲಂಬಿಸಿದೆ. 3.40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗುವ ನಿರೀಕ್ಷೆ ಇದೆ. ಶೇಂಗಾ, ಮೆಕ್ಕೆಜೋಳ, ರಾಗಿ ಹಾಗೂ ಸಿರಿಧಾನ್ಯಗಳನ್ನು ಹೆಚ್ಚಾಗಿ ಬೆಳೆಯಲಾಗುತ್ತದೆ. ಹೊಸದುರ್ಗ, ಹೊಳಲ್ಕೆರೆ ಹಾಗೂ ಚಿತ್ರದುರ್ಗ ತಾಲ್ಲೂಕಿನಲ್ಲಿ ಮೇ ಅಂತ್ಯಕ್ಕೆ ಬಿತ್ತನೆ ಆರಂಭವಾಗುತ್ತದೆ. ಹೊಸದುರ್ಗ ತಾಲ್ಲೂಕಿನಲ್ಲಿ ಎಳ್ಳು, ಹೆಸರು ಹಾಗೂ ಸಿರಿಧಾನ್ಯಗಳ ಬಿತ್ತನೆಗೆ ರೈತರು ಭೂಮಿ ಸಜ್ಜುಗೊಳಿಸುತ್ತಿದ್ದಾರೆ. ಹತ್ತಿ, ಸೂರ್ಯಕಾಂತಿ, ಈರುಳ್ಳಿ ಬಿತ್ತನೆ ಕೂಡ ಮೇ ತಿಂಗಳಲ್ಲಿಯೇ ಶುರುವಾಗುತ್ತದೆ. ಮಳೆ ಬಿದ್ದಿರುವುದು ರೈತರಲ್ಲಿ ಹುಮ್ಮಸ್ಸು ಮೂಡಿಸಿದೆ.

**ಬಿತ್ತನೆ ಬೀಜ ರಸಗೊಬ್ಬರ ವಿತರಣೆಗೆ ಸಿದ್ಧತೆ**

ನಾಯಕನಹಟ್ಟಿ ಹೋಬಳಿಯಲ್ಲಿ ಬಿತ್ತನೆಗೆ ಭೂಮಿ ಹದ ಮಾಡಿಕೊಳ್ಳುತ್ತಿರುವ ರೈತ ಹಿರಿಯೂರು ತಾಲ್ಲೂಕಿನ ಛತ್ರಿಗುಡ್ಡದ ಮೇಲಿನಿಂದ ಕಾಣುವ ವಾಣಿವಿಲಾಸ ಜಲಾಶಯ. ಹೊಸ ನೀರು ಹರಿದುಬಂದಿದ್ದರಿಂದ ಜಲಾಶಯ ಮೈದುಂಬುತ್ತಿರುವಂತೆ ಕಾಣುತ್ತಿದೆ ಹೊಳಲ್ಕೆರೆ ತಾಲ್ಲೂಕಿನ ತೆಂಗಿನ ತೋಟದಲ್ಲಿ ನಿಂತಿರುವ ನೀರು-ಬಿ. ಮಂಜುನಾಥ್, ಜಂಟಿ ನಿರ್ದೇಶಕ ಕೃಷಿ ಇಲಾಖೆಮಳೆ ಉತ್ತಮವಾಗಿ ಸುರಿದಿರುವುದು ಕೃಷಿ ಚಟುವಟಿಕೆಗೆ ಅನುಕೂಲ ಕಲ್ಪಿಸಿದೆ. ಬರ ಪರಿಸ್ಥಿತಿ ಅಂತ್ಯವಾಗಿದೆ. ಬಿತ್ತನೆ ಬೀಜ ರಸಗೊಬ್ಬರ ವಿತರಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ.

> ರೋಹಿಣಿ ಮೃಗಶಿರ ಮತ್ತು ಆರಿದ್ರಾ ಮಳೆಗೆ ಬಿತ್ತನೆ ಕಾರ್ಯಕ್ಕೆ ಮುಂದಾಗುತ್ತಾರೆ. ಶೇಂಗಾ ಹತ್ತಿ ಸೂರ್ಯಕಾಂತಿ ಬಿತ್ತನೆಗೆ ಸಿದ್ಧತೆ ನಡೆಸಿದರೆ ಎನ್.ಮಹದೇವಪುರ ಭಾಗದ ರೈತರು ತೊಗರಿಯನ್ನು ಬಿತ್ತುತ್ತಾರೆ. ವಾರದಿಂದ ಸುರಿದ ಮಳೆಗೆ ಅಂತರ್ಜಲ ಮಟ್ಟ ಹೆಚ್ಚಾಗುವ ವಿಶ್ವಾಸ ಮೂಡಿದೆ. ನೀರಾವರಿ ಪ್ರದೇಶದಲ್ಲಿ ಈರುಳ್ಳಿ ಬೆಳೆಯಲು ರೈತರು ಮುಂದಾಗಿದ್ದಾರೆ. ಭರಣಿ ಮತ್ತು ಕೃತ್ತಿಕಾ ಮಳೆ ಸುರಿದಿದ್ದರಿಂದ ಈರುಳ್ಳಿ ಬೆಳೆಯಲು ಸೂಕ್ತವಾಗಿದೆ. ಇದರಿಂದ ಉತ್ತಮವಾದ ಇಳುವರಿ ಸಿಗಲಿದೆ ಎಂಬುದು ಬೆಳೆಗಾರರ ಅಭಿಪ್ರಾಯ **-ವಿ.ಧನಂಜಯ**

ಸಾಮಾನ್ಯವಾಗಿ ಈ ಬೆಳೆಗಳನ್ನು ರೋಹಿಣಿ ಮಳೆಯಲ್ಲಿ ಬಿತ್ತಲಾಗುತ್ತದೆ. ಕೃತಿಕಾ ಮಳೆ ನಿರೀಕ್ಷೆ ಮೀರಿ ಸುರಿದಿದ್ದರಿಂದ ಬಿತ್ತನೆಗೆ ಭೂಮಿ ಸಿದ್ಧಪಡಿಸಿಕೊಳ್ಳಲು ಅನುಕೂಲವಾಗಿದೆ. ನಿಗದಿತ ಅವಧಿಯಲ್ಲಿ ಬಿತ್ತನೆ ಮುಗಿದರೆ ಇಳುವರಿ ಚೆನ್ನಾಗಿ ಬರುತ್ತದೆ ಎಂಬುದು ರೈತರ ಬಲವಾದ ನಂಬಿಕೆ.

# ಪದವೀಧರ ಮತದಾರರು ಬಿಜೆಪಿಗೆ ಬೆಂಬಲಿ: ಕೆ.ಎಂ.ಬಾರಿ

• **ಉದಯವಾಹಿನಿ, ಚಿಂಚೋಳಿ**

ಬಿಜೆಪಿ ಈಶಾನ್ಯ ಪದವೀಧರರ ಮತಕ್ಷೇತ್ರದ ಅಭ್ಯರ್ಥಿ ಅಮರನಾಥ ಪಾಟೀಲರು 2012ರಿಂದ 2018ರವರೆಗೆ ಪದವೀಧರರ ಸೇವೆಸಲ್ಲಿಸಿದ ಆರು ವರ್ಷದ ಅವಧಿಯೇ ಅವರ ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದು ಬಿಜೆಪಿ ಅಲ್ಪಸಂಖ್ಯಾತರ ಘಟಕದ ರಾಜ್ಯ ಉಪಾಧ್ಯಕ್ಷ ಕೆಎಂ ಬಾರಿ ಹೇಳಿದರು.

ಪಟ್ಟಣದ ಬಿಜೆಪಿ ಮಂಡಲದ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ಈಶಾನ್ಯ ಪದವೀಧರರ ಮತಕ್ಷೇತ್ರದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು,ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲರು ಸೇವೆಸಲ್ಲಿಸಿದ ಪದವೀಧರರ ಮತದಿಂದ ಗೆದ್ದು ಆರು ವರ್ಷದಲ್ಲಿ ಕಲ್ಯಾಣ ಕರ್ನಾಟಕದ ಶಿಕ್ಷಕರ ಸಮಸ್ಯೆ,ಪದವೀಧರರ ಸಮಸ್ಯೆ ಇತರೆ ಶಿಕ್ಷಣಕ್ಕೆ ಸಂಬಂಧಿಸಿದ ಸಮಸ್ಯೆಗಳು ಅಧಿವೇಶನದಲ್ಲಿ ಧ್ವನಿ ಎತ್ತಿ ಸಮಸ್ಯೆಗಳು ಪರಿಹರಿಸಲಾಗಿದ್ದು,ಪದವೀಧರ ಮತಪ್ರಭುಗಳು ಇನ್ನೋಮ್ಮೆ ಅಮರನಾಥ ಪಾಟೀಲರಿಗೆ ಬಹುಮತದಿಂದ ಗೆಲ್ಲಿಸು


ಉದಯವಾಹಿನಿ ಚಿತ್ರ

ವಂತೆ ಮನವಿ ಮಾಡಿ ದರು. ಬಿಜೆಪಿ ಮಂಡಲ ಅಧ್ಯಕ್ಷ ವಿಜಯಕುಮಾರ ಚೆಂಗಟಾ ಸ್ವಾಗತಿಸಿದರು,ಪ್ರಧಾನ ಕಾರ್ಯದರ್ಶಿ ಗಿರಿರಾಜ ನಾಟೀಕಾರ ನಿರೂಪಿಸಿದರು, ಪ್ರಧಾನ ಕಾರ್ಯದರ್ಶಿ ರಾಮರಡ್ಡಿ ಪಾಟೀಲ ಚಿಮ್ಮನಚೋಡ ವಂದಿಸಿದರು. ಕಲಬುರ್ಗಿ ಜಿಲ್ಲಾ ಬಿಜೆಪಿ ಈಶಾನ್ಯ ಪದವೀಧರರ ಚುನಾವಣೆ ಪ್ರಭಾರಿ ಗುರುನಾಥ ಜಂತ್ತಿಕರ್ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರೇಮಸಿಂಗ್ ಜಾಧವ,ರಾಜು ಪವ್ವಾರ, ಅಶೋಕ ಚವ್ವಾಣ,ಭೀಮಶೆಟ್ಟಿ ಮುರುಡಾ, ಶ್ರೀಮಂತ ಕಟ್ಟಿಮನಿ, ಹಣಮಂತ ಭೋವಿ, ಸಂತೋಷ ಗಡಂತಿ, ಶ್ರೀನಿವಾಸ್ ಚಿಂಚೋಳಿಕರ್, ರಾಮು ರಾಠೋಡ್, ರಾಕೇಶ ಗೋಸೂಲ, ಅಭಿಷೇಕ ಮಲಕನೂರ, ಶಿವಯೋಗಿ ರುಸ್ತಾಂಪೂರ, ಸಮದ್ ಖಾನ, ಶ್ರೀಕಾಂತ ಪಿತ್ತಲ, ಲೋಕೇಶ ಶೇಳ್ಳಗಿ, ಜನಾರ್ಧನ ಎಂಪಳ್ಳಿ, ಅನೇಕರಿದ್ದರು.

> ಕಳೆದ ಒಂದು ಬಾರಿಗೆ ಪದವೀಧರರ ಎಂಎಲ್ಸಿಯಾಗಿ ಪದವೀಧರರ ಬಗ್ಗೆ ಅಧಿವೇಶನದಲ್ಲಿ 371ಜೆ,ಶಿಕ್ಷಕರ ಕೊರತೆ,ಪದವೀಧರರ ಸಮಸ್ಯೆಗಳ ಬಗ್ಗೆ ಪ್ರೇಶ್ನೆ ಹೇಳುವುದರ ಮೂಲಕ ಈ ಭಾಗದ ಅಭಿವೃದ್ಧಿಗಾಗಿ ಚಿಂತನೆ ಮಾಡುವ ಅಮರನಾಥ ಪಾಟೀಲರಿದ್ದು ಪದವೀಧರ ಮತದಾರರು ಬಿಜೆಪಿಗೆ ಬೆಂಬಲಿಸಿ ಗೆಲ್ಲಿಸಿದರೆ ಸಮಗ್ರ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಶ್ರಮಿಸುತ್ತಾರೆ
> **-ಗೋಪಾಲರಾವ ಕಟ್ಟಿಮನಿ,** ಹಿರಿಯ ಮುಖಂಡ


# ಬೆಳೆಹಾನಿಗೆ ಸೂಕ್ತ ಪರಿಹಾರ ಒದಗಿಸಿ

• **ಉದಯವಾಹಿನಿ, ದಾವಣಗೆರೆ**

ಹಾನಿಗೊಳಗಾದ ಕಬ್ಬು ಬೆಳೆಗೆ ಸೂಕ್ತ ಪರಿಹಾರ, ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಒದಗಿಸುವಂತೆ ಒತ್ತಾಯಿಸಿ ನಗರದ ಸ್ವಾಭಿಮಾನಿ ಬಳಗದಿಂದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮನವಿಪತ್ರ ಸಲ್ಲಿಸಲಾಯಿತು.

ಈಗಾಗಲೇ ಕೆಲವು ರೈತ ಮುಖಂಡರು ಸೂಕ್ತ ಪರಿಹಾರ ಕೋರಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದಾರೆ. ಜಿಲ್ಲೆಯ 2,070 ಎಕರೆ ಕಬ್ಬು ಒಣಗಿ ನಾಶವಾಗಿದ್ದು, ಕಳೆದ ವರ್ಷ ಜೂನ್‌ನಿಂದ ನವೆಂಬರ್ ಅವಧಿಯಲ್ಲಿ ರೈತರು ಕಬ್ಬಿನ ನಾಟಿ ಮಾಡಿದ್ದರು. ನಿರೀಕ್ಷಿತ ಬೆಳೆ ಕೈಗೆ ಸಿಗದೆ ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಜಿಲ್ಲಾಡಳಿತ ಮತ್ತು ಕರ್ನಾಟಕ ರಾಜ್ಯ ಸರ್ಕಾರ ಕೂಡಲೇ ಅವರ ನೆರವಿಗೆ ಧಾವಿಸಿ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿ ಬಳಗದ ಸಂಸ್ಥಾಪಕ ಜಿ.ಬಿ. ವಿನಯಕುಮಾರ್ ಅವರು ಹೆಚ್ಚುವರಿ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ ಅವರಿಗೆ


ಉದಯವಾಹಿನಿ ಚಿತ್ರ

ಮನವಿ ಸಲ್ಲಿಸಿದರು.

ಬರಗಾಲದಿಂದ ರೈತರು ತತ್ತರಿಸಿ ಹೋಗಿದ್ದಾರೆ. ಮಳೆ ಪ್ರಾರಂಭವಾಗಿದ್ದು ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿದ್ದಾರೆ. ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಗೆ ಜಿಲ್ಲಾಡಳಿತ ಕ್ರಮ ವಹಿಸಬೇಕು. ಕಾಳಸಂತೆಯಲ್ಲಿ ಮಾರಾಟ ಮಾಡುವವರ ಮೇಲೆ ನಿಗಾವಹಿಸಬೇಕು' ಎಂದು ಆಗ್ರಹಿಸಿದರು. ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತ ಪ್ರತಿ ಗ್ರಾಮಕ್ಕೂ ಭೇಟಿ ನೀಡಿ ರೈತರ ಕುಂದು-ಕೊರತೆಗಳನ್ನು ಆಲಿಸಿ, ಸಮಸ್ಯೆ ಪರಿಹರಿಸಬೇಕು' ಎಂದು ಆಗ್ರಹಿಸಿದರು.

# ಅರ್ಜಿ ವಿಲೇವಾರಿ ವಿಳಂಬ, ಸಾರ್ವಜನಿಕರ ಪರದಾಟ

• **ಉದಯವಾಹಿನಿ, ಕಲಘಟಗಿ**

ಇಲ್ಲಿನ ಪಟ್ಟಣ ಪಂಚಾಯಿತಿಯಲ್ಲಿ ಕಾಯಂ ಮುಖ್ಯಾಧಿಕಾರಿ ಇಲ್ಲ. ಅಧ್ಯಕ್ಷ ಸ್ಥಾನ ಸಹ ಕಳೆದ ಒಂದು ವರ್ಷದಿಂದ ಖಾಲಿ ಇದೆ. ಹೀಗಾಗಿ ಪಟ್ಟಣದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿವೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.ಒಂದೇ ವರ್ಷದಲ್ಲಿ 7 ಜನ ಮುಖ್ಯಾಧಿಕಾರಿಗಳನ್ನು ಪಟ್ಟಣ ಪಂಚಾಯಿತಿ ಕಂಡಿದೆ.

ಪಟ್ಟಣ ವ್ಯಾಪ್ತಿಯ ಸಾರ್ವಜನಿಕರು ಹಲವು ಕೆಲಸಗಳಿಗಾಗಿ ನಿತ್ಯ ಕಚೇರಿಗೆ ಅಲೆಯುತ್ತಿದ್ದರೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿ ಬಂದಿವೆ. ಪಟ್ಟಣದಲ್ಲಿ ಒಟ್ಟು 17 ವಾರ್ಡ್‌ಗಳಿವೆ. ಪಟ್ಟಣ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಒಂದು ವರ್ಷದಿಂದ ಚುನಾವಣೆ



ಉದಯವಾಹಿನಿ ಚಿತ್ರ

ನಡೆದಿಲ್ಲ. ಹೀಗಾಗಿ ಅಧ್ಯಕ್ಷ ಸ್ಥಾನ ಖಾಲಿ ಇದೆ. ಸದ್ಯ ತಹಶೀಲ್ದಾರ್ ಯಲ್ಲಪ್ಪ ಗೋಣೆನ್ನವರ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿಯಾಗಿ ನೇಮಕವಾಗಿದ್ದಾರೆ.

ಉಸ್ತುವಾರಿ ಸಚಿವರು ಗಮನಹರಿಸಲಿ: 'ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಕ್ಷೇತ್ರದ ಶಾಸಕರು ಪಟ್ಟಣ ಪಂಚಾಯಿತಿಗೆ ಕಾಯಂ ಮುಖ್ಯಾಧಿಕಾರಿ ನೇಮಕಕ್ಕೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಬಾಕಿ ಅರ್ಜಿ ವಿಲೇವಾರಿಗೆ ಸೂಚಿಸಬೇಕು' ಎಂಬುದು ಪಟ್ಟಣದ ಜನರ ಆಗ್ರಹವಾಗಿದೆ.

# ತಾಲ್ಲೂಕಿನಲ್ಲಿ ಉತ್ತಮ ಮಳೆ: ಬಿತ್ತನೆ ಕಾರ್ಯಕ್ಕೆ ರೈತರು ಸಜ್ಜು

• **ಉದಯವಾಹಿನಿ, ಹಾನಗಲ್**

ತಾಲ್ಲೂಕಿನಲ್ಲಿಮುಂಗಾರು ಪೂರ್ವ ಮಳೆ ಉತ್ತಮವಾಗಿದ್ದು, ರೈತರು ಬಿತ್ತನೆ ಕಾರ್ಯಕ್ಕಾಗಿ ಭೂಮಿ ಹದಗೊಳಿಸುವುದರಲ್ಲಿ ತೊಡಗಿದ್ದು, ಕೃಷಿ ಚಟುವಟಿಕೆಗಳು ಗರಿಗೆದರಿವೆ. ತಗ್ಗು ಪ್ರದೇಶದ ಕೆಲವೊಂದು ಕೃಷಿ ಭೂಮಿಯಲ್ಲಿ ಬಿತ್ತನೆ ಕಾರ್ಯ ನಡೆಯುತ್ತಿದೆ.

ಆದರೆ ಮೇ 22 ರ ವರೆಗೆ 102 ಮಿ. ಮೀ ಮಳೆಯಾಗಿದೆ. ವಾಡಿಕೆಗಿಂತ 28 ಮಿ.ಮೀ ಮಳೆ ಅಧಿಕವಾಗಿದೆ. ಈ ಬಾರಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗುವ ವರದಿಗಳು ಹವಾಮಾನ ಇಲಾಖೆಯಿಂದ ಬಂದಿವೆ.

**ಕೃಷಿ ಭೂಮಿಯಲ್ಲಿ ಬಿತ್ತನೆ ಕಾರ್ಯ**

ತಾಲ್ಲೂಕಿನಲ್ಲಿ ಒಟ್ಟು 47,663 ಹೆಕ್ಟೇರ್ ಕೃಷಿ ಭೂಮಿಯಲ್ಲಿ ಬಿತ್ತನೆ ಗುರಿ ಹೊಂದಲಾಗಿದ್ದು, ಪ್ರಮುಖ ಬೆಳೆಗಳಾದ ಭತ್ತ 14,350 ಹೆಕ್ಟೇರ್, ಗೋವಿನಜೋಳ 24,103 ಹೆಕ್ಟೇರ್, ಶೇಂಗಾ 888 ಹೆಕ್ಟೇರ್, ಸೋಯಾಬಿನ್ 2,403 ಹೆಕ್ಟೇರ್,


ಉದಯವಾಹಿನಿ ಚಿತ್ರ

ಹತ್ತಿ 3,100 ಹೆಕ್ಟೇರ್, ಕಬ್ಬು 2,700 ಹೆಕ್ಟೇರ್ ಬಿತ್ತನೆಯ ಗುರಿಯನ್ನು ಕೃಷಿ ಇಲಾಖೆ ಹೊಂದಿದೆ.

ಬಿತ್ತನೆಗೆ ಮಳೆ ಪೂರಕವಾಗಿ ಸುರಿಯುತ್ತಿರುವ ಕಾರಣ ಬಿತ್ತನೆ ಬೀಜಗಳ ಖರೀದಿಯತ್ತ ರೈತರು ಆಸಕ್ತಿ ವಹಿಸುತ್ತಿದ್ದಾರೆ. ಕೃಷಿ ಇಲಾಖೆಯಿಂದ ತಾಲ್ಲೂಕಿನ 9 ಕೇಂದ್ರಗಳಲ್ಲಿ ಸಹಾಯಧನದಲ್ಲಿ ಬಿತ್ತನೆ ಬೀಜ ವಿತರಣೆ ಗುರುವಾರದಿಂದ ಆರಂಭಗೊಂಡಿದೆ.

> ಬಿತ್ತನೆ ಸಮಯದಲ್ಲಿ ರೈತರು ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ, ಡಿಎಪಿ ರಸಗೊಬ್ಬರ ಉಪಯೋಗಿಸುವ ಬದಲಾಗಿ ಕಾಂಪ್ಲೆಕ್ಸ್ ಗೊಬ್ಬರ ಬಳಕೆಯಿಂದ ಕ್ಯಾಲ್ಸಿಯಂ, ಮ್ಯಾಗ್ನಿಸಿಯಂ, ಸಲ್ಫರ್ ಅಂಶಗಳನ್ನು ಬೆಳೆಗಳಿಗೆ ಒದಗಿಸಬಹುದು'
> **-ಸಂಗಮೇಶ ಹಕ್ಲಪ್ಪನವರ,** ಕೃಷಿ ಅಧಿಕಾರಿ

ಹಾನಗಲ್, ಚಿಕ್ಕಾಂಶಿಹೊಸೂರ, ಅಕ್ಕಿಆಲೂರ, ತಿಳವಳ್ಳಿ, ಆಡೂರ, ಬಮ್ಮನಹಳ್ಳಿ, ಬೆಳಗಾಲಪೇಟೆ, ಮಾರನಬೀಡ, ವರ್ದಿ ಗ್ರಾಮಗಳಲ್ಲಿ ಬಿತ್ತನೆ ಬೀಜ ವಿತರಣೆ ಕೇಂದ್ರಗಳನ್ನು ಕೃಷಿ ಇಲಾಖೆ ತೆರೆದಿದೆ. ಯೂರಿಯಾ, ಡಿಎಪಿ, ಕಾಂಪ್ಲೆಕ್ಸ್ ಸೇರಿ ಒಟ್ಟು 5,321 ಟನ್ ರಸಗೊಬ್ಬರ ದಾಸ್ತಾನು ಇದೆ' ಎಂದು ಸಹಾಯಕ ಕೃಷಿ ನಿರ್ದೇಶಕ ಕೆ.ಮೋಹನಕುಮಾರ ತಿಳಿಸಿದ್ದಾರೆ.

# ಬೋಧನೆಗೆ ಅತಿಥಿ ಉಪನ್ಯಾಸಕರೇ ಆಸರೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮುಂಡರಗಿ**

ಪಟ್ಟಣವು ಸೇರಿದಂತೆ ತಾಲ್ಲೂಕಿನಲ್ಲಿ ಒಟ್ಟು ಮೂರು ಸರ್ಕಾರಿ ಪಿಯು ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಕಲೆ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗಗಳನ್ನು ಒಳಗೊಂಡಿರುವ ಪಟ್ಟಣದ ಸರ್ಕಾರಿ ಪಿಯು ಕಾಲೇಜು ಅತ್ಯಧಿಕ ವಿದ್ಯಾರ್ಥಿಗಳನ್ನು ಹೊಂದಿದೆ. ಪಟ್ಟಣದ ಸರ್ಕಾರಿ ಪಿಯು ಕಾಲೇಜು ಸುಸಜ್ಜಿತವಾದ ಎರಡು ಪ್ರತ್ಯೇಕ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವಿಜ್ಞಾನ, ವಾಣಿಜ್ಯ ಹಾಗೂ ಕಲಾ ವಿಭಾಗಗಳನ್ನು ಒಳಗೊಂಡಿದೆ.

ಕಾಲೇಜು ತಾಲ್ಲೂಕು ಕೇಂದ್ರದಲ್ಲಿರುವುದರಿಂದ ಪಟ್ಟಣ ಹಾಗೂ ತಾಲ್ಲೂಕು ಸೇರಿದಂತೆ ಪಕ್ಕದ ಕೊಪ್ಪಳ, ಹೂವಿನಹಡಗಲಿ, ಶಿರಹಟ್ಟಿ ಮೊದಲಾದ ತಾಲ್ಲೂಕುಗಳಿಂದಲೂ ವಿದ್ಯಾರ್ಥಿಗಳು ಇಲ್ಲಿಗೆ ಬರುತ್ತಾರೆ. ಎಸ್ಎಸ್ಎಲ್ಸಿ ಪಾಸಾದವರಿಗಿಲ್ಲಾ ಇಲ್ಲಿ ಮುಕ್ತ

**ಉತ್ತಮ ಫಲಿತಾಂಶ**

ಈ ವರ್ಷ ಕಾಲೇಜಿನಲ್ಲಿ ಡಿಜಿಟಲ್ ಗ್ರಂಥಾಲಯ ಆರಂಭಗೊಂಡಿದ್ದು, ಈ ವರ್ಷದಿಂದ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ತರಬೇತಿಯನ್ನೂ ನೀಡಲಾಗುತ್ತಿದೆ. ಕಾಲೇಜು ಪ್ರತಿ ವರ್ಷ ಉತ್ತಮ ಫಲಿತಾಂಶ ನೀಡುತ್ತಲಿದ್ದು, ಕಳೆದ ವರ್ಷ ಕಾಲೇಜಿನ ಒಟ್ಟು ಪಲಿತಾಂಶ ಶೇ 78.89ರಷ್ಟಾಗಿದೆ.

ಪ್ರವೇಶ ದೊರೆಯುತ್ತದೆ. ಪಟ್ಟಣದಲ್ಲಿ ಹಲವಾರು ಸರ್ಕಾರಿ ವಸತಿ ನಿಲಯಗಳಿವೆ. ಕಾಲೇಜಿನಲ್ಲಿ ಶುದ್ಧ ಕುಡಿಯುವ ನೀರು, ಪ್ರತ್ಯೇಕ ಶೌಚಾಲಯ ಮೊದಲಾದ ಸೌಲಭ್ಯಗಳಿವೆ. ಹೀಗಾಗಿ ಪ್ರತಿ ವರ್ಷ ಇಲ್ಲಿಯ ವಿದ್ಯಾರ್ಥಿಗಳ ಸಂಖ್ಯೆ ಸಾವಿರ ದಾಟುತ್ತಲಿದೆ.

ಕಳೆದ ಶೈಕ್ಷಣಿಕ ವರ್ಷದಲ್ಲಿ ಪಟ್ಟಣದ ಸರ್ಕಾರಿ ಪಿಯು ಕಾಲೇಜಿನಲ್ಲಿ ಒಟ್ಟು 1,047 ವಿದ್ಯಾರ್ಥಿಗಳು ಪ್ರವೇಶ ಪಡೆದುಕೊಂಡಿದ್ದರು. ಪ್ರಸ್ತುತ ವರ್ಷ ಕಾಲೇಜಿಗೆ ಸಂಸ್ಕೃತ, ಶಿಕ್ಷಣ, ಐಚ್ಛಿಕ ಕನ್ನಡ ಮೊದಲಾದ ವಿಷಯಗಳು ಮಂಜೂರಾಗಿವೆ. ಜೊತೆಗೆ ಕಾಲೇಜಿನ ವಿಜ್ಞಾನ ವಿಭಾಗವು ಪ್ರಸ್ತುತ ವರ್ಷ ಜಿಲ್ಲೆಯ ಉನ್ನತೀಕರಿಸಿದ ಆದರ್ಶ ವಿಜ್ಞಾನ ವಿಭಾಗವೆಂದು ಮನ್ನಣೆ ಪಡೆದುಕೊಂಡಿದೆ.

# ಗಂಧಾಕ್ಷತೆಗೆ ಸೀಮಿತ ಜಾತಿ ಹೆಸರು ಪ್ರಸ್ತಾಪದ ಆರೋಪ: ವಾಗ್ವಾದ

• **ಉದಯವಾಹಿನಿ, ಕೊಪ್ಪಳ**

ತಾಲ್ಲೂಕಿನ ಹುಲಿಗಿಯ ಹುಲಿಗೆಮ್ಮ ದೇವಿ ದೇವಸ್ಥಾನದಲ್ಲಿ ಗಂಧಾಕ್ಷತೆ ವೇಳೆ ಸೀಮಿತ ಜಾತಿ ಹೆಸರು ಬಳಸಿ ಕೆಲ ಜಾತಿಯ ಹೆಸರು ಕೈ ಬಿಡಲಾಗುತ್ತಿದೆ ಎನ್ನುವ ಆರೋಪ ಕೇಳಿಬಂದಿದ್ದು, ಈ ಕಾರಣಕ್ಕಾಗಿ ವಾಗ್ವಾದ ನಡೆದಿದೆ.

ಗಂಧಾಕ್ಷತೆ ವಿಚಾರದಲ್ಲಿ ದೇವಸ್ಥಾನದ ಅರ್ಚಕರು ತಾರತಮ್ಯ ಮಾಡುತ್ತಿದ್ದಾರೆ ಎಂದು ದೇವಾಲಯ ಆಡಳಿತ ಮಂಡಳಿ ಅಧ್ಯಕ್ಷ ವೀರೇಶ ಎಂಬುವವರು ಈ ಹಿಂದೆ ಜಿಲ್ಲಾಧಿಕಾರಿಗೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ವಿವರ ನೀಡುವಂತೆ ಕೇಳಿ ಜಿಲ್ಲಾಡಳಿತ ದೇವಸ್ಥಾನದ ಇಒ ಅವರಿಗೆ ಪತ್ರ ಬರೆದಿತ್ತು. ಗಂಧಾಕ್ಷತೆ ಎಂಬುದು ಪೂಜಾ ಕೈಂಕರ್ಯದ ಕಾರ್ಯವಿಧಾನವಾಗಿದ್ದು ವೈದಿಕ ಬ್ರಾಹ್ಮಣರು, ದೇಸಾಯಿ, ಸರ್ಕಾರದವರು, ಅಯ್ಯನವರು ಹೀಗೆ ಉಪನಾಮ ಹೇಳಿ ಪೂಜೆ ಸಲ್ಲಿಸಲಾಗುತ್ತದೆ. ಬೇರೆ ಜಾತಿಯವರ ಹೆಸರು ಬಳಸದೆ ತಾರತಮ್ಯ ಮಾಡಲಾಗುತ್ತಿದೆ ಎನ್ನುವುದು ಒಂದು ಗುಂಪಿನವರ ಆಕ್ಷೇಪವಾಗಿತ್ತು. ಅರ್ಚಕರು ಈ ವಿಷಯದಲ್ಲಿ ತಾರತಮ್ಯ ಮಾಡುತ್ತಿದ್ದಾರೆ ಎನ್ನುವ ಆರೋಪವೂ ಕೇಳಿಬಂದಿದ್ದು ಇದೇ ಕಾರಣಕ್ಕಾಗಿ ಮಾತಿನ ಚಕಮಕಿ ನಡೆದಿದೆ. ಆಗ ಕೊಪ್ಪಳ ತಹಶೀಲ್ದಾರ್ ವಿಠ್ಠಲ ಚೌಗುಲಾ, ಗ್ರಾಮೀಣ ಠಾಣೆಯ ಸಿಪಿಐ ಸುರೇಶ ಡಿ. ಎಲ್ಲರನ್ನೂ ಸಮಾಧಾನಪಡಿಸಿದ್ದಾರೆ ಎಂದು ಮೂಲಗಳಿಂದ ತಿಳಿದುಬಂದಿದೆ.

# ಪರಿಷತ್ ಟಿಕೆಟ್‌ಗೆ ಪ್ರತಾಪಗೌಡ ಬಿಗಿ ಪಟ್ಟು

• **ಉದಯವಾಹಿನಿ, ಮಸ್ಕಿ**

ವಿಧಾನ ಪರಿಷತ್‌ಗೆ ಬಿಜೆಪಿ ಟಿಕೆಟ್ ಪಡೆಯಲು ಮಾಜಿ ಶಾಸಕ ಪ್ರತಾಪಗೌಡ ಪಾಟೀಲ ಪಟ್ಟು ಹಿಡಿದಿದ್ದು ಕಳೆದು ಮೂರು ದಿನಗಳಿಂದ ತೀವ್ರ ಪೈಪೋಟಿ ನಡೆಸುತ್ತಿದ್ದಾರೆ. ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಡಾ.ಶಿವರಾಜ ಪಾಟೀಲ ಸೇರಿದಂತೆ ಜಿಲ್ಲೆಯ ಹಾಗೂ ಕ್ಷೇತ್ರದ ಕೆಲವು ಮುಖಂಡರು ಪಕ್ಷದ ವರಿಷ್ಠರನ್ನು ಭೇಟಿಯಾಗಿ ಪ್ರತಾಪಗೌಡ ಪರವಾಗಿ ಮನವಿ ಮಾಡಲಿದ್ದಾರೆ ಎಂದು ಪಕ್ಷದ ಹಿರಿಯ ಮುಖಂಡರೊಬ್ಬರು ತಿಳಿಸಿದ್ದಾರೆ.



**ವರಿಷ್ಠರನ್ನು ಭೇಟಿಯಾಗಿ ಮನವಿ**

2018ರಲ್ಲಿ ಕಾಂಗ್ರೆಸ್‌ನಿಂದ ಆಯ್ಕೆಯಾಗಿದ್ದ ಪ್ರತಾಪಗೌಡ ಪಾಟೀಲ ಒಂದೇ ವರ್ಷದಲ್ಲಿ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರ ಕೆಡವುವಲ್ಲಿ ಪ್ರಮುಖ ಪಾತ್ರವಹಿಸಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

17 ಜನ ವಲಸಿಗರಲ್ಲಿ ಪ್ರತಾಪಗೌಡ ಮೊದಲಿಗರಾಗಿ ಬಿ.ಎಸ್. ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಮಾಡಲು ಕಾರಣರಾಗಿದ್ದರು. ಬಳಿಕ ನಡೆದ ಉಪ ಚುನಾವಣೆ, 2023ರ ವಿಧಾನಸಭೆ ಚುನಾವಣೆಯಲ್ಲಿ ಸೋಲುಂಡ ಪ್ರತಾಪಗೌಡ ಪಾಟೀಲ ರಾಜಕೀಯವಾಗಿ ಕುಗ್ಗಿದ್ದರು.

ಈಗ ಖಾಲಿಯಾಗುತ್ತಿರುವ ವಿಧಾನ ಪರಿಷತ್ ಸ್ಥಾನಕ್ಕೆ ಬಿಜೆಪಿ ಟಿಕೆಟ್ ಪಡೆದು ರಾಜಕೀಯ ಪುನರ್ ಜನ್ಮ ಪಡೆಯಲು ಮುಂದಾಗಿದ್ದಾರೆ.

ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ಶಾಸಕ ಬಸವರಾಜ ಬೊಮ್ಮಾಯಿ, ಸದಾನಂದಗೌಡ, ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ ವಿಜಯೇಂದ್ರ ಸೇರಿದಂತೆ ಹಲವು ಮುಖ ಂಡರನ್ನು ಭೇಟಿಯಾಗಿ, ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಮೊದಲ ಹೆಜ್ಜೆ ಇಟ್ಟ ನನಗೆ ಅನ್ಯಾಯವಾಗಿದ್ದು ಪರಿಷತ್ ಟಿಕೆಟ್ ನೀಡಿ ನ್ಯಾಯ ಕೊಡಬೇಕು ಎಂದು ಮನವಿ ಮಾಡಿದ್ದಾರೆ.

# ಪಕ್ಷದ ಮುಖಂಡರು ಪದವೀಧರರ ಮನವೋಲಿಸುವ ಕೆಲಸ ಮಾಡಿ

## ಎಂಎಲ್ಎ, ಎಂಪಿ ಚುನಾವಣೆ ಎಷ್ಟು ಮುಖ್ಯವೊ, ಪದವೀಧರರ ಚುನಾವಣೆ ಅಷ್ಟೇ ಮುಖ್ಯ: ಕೆಪಿಸಿಸಿ ಉಪಾಧ್ಯಕ್ಷ ರಾಠೋಡ್

• **ಉದಯವಾಹಿನಿ, ಚಿಂಚೋಳಿ**

ಯಾವುದೇ ಬಿಲ್ ಪಾಸ್ ಮಾಡಬೇಕಾದರೆ ಕೆಳಮನೆ ಮೇಲ್ಮನೆ ಎರಡು ಕಡೆ ಬಿಲ್ ಪಾಸ್ ಮಾಡಬೇಕಾದರೆ ಬಹುಮತ ಅವಶ್ಯಕತೆವಿರುತ್ತೆ ಪಕ್ಷದ ಜವಾಬ್ದಾರಿ ಮುಖಂಡರು ಕಾರ್ಯಕರ್ತರು ಎಂಎಲ್ಎ, ಎಂಪಿ ಚುನಾವಣೆ ಎಷ್ಟು ಮುಖ್ಯವೊ ಪದವೀಧರರ ಚುನಾವಣೆ ಅಷ್ಟೆ ಮುಖ್ಯವೆಂದು ಅರಿತು ಚುನಾವಣೆಯಲ್ಲಿ ಕೆಲಸ ಮಾಡಬೇಕು ಎಂದು ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಹೇಳಿದರು.

**ಬೂತ್ ಮಟ್ಟದಲ್ಲಿ ಕೆಲಸ**

ಪಟ್ಟಣದ ಜಾಗೀರಾದಾರ ಸಭಾಂಗಣದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಈಶಾನ್ಯ ಪದವೀಧರರ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಾ.ಚಂದ್ರಶೇಖರ ಪಾಟೀಲ ಪರವಾಗಿ ಪ್ರಚಾರ ಕೈಗೊಳ್ಳಲು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು,ಕಾಂಗ್ರೆಸ್ ಪಕ್ಷದ ಪ್ರಮುಖ ಮುಖಂಡರು ಪದವೀಧರರ ಪ್ರತಿಯೊಂದು ಮತದಾರರ ಮನವೋಲಿಸುವ ಕೆಲಸ ಮಾಡಿ ಕಾಂಗ್ರೆಸ್ ಪಕ್ಷದ ಯುವನಿಧಿ ಗ್ಯಾರಂಟಿ ಬಗ್ಗೆ ಮನವೋರಿಕೆ ಮಾಡಿ ಡಾ.ಚಂದ್ರಶೇಖರ ಪಾಟೀಲರವರಿಗೆ ಮತ ನೀಡುವಂತೆ ಮನವಿ ಮಾಡಿಕೊಂಡು ತಮ್ಮ ತಮ್ಮ ಬೂತ್ ಮಟ್ಟದಲ್ಲಿ ಕೆಲಸ ಮಾಡಬೇಕು.

ಕಳೆದ ಚುನಾವಣೆಯಲ್ಲಿ ತಪ್ಪು ಮತದಾನ ಮಾಡಿರುವುದರಿಂದ 2700ಮತಗಳು ತೀರಸ್ಕಗೊಂಡಿವೆ ಕಾರಣ ಪದವೀಧರ ಮತಪ್ರಭುಗಳು ಚಂದ್ರಶೇಖರ ಪಾಟೀಲ ಹೆಸರಿರುವ ಎದುರು ಖಾಲಿಯಿರುವ ಸ್ಥಳದಲ್ಲಿ ಒಂದು ಗೆರೆ ಎಳೆದರೆ ಸಾಕು ಮತ ಚಲಾವಣೆ ಆಗುತ್ತದೆ.

ಪದವೀಧರರಿಗೆ 3000ರೂಪಾಯಿ,ಡಿಪ್ಲೋಮೊ ಮಾಡಿದವರಿಗೆ 1500ರೂಪಾಯಿ,ಕಲಬುರ್ಗಿ ಜಿಲ್ಲೆಯಲ್ಲಿ ಒಟ್ಟಾರೆ 10,000ಪದವೀಧರರ ಕಾಂಗ್ರೆಸ್ ಪಕ್ಷದ ಯುವನಿಧಿ ಗ್ಯಾರಂಟಿ ಯೋಜನೆಯ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಅತಿಹೆಚ್ಚು ಲೀಡ್**

ಕಾಂಗ್ರೆಸ್ ಪಕ್ಷವು ಕೇಂದ್ರ ಸರ್ಕಾರ ಆಡಳಿತಕ್ಕೆ ಬಂದರೆ ಕುಟುಂಬಕ್ಕೆ ಒಂದು ಉದ್ಯೋಗ ಪದವೀಧರರಿಗೆ 1ಲಕ್ಷ ರೂಪಾಯಿ ನೀಡಲಾಗುವುದು ಎಂದು ಈಗಾಗಲೇ ಘೋಷಣೆ ಮಾಡಲಾಗಿದೆ, ಒಟ್ಟಾರೆ 43ಕ್ಷೇತ್ರಗಳು ದೊಡ್ಡ ಕ್ಷೇತ್ರವಿದ್ದು ಅತಿಹೆಚ್ಚು ಲೀಡ್ ಚಿಂಚೋಳಿ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಚಂದ್ರಶೇಖರ ಪಾಟೀಲಗೆ ನೀಡುತ್ತೇವೆ ಎಂದರು.

> ಬಿಜೆಪಿ ಅಭ್ಯರ್ಥಿಯ ಕೊಡುಗೆ ಇಲ್ಲದೆ ಮೋದಿ ಹೆಸರಿನಲ್ಲಿ ಮತ ಕೇಳುತ್ತಿದ್ದಾರೆ,ಆದರೆ ಡಾ.ಚಂದ್ರಶೇಖರ ಪಾಟೀಲರು ಪದವೀಧರರ ಸಮಸ್ಯೆಗಳಿಗೆ ಧ್ವನಿ ಎತ್ತಿದ್ದಾರೆ,ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ಶಿಕ್ಷಣ ಸಂಸ್ಥೆ ಪ್ರಾರಂಭಿಸಿ ಅನೇಕರಿಗೆ ಉತ್ತಮ ಶಿಕ್ಷಣ ನೀಡುತ್ತಿದ್ದಾರೆ,ಹಾಗೂ ಕಾಂಗ್ರೆಸ್ ಪಕ್ಷದ ಪ್ರತಿಯೊಂದು ಮನೆಗೆ ಒಂದ್ದಲ್ಲ ಒಂದು ಗ್ಯಾರಂಟಿಯ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ ನಮಗೆ ಮತ ಕೇಳುವ ಹಕ್ಕಿದೆ ಬಿಜೆಪಿಗಿಲ್ಲ
> **-ರಾಠೋಡ್,** ಕೆಪಿಸಿಸಿ ಉಪಾಧ್ಯಕ್ಷ

ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಮಾಲಿ ಸ್ವಾಗತಿಸಿದರು,ಪ್ರಚಾರ ಸಮಿತಿ ಅಧ್ಯಕ್ಷ ಲಕ್ಷ್ಮಣ ಆವುಂಟಿ ನಿರೂಪಿಸಿದರು,ಆರ್.ಗಣಪತರಾವ ವಂದಿಸಿದರು.

ಹಿರಿಯ ಮುಖಂಡ ಬಾಬುರಾವ ಪಾಟೀಲ, ಕಾಂಗ್ರೆಸ್ ವಕ್ತಾರ ಶರಣುಪಾಟೀಲ ಮೋತಕಪಳ್ಳಿ,ಕೆಎಂಎಫ್ ಮಾಜಿ ಅಧ್ಯಕ್ಷ ರೇವಣಸಿದ್ದಪ್ಪ ಪಾಟೀಲ,ಜಿಪಂ. ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯಶೇಟ್ಟಿ,ಅಬ್ದುಲ್ ಬಾಷೀದ್,ಜಿಲ್ಲಾ ಕಾರ್ಯದರ್ಶಿ ಮಹೇಮೂದ ಪಟೇಲ,ಮಾತನಾಡಿದರು.

ಈ ಸಂದರ್ಭದಲ್ಲಿ ಲಿಂಗಶೇಟ್ಟಿ ತಟ್ಟೆಪಳ್ಳಿ, ನರಸಿಂಹಮ್ಲು ಕುಂಬಾರ, ಶಬ್ಬೀರ ಅಹೇಮದ್, ಶ್ರೀನಿವಾಸ ಬಂಡಿ, ವೀರಶೇಟ್ಟಿ ಪಾಟೀಲ್, ಅಜೀತ ಪಾಟೀಲ,ರಾಮಶೇಟ್ಟಿ ಪವ್ವಾರ, ತುಕ್ಕಾರಾಮ ಪವ್ವಾರ, ನರಸಿಂಹಮ್ಲು ಸವಾರಿ, ನಾಗೇಶ ಗುಣಾಜೀ, ಅನ್ವರ್ ಖತೀಬ,ಶೇಖ್ ಫರೀದ್, ದೇವೀಂದ್ರಪ್ಪಾ ಸಾಲೋಳ್ಳಿ, ಶರಣು ತಳವಾರ, ಅನೀಲ ಜಮಾದಾರ, ರಾಘವೇಂದ್ರ ಗುತ್ತೇದಾರ, ಡಾ. ಆಂಜನೇಯ, ಖಲೀಲ್ ಪಟೇಲ, ರವೀಂದ್ರ ಪೂಜಾರಿ, ಜಗದೇವ ಗೌತಮ್, ಆನಂದ, ಬಸವರಾಜ ಫೇನಿ, ರಮೇಶ ವಾರಕರ ಅನೇಕರಿದ್ದರು.

# ಮಿನಿ ನ್ಯೂಸ್

## ಛತ್ರಿ ಹಿಡಿದು ಸಾರಿಗೆ ಬಸ್ ಓಡಿಸಿದ ಚಾಲಕ

• **ಉದಯವಾಹಿನಿ, ಹಾವೇರಿ**


ಉದಯವಾಹಿನಿ ಚಿತ್ರ

ಸಾರಿಗೆ ಸಂಸ್ಥೆಯ ಬಸ್ ಚಾಲಕರೊಬ್ಬರು ಛತ್ರಿ ಹಿಡಿದುಕೊಂಡು ಬಸ್ ಚಲಾಯಿಸುತ್ತಿರುವ ವಿಡಿಯೋ ಸದ್ಯ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ್ದು, ಇದು ಶಕ್ತಿ ಯೋಜನೆಯ ಎಫೆಕ್ಟ್ ಇರಬಹುದಾ ಎಂದು ಸಾರ್ವಜನಿಕರು ರಾಜ್ಯ ಸರ್ಕಾರವನ್ನು ಟೀಕಿಸಿದ್ದಾರೆ. ದುರಸ್ತಿಗೆ ಒಳಗಾಗಿರುವ ಸಾರಿಗೆ ಬಸ್‌ನಲ್ಲಿ ನೀರು ಸೋರುತ್ತಿದೆ. ಹಾಗಾಗಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ (ವಾ.ಕ.ರ.ಸಾ) ಸಂಸ್ಥೆಯ ಬಸ್‌ನ ಚಾಲಕ ರಭಸವಾಗಿ ಸುರಿಯುತ್ತಿರುವ ಮಳೆಯಲ್ಲಿ ಛತ್ರಿ ಹಿಡಿದು ಬಸ್ ಚಲಾಯಿಸಿರುವುದು ದೃಶ್ಯದಲ್ಲಿ ಕಂಡುಬಂದಿದೆ. ಈ ದೃಶ್ಯವನ್ನು ಬಸ್ ನಲ್ಲಿದ್ದ ಪ್ರಯಾಣಿಕರೊಬ್ಬರು ವಿಡಿಯೋ ಮಾಡಿ, ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ. ರಾಜ್ಯ ಸರ್ಕಾರ ದಿವಾಳಿಯಾಗಿದೆ. ಹಾಗಾಗಿ, ಸಾರಿಗೆ ಬಸ್‌ಗಳ ದುರಸ್ತಿಗೆ ಹಣವಿಲ್ಲ ಎಂದು ನೆಟ್ಟಿಗರು ವ್ಯಂಗ್ಯವಾಡಿದ್ದಾರೆ.

## ಅಡವಿರಾಯಜಾತ್ರಾಮಹೋತ್ಸವ

• **ಉದಯವಾಹಿನಿ ಕುಷ್ಟಗಿ**

ಪಟ್ಟಣದ ಆರಾಧ್ಯ ದೈವಗಳಲ್ಲಿ ಒಂದಾದ ಪುರಾತನ ಅಡವಿಮುಖ್ಯ ಪ್ರಾಣ (ಅಡವಿರಾಯ) ಜಾತ್ರಾಮಹೋತ್ಸವದ ನಿಮಿತ್ತ ಗುರುವಾರ ಮಹಾರಥೋತ್ಸವ ನೆರವೇರಿತು. ಪಟ್ಟಣ ಸೇರಿದಂತೆ ಸುತ್ತಲಿನ ಗ್ರಾಮಾಂತರ ಪ್ರದೇಶದ ಸಹಸ್ರ ಸಂಖ್ಯೆಯ ಭಕ್ತರು ಸಂಭ್ರಮದ ರಥೋತ್ಸವಕ್ಕೆ ಸಾಕ್ಷಿಯಾದರು.ಅನೇಕ ಜೋಡಿ ನವವಧುವರರು ರಥೋತ್ಸವದಲ್ಲಿ ಭಾಗಿಯಾಗಿದ್ದರು.

ಬೆಳಿಗ್ಗೆ ದೇವಸ್ಥಾನದಲ್ಲಿ ಅಡವಿಮುಖ್ಯಪ್ರಾಣ ದೇವರಿಗೆ ಮಧುಅಭಿಷೇಕ, ಪಂಚಾಮೃತ ಅಭಿಷೇಕ, ವ್ಯಾಸಪೂಜೆ, ರಥಾಂಗ ಹೋಮ, ಪವಮಾನಹೋಮ, ಸತ್ಯನಾರಾಯಣ ಪೂಜೆ. ಸಂಜೆ ರಥೋತ್ಸವದ ನಂತರ ಹರಿವಾಣ ಸೇವೆ, ಪತ್ತಾ ಸೇವೆ ಮತ್ತಿತರೆ ಧಾರ್ಮಿಕ ಕಾರ್ಯಕ್ರಮಗಳನ್ನು ವಿಧಿವತ್ತಾಗಿ ನೆರವೇರಿದವು.

ರಥೋತ್ಸವದಲ್ಲಿ ಪಾಲ್ಗೊಂಡಿದ್ದ ಶಾಸಕ ದೊಡ್ಡನಗೌಡ ಪಾಟೀಲ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಮರೇಗೌಡ ಬಯ್ಯಾಪುರ ಅವರನ್ನು ಜಾತ್ರಾ ಸಮಿತಿ ವತಿಯಿಂದ ಸನ್ಮಾನಿಸಲಾಯಿತು. ಅನೇಕ ಗಣ್ಯರು, ಜಾತ್ರಾ ಸಮಿತಿ ಪ್ರಮುಖರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

## ನೇಹಾ ಹಿರೇಮಠ ಕೊಲೆ ಖಂಡಿಸಿ ಪ್ರತಿಭಟನಾ ಮೆರವಣಿಗೆ

• **ಉದಯವಾಹಿನಿ ಕಲಘಟಗಿ**

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಖಂಡಿಸಿ ಪಟ್ಟಣದಲ್ಲಿ ಶನಿವಾರ ರೈತ ಸಂಘಟನೆ ನೇತೃತ್ವದಲ್ಲಿ ವಿವಿಧ ಸಮಾಜದವರು ಪ್ರತಿಭಟನೆ ನಡೆಸಿದರು.ಪಟ್ಟಣದ ಆಂಜನೇಯ ವೃತ್ತದಲ್ಲಿ ಸೇರಿದ ಪ್ರತಿಭಟನಾಕಾರರು, ತಹಶೀಲ್ದಾರ್ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.ಕೊಲೆ ಆರೋಪಿ ಫಯಾಜ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ತಹಶೀಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಿದ ಪ್ರತಿಭಟನಕಾರರು, ತಪ್ಪಿತಸ್ಥನಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು. ರಾಜ್ಯದಲ್ಲಿ ದೌರ್ಜನ್ಯ, ಶೋಷಣೆ, ಕೊಲೆ ಪ್ರಕರಣಗಳು ಹೆಚ್ಚುತ್ತಿದ್ದು ಮಹಿಳೆಯರು, ವಿದ್ಯಾರ್ಥಿನಿಯರಿಗೆ ಭದ್ರತೆ, ರಕ್ಷಣೆ ಇಲ್ಲದಂತಾಗಿದೆ. ಕಾಂಗ್ರೆಸ್ ಸರ್ಕಾರ ನಿರ್ಲಕ್ಷ್ಯ ವಹಿಸಿರುವುದು ಖಂಡನೀಯ' ಎಂದು ಪ್ರತಿಭಟನಕಾರರು ಆಕ್ರೋಶ ವ್ಯಕ್ತಪಡಿಸಿದರು.

ಸುಪ್ರೀಂ ಕೋರ್ಟ್ ನಿರ್ದೇಶನದಂತೆ ವಿದ್ಯಾರ್ಥಿನಿಯರು, ಮಹಿಳೆಯರಿಗೆ ಸೂಕ್ತ ರಕ್ಷಣೆ ನೀಡಬೇಕು ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

## ಚೌಡೇಶ್ವರಿ ದೇವಿಗೆ ಲಕ್ಷ ಬಿಲ್ವಾರ್ಚನೆ

• **ಉದಯವಾಹಿನಿ ರಾಣೆಬೆನ್ನೂರು**

ಇಲ್ಲಿನ ಮೇಡ್ಲೇರಿ ರಸ್ತೆಯ ಬಳಿ ಇರುವ ಭಾವೈಕ್ಯತೆದೇವಿ ಎಂದೇ ಪ್ರಸಿದ್ಧಿ ಪಡೆದಿರುವ ಗಂಗಾಜಲ ಚೌಡೇಶ್ವರಿ ದೇವಿಗೆ ಗುರುವಾರ


ಉದಯವಾಹಿನಿ ಚಿತ್ರ

ವೈಶಾಖ ಮಾಸದ ಪ್ರಯುಕ್ತ ಅಭಿಷೇಕ ಮತ್ತು 1 ಲಕ್ಷ ಬಿಲ್ವಾರ್ಚನೆ ಮಹಾಪೂಜೆ ಶ್ರದ್ಧಾ ಭಕ್ತಿಯಿಂದ ನಡೆಯಿತು. ಅರ್ಚಕ ಸೋಮಯ್ಯಸ್ವಾಮಿ ಹಾಗೂ ಚೌಡೇಶ್ವರಿ ದೇವಸ್ಥಾನ ಸಮಿತಿ ಅಧ್ಯಕ್ಷ ಬಸವರಾಜ ನಾಯಕ, ನಾರಾಯಣಪ್ಪ ಬಿಷ್ಟಣ್ಣನವರ, ಶಶಿಧರ ಬಸನಾಯಕ, ಲಕ್ಷಣ ಚಿಂತಾ, ಅಣ್ಣೇಶ ಅಟವಾಳಗಿ, ಬಸವರಾಜ ಕಡೇಮನಿ, ನಾಗಪ್ಪ ಕೆಂಪಹನುಮಣ್ಣನವರ, ಪ್ರಶಾಂತ ಅಣಜೇರ ಭಾಗವಹಿಸಿದ್ದರು. ಗೀತಾ ಮಂಜುನಾಥ ಗಡಾದ ಕುಟುಂಬದರು ಪ್ರಸಾದ ವಿತರಣೆ ಕಾರ್ಯಕ್ರಮ ನಡೆಸಿಕೊಟ್ಟರು.

## ವೆಂಕಟೇಶ್ವರ ಸ್ವಾಮಿ ರಥೋತ್ಸವ

• **ಉದಯವಾಹಿನಿ ಕುಮಾರಪಟ್ಟಣ**

ರಾಣೆಬೆನ್ನೂರು ತಾಲ್ಲೂಕಿನ ಐರಾವತ ಕ್ಷೇತ್ರ, ಐರಣಿ ಗ್ರಾಮದ ತುಂಗಭದ್ರಾ ನದಿ ತೀರದ ಬೆಟ್ಟದ ಮೇಲಿರುವ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ರಥೋತ್ಸವ ಹುಣ್ಣಿಮೆಯಂದು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು. ಸಂತಶ್ರೇಷ್ಠ ಕರ್ಕಿಹಳ್ಳಿಮಠ (ಕನವಳ್ಳಿ) ಸುರೇಶ ಪಾಟೀಲ ಇವರ ಸಾನ್ನಿಧ್ಯದಲ್ಲಿ ಬೆಳಿಗ್ಗೆ ಹೋಮ, ಹವನ, ಪೂಜಾ ಕಾರ್ಯಕ್ರಮ ನಡೆಯಿತು.ಮಧ್ಯಾಹ್ನ ವೆಂಕಟೇಶ್ವರ ಸ್ವಾಮಿಯ ರಥೋತ್ಸವ ಜರುಗಿತು.

ಭಕ್ತರಿಗೆ ಕೋಸಂಬರಿ, ಬೆಲ್ಲದ ಪಾನಕ ವಿತರಿಸಿದ ನಂತರ ಅನ್ನ ಸಂತರ್ಪಣೆ ನಡೆಯಿತು. ಸಂಜೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪಲ್ಲಕ್ಕಿ ಉತ್ಸವ ನಡೆಯಿತು.

# ರಾಮಭಕ್ತರ-ರಾಮ ವಿರೋಧಿಗಳ ನಡುವಿನ ಹೋರಾಟ: ಅಮಿತ್ ಶಾ

## • ಫಲಿತಾಂಶದ ಬಳಿಕ ಬೈನಾಕ್ಯುಲರ್ ಹಾಕಿ ಹುಡುಕಿದರೂ ಕಾಂಗ್ರೆಸ್ ಕಾಣಿಸೊಲ್ಲ: ಅಮಿತ್ ಶಾ ಲೇವಡಿ



**ಲಖನೌ:** ಲೋಕಸಭೆ ಚುನಾವಣೆಯ ಮೊದಲ 5 ಹಂತದ ಮತದಾನದಲ್ಲಿ ಬಿಜೆಪಿಯು ಈಗಾಗಲೇ 310 ಸ್ಥಾನಗಳ ಗಡಿ ದಾಟಿದೆ ಎಂದು ವಿಶ್ವಾಸ ವ್ಯಕ್ತಪಡಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕಾಂಗ್ರೆಸ್ ಈ ಬಾರಿ 40 ಸೀಟುಗಳನ್ನೂ ಪಡೆಯುವುದಿಲ್ಲ, ಎಂದು ಕುಟುಕಿದರು. ಉತ್ತರ ಪ್ರದೇಶದ ಸಿದ್ದಾರ್ಥನಗರ, ಸಂತ ಕಬೀರ್ ನಗರ, ದೋಮಾರಿಯಾಗಂಜ್, ಅಂಬೇಡ್ಕರ್ ನಗರಗಳಲ್ಲಿ ಚುನಾವಣಾ ಪ್ರಚಾರ ಸಭೆಗಳನ್ನು ನಡೆಸಿದ ಅಮಿತ್ ಶಾ, ಪ್ರತಿಪಕ್ಷಗಳ ಐಎನ್‌ಡಿಐಎ ಮೈತ್ರಿಕೂಟದ ವಿರುದ್ಧ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ತಮ್ಮ ಮತಬ್ಯಾಂಕ್ ಕಳೆದುಹೋಗಲಿದೆ ಎಂಬ ಭೀತಿಯಿಂದ ಅಯೋಧ್ಯೆಯ ರಾಮ ಮಂದಿರ ಉದ್ಘಾಟನೆ ಕಾರ್ಯಕ್ರಮವನ್ನು ಬಹಿಷ್ಕರಿಸಿದರು. ನುಸುಳುಕೋರರೇ ಕಾಂಗ್ರೆಸ್, ಎಸ್‌ಪಿ ಪಕ್ಷಗಳ ಮತಬ್ಯಾಂಕ್ ಆಗಿದ್ದಾರೆ. ರಾಜಕೀಯ ಲಾಭಕ್ಕಾಗಿ ದೇಶದ ಭದ್ರತೆ ಜತೆ ರಾಜಿ ಮಾಡಿಕೊಳ್ಳುವ ಮನಸ್ಥಿತಿ ಈ ಪಕ್ಷಗಳದ್ದಾಗಿದೆ,'' ಎಂದು ಟೀಕಿಸಿದರು.

- ಇದು ರಾಮಭಕ್ತರ-ರಾಮ ವಿರೋಧಿಗಳ ನಡುವಿನ ಹೋರಾಟ ಎಂದು ಬಣ್ಣಿಸಿದ ಅಮಿತ್ ಶಾ
- ನುಸುಳುಕೋರರೇ ಕಾಂಗ್ರೆಸ್, ಸಮಾಜವಾಗಿ ಪಕ್ಷಗಳ ಮತಬ್ಯಾಂಕ್ ಆಗಿದ್ದಾರೆ ಎಂದು ಆರೋಪ
- ಜೂನ್ 4ರ ಫಲಿತಾಂಶದ ಬಳಿಕ ರಾಹುಲ್ ಗಾಂಧಿ ಕಾಂಗ್ರೆಸ್ ಹುಡುಕುವ ಯಾತ್ರೆ ನಡೆಸಲಿದ್ದಾರೆ

ಮೊದಲ ಐದು ಹಂತದ ಮತದಾನದಲ್ಲಿ ಐಎನ್‌ಡಿಐಎ ಮೈತ್ರಿಕೂಟ ಧೂಳೀಪಟವಾಗಿದೆ.

**ಐಎನ್‌ಡಿಐಎ ವಿರುದ್ಧ ವಾಗ್ದಾಳಿ**

ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ 40 ಸೀಟುಗಳನ್ನೂ ಪಡೆಯುವುದಿಲ್ಲ, ಸಮಾಜವಾದಿ ಪಕ್ಷ 4 ಸೀಟುಗಳನ್ನು ಸಹ ಗೆಲ್ಲುವುದಿಲ್ಲ,'' ಎಂದು ಅಮಿತ್ ಶಾ ಭವಿಷ್ಯ ನುಡಿದರು.

ಜೂನ್ 4ರ ಫಲಿತಾಂಶದ ಬಳಿಕ ರಾಹುಲ್ ಗಾಂಧಿ ಅವರು ಕಾಂಗ್ರೆಸ್ ಹುಡುಕುವ ಯಾತ್ರೆ ನಡೆಸಲಿದ್ದಾರೆ. ಕಾಂಗ್ರೆಸ್ ಅನ್ನು ಬೈನಾಕ್ಯುಲರ್ ಮೂಲಕ ಹುಡುಕಿದರೂ ಕಾಣಿಸುವುದಿಲ್ಲ ಎಂದು ವ್ಯಂಗ್ಯವಾಡಿದರು. ನನ್ನ ಮಾತು ಬರೆದಿಟ್ಟುಕೊಳ್ಳಿ, ಜೂನ್ 4ರಂದು ಫಲಿತಾಂಶ ಪ್ರಕಟವಾದ ಬಳಿಕ, ಜೂನ್ 6ರಂದು ರಾಹುಲ್ ಬಾಬಾ ರಜೆ ಕಳೆಯಲು ಹೋಗುತ್ತಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಹಾಗೂ ಎಸ್‌ಪಿ ಪಕ್ಷಗಳು ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಮೀಸಲು ಕಿತ್ತುಕೊಂಡು ಅಲ್ಪಸಂಖ್ಯಾತರಿಗೆ ನೀಡಲಿವೆ. ಹೀಗಾಗಿ ಮತದಾರರು ಈ ಪಕ್ಷಗಳನ್ನು ಬೆಂಬಲಿಸಬಾರದು ಎಂದು ಅಮಿತ್ ಶಾ ಮನವಿ ಮಾಡಿದರು.

ರಾಹುಲ್ ಗಾಂಧಿ ಬಾಯಲ್ಲಿ ಬೆಳ್ಳಿ ಚಮಚ ಇರಿಸಿಕೊಂಡು ಹುಟ್ಟಿದ್ದರೆ, ಪ್ರಧಾನಿ ನರೇಂದ್ರ ಮೋದಿ ಅವರು ಬಡ ಕುಟುಂಬದಲ್ಲಿ ಜನಿಸಿದ್ದರು.

ಕಾಂಗ್ರೆಸ್ ಆಡಳಿತದಲ್ಲಿ 12 ಲಕ್ಷ ಕೋಟಿ ರೂ ಮೊತ್ತದ ಹಗರಣ ನಡೆಯಿತು.

ಅನೇಕ ವರ್ಷ ಗುಜರಾತ್ ಸಿಎಂ ಆಗಿ ಕಾರ್ಯ ನಿರ್ವಹಿಸಿದ ಮೋದಿ ಅವರ ಆಡಳಿತದಲ್ಲಿ ಅವರ ವಿರುದ್ಧ ಯಾರೂ 25 ಪೈಸೆಯ ಮೊತ್ತದ ಅವ್ಯವಹಾರ ಆಗಿದೆ ಎಂದೂ ಆರೋಪ ಮಾಡಲು ಸಾಧ್ಯವಿಲ್ಲ. ಇಬ್ಬರ ನಡುವೆ ನೀವು ಯಾರನ್ನು ಆಯ್ಕೆ ಮಾಡಬೇಕು ಎಂಬುದನ್ನು ನಿರ್ಧರಿಸಬೇಕು ಎಂದರು.

**ಕುಟುಂಬ ವ್ಯಾಮೋಹ**

ಆರ್‌ಜೆಡಿ ನಾಯಕ ಲಾಲು ಪ್ರಸಾದ್ ಯಾದವ್, ಶಿವಸೇನೆಯ (ಉದ್ಧವ್ ಬಣ) ಉದ್ಧವ್ ಠಾಕ್ರೆ, ತಮಿಳುನಾಡು ಸಿಎಂ ಎಂ.ಕೆ. ಸ್ಟಾಲಿನ್ ಅವರಿಗೆ ತಮ್ಮ ಪುತ್ರರನ್ನು ಮುಖ್ಯಮಂತ್ರಿಯಾಗಿಸುವ ಬಯಕೆ ಇದ್ದರೆ, ಎನ್‌ಸಿಪಿ ಶರತ್‌ಚಂದ್ರ ಬಣದ ಶರದ್ ಪವಾರ್ ಅವರಿಗೆ ತಮ್ಮ ಪುತ್ರಿಯನ್ನು ಸಿಎಂ ಮಾಡುವ ಆಸೆ ಇದೆ. ಇನ್ನು ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ಅವರಿಗೆ ಸೋದರಳಿಯ ಅಭಿಷೇಕ್ ಬ್ಯಾನರ್ಜಿ ಅವರನ್ನು ಮುಖ್ಯಮಂತ್ರಿಯಾಗಿಸುವ ಅಪೇಕ್ಷೆ ಇದ್ದರೆ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರಿಗೆ ಪುತ್ರ ರಾಹುಲ್ ಗಾಂಧಿ ಅವರನ್ನು ಪ್ರಧಾನಿಯಾಗಿಸುವ ಆಸೆ ಇದೆ. ಇದೆಲ್ಲವೂ ಕುಟುಂಬ ರಾಜಕಾರಣದ ಒಂದು ರೂಪ,'' ಎಂದು ಟೀಕಿಸಿದರು.

# ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದ



**ಲಂಡನ್:** ಬ್ರಿಟನ್‌ನ ಪ್ರಧಾನಿ ರಿಷಿ ಸುನಕ್ ಅವರು ಜು.4ರಂದು ಸಾರ್ವತ್ರಿಕ ಚುನಾವಣೆ ಘೋಷಿಸಿ ಅಚ್ಚರಿ ಮೂಡಿಸಿರು ನಡುವೆಯೇ ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದದ ವಿಷಯ ಚರ್ಚೆಗೆ ಗ್ರಾಸವಾಗಿದೆ. ಉಭಯ ರಾಷ್ಟ್ರಗಳ ಚುನಾವಣಾ ಫಲಿತಾಂಶ ಏನೇ ಇರಲಿ ದ್ವಿಪಕ್ಷೀಯ ಸಂಬಂಧಗಳಲ್ಲಿ ಅತ್ಯಲ್ಪ ಬದಲಾವಣೆ ಮಾತ್ರ ಆಗಬಹುದು ಎಂದು ರಾಜಕೀಯ ಪಂಡಿತರು ವಿಶ್ಲೇಷಿಸಿದ್ದಾರೆ.

ಬಹುತೇಕ ಚುನಾವಣಾ ಪೂರ್ವ ಸಮೀಕ್ಷೆಗಳು ಪ್ರತಿಪಕ್ಷ ಲೇಬರ್ ಪಾರ್ಟಿ ಅಧಿಕಾರಕ್ಕೆ ಬರಬಹುದೆಂಬ ಭವಿಷ್ಯ ನಡೆದಿದ್ದು, ತಾನು ಅಧಿಕಾರಕ್ಕೆ ಬಂದಲ್ಲಿ ಸಾಧಕ-ಬಾಧಕ ಪರಿಶೀಲಿಸಿ ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಚಾಲನೆ ನೀಡುವುದಾಗಿ ಲೇಬರ್ ಪಾರ್ಟಿ ತಿಳಿಸಿದೆ. ಬಹುನಿರೀಕ್ಷಿತ ಲೇಬರ್ ಪಕ್ಷದ ಬ್ರಿಟನ್ ಸರ್ಕಾರ ಮತ್ತು ಮೂರನೇ ಅವಧಿಯ ಮೋದಿ ಸರ್ಕಾರ ಅಸ್ತಿತ್ವಕ್ಕೆ ಬಂದಲ್ಲಿ ಈ ವ್ಯಾಪಾರ ಸಂಬಂಧ ಮತ್ತಷ್ಟು ಸದೃಢವಾಗಲಿದೆ ಎಂದು ಲಂಡನ್ ಮೂಲದ ಇಂಟರ್ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಫಾರ್ ಸ್ಟ್ರಾಟೆಜಿಕ್ ಸ್ಟಡೀಸ್(ಐಐಎಸ್‌ಎಸ್) ಸಂಸ್ಥೆಯ ದಕ್ಷಿಣ ಮತ್ತು ಮಧ್ಯ ಏಷ್ಯಾ ರಕ್ಷಣಾ, ಕಾರ್ಯತಂತ್ರ ಮತ್ತು ರಾಜತಾಂತ್ರಿಕ ಸೀನಿಯರ್ ಫೆಲೋ ಆಗಿರುವ ರಾಹುಲ್ ರಾಯ್‌ಗೆ ಚೌಧುರಿ ತಿಳಿಸಿದ್ದಾರೆ. ಛಾಥಮ್ ಹೌಸ್‌ನ ದಕ್ಷಿಣ ಏಷ್ಯಾ , ಏಷ್ಯಾ-ಫೆಸಿಫಿಕ್ ಕಾರ್ಯಕ್ರಮದ ಸೀನಿಯರ್ ರಿಸರ್ಚ್ ಫೆಲೋ ಆಗಿರುವ ಡಾ.ಚೇಡಿಡ್ಜ್ ಬಾಜಪೇಯಿ ಅವರು ಮುಕ್ತವ್ಯಾಪಾರ ಒಪ್ಪಂದವನ್ನು ದ್ವಿಪಕ್ಷೀಯ ಸಂಬಂಧ ಸುಧಾರಣೆಯಲ್ಲಿ ಕಣ್ಣಾಗವಲು ಬಿಂದು ಎಂದು ಬಣ್ಣಿಸಿದ್ದಾರೆ.

# ಮೋದಿಯಿಂದ ವಿಶ್ವದಲ್ಲಿ ಭಾರತದ ಕೀರ್ತಿ ಹೆಚ್ಚಾಗಿದೆ: ಪ್ರೇಮ್ ಭಂಡಾರಿ



**ವಾಷಿಂಗ್ಟನ್:** ಪ್ರಧಾನಿ ನರೇಂದ್ರ ಮೋದಿ ಅವರು ವಿಶ್ವದಲ್ಲಿ ಭಾರತದ ಸ್ಥಾನವನ್ನು ಹೆಚ್ಚಿಸಿದ್ದಾರೆ ಮತ್ತು ವಲಸೆಗಾರರಿಗೆ ಹೊಸ ಗುರುತನ್ನು ನೀಡಿದ್ದಾರೆ ಎಂದು ಖ್ಯಾತ ಭಾರತೀಯ ಅಮೆರಿಕನ್ ಸಮುದಾಯದ ನಾಯಕರೊಬ್ಬರು ಹೇಳಿದ್ದಾರೆ. 2047 ರ ವೇಳೆಗೆ ಭಾರತವನ್ನು ಅಭಿವದ್ಧಿ ಹೊಂದಿದ ದೇಶವನ್ನಾಗಿ ಮಾಡುವ ಅವರ ಗುರಿಯಲ್ಲಿ ಜಾಗತಿಕ ಭಾರತೀಯ ಸಮುದಾಯ ಪಾಲುದಾರರಾಗಲು ಸಿದ್ಧವಾಗಿದೆ ಎಂದು ಪ್ರೇಮ್ ಭಂಡಾರಿ ತಿಳಿಸಿದ್ದಾರೆ.

ಕಳೆದ 10 ವರ್ಷಗಳಲ್ಲಿ, ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ, ನಾವು 2030 ರ ಮೊದಲು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾ ಗುವ ಹಾದಿಯಲ್ಲಿದ್ದೇವೆ. ಅವರು ಭಾರತೀಯ ಸಮುದಾಯದ ವಲೆಸೆಗಾರರಿಗೆ ಹೊಸ ಗುರುತನ್ನು ನೀಡಿದ್ದಾರೆ ಎಂದು ಭಂಡಾರಿ ಪಿಟಿಐಗೆ ತಿಳಿಸಿದರು ಜೈಪುರ್ ಫೂಟ್‌ನ ಯುಎಸ್‌ಎ ಮುಖ್ಯಸ್ಥರಾಗಿರುವ ಭಂಡಾರಿ, ರಾಜಸ್ಥಾನ್ ಅಸೋಸಿಯೇಷನ್ ಆಫ್ ನಾರ್ತ್ ಅಮೇರಿಕಾ ಅಧ್ಯಕ್ಷರಾಗಿದ್ದಾರೆ, ವಿಶೇಷವಾಗಿ ವೀಸಾ, ಪಾಸ್‌ಪೋರ್ಟ್ ಮತ್ತು ಪ್ರಯಾಣಕ್ಕೆ ಸಂಬಂಧಿಸಿದ ಸಂಕಷ್ಟದಲ್ಲಿರುವ ಜಾಗತಿಕ ಭಾರತೀಯ ವಲಸಿಗರಿಗೆ ಸಹಾಯ ಮಾಡಲು ಹೆಸರುವಾಸಿಯಾಗಿದ್ದಾರೆ.


ವಲಸಿಗರು ಭಾರತಕ್ಕೆ ಪ್ರಯಾಣಿಸಿದಾಗ, ಅವರು ಭಾರತದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಅಗಾಧವಾದ ಅಭಿವದ್ಧಿ ಮತ್ತು ಪ್ರಗತಿಯನ್ನು ನೋಡುತ್ತಾರೆ ಎಂದು ಅವರು ಹೇಳಿದರು, ಕಳೆದ 10 ವರ್ಷಗಳಲ್ಲಿ ದೇಶವು ಮೂಲಸೌಕರ್ಯ, ರಸ್ತೆಗಳು, ಬುಲೆಟ್ ರೈಲುಗಳು ಅಥವಾ ಹೊಸ ಬೆಳವಣಿಗೆಗಳಂತಹ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿಯನ್ನು ಕಂಡಿದೆ.

**ಎಲ್ಲಾ ಕ್ರೆಡಿಟ್ ಮೋದಿಗೆ**

**2014 ರಿಂದ ವಲಸಿಗ ಭಾರತೀಯರನ್ನು ಪ್ರಪಂಚದಾದ್ಯಂತ ಗೌರವದಿಂದ ಕಾಣಲಾಗುತ್ತಿದೆ. ಉದಾಹರಣೆಗೆ, ಉಕ್ರೇನ್‌ನಲ್ಲಿನ ಬಿಕ್ಕಟ್ಟಿನ ಸಂದರ್ಭದಲ್ಲಿ, ಬಸ್‌ನಲ್ಲಿ ಭಾರತೀಯ ಧ್ವಜ ಹಾರಿಸಿದ್ದು ಗಡಿ ದಾಟಲು ಸುಲಭವಾಯಿತು. ಭಾರತೀಯ ಸಮುದಾಯವನ್ನು ವಿಶ್ವಾದ್ಯಂತ ಗಂಭೀರವಾಗಿ ಪರಿಗಣಿಸಲಾಗಿದೆ ಇದರ ಎಲ್ಲಾ ಕ್ರೆಡಿಟ್ ಪ್ರಧಾನಿ ಮೋದಿಗೆ ಸಲ್ಲುತ್ತದೆ ಎಂದು ಅವರು ಹೇಳಿದರು.**

ರಾಜಸ್ಥಾನದವನಾಗಿ, ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ, ಯುನೈಟೆಡ್ ಸ್ಟೇಟ್‌ಸನ ಕ್ಯಾಲಿ ಫೋರ್ನಿಯಾದಂತೆಯೇ ಸೌರಶಕ್ತಿ ಕ್ಷೇತ್ರದಲ್ಲಿ ರಾಜ್ಯವು ಅಭಿವದ್ಧಿ ಹೊಂದಲಿದೆ ಎಂದು ನಾನು ವಿಶ್ವಾಸದಿಂದ ಹೇಳಬಲ್ಲೆ ಎಂದು ಅವರು ಹೇಳಿದರು.

# ಕೆಮಿಕಲ್ಸ್ ಘಟಕದಲ್ಲಿ ಸ್ಫೋಟ, 9 ಮಂದಿ ಕಾರ್ಮಿಕರು ಬಲಿ



**ಥಾಣೆ:** ಮಹಾರಾಷ್ಟ್ರದ ಥಾಣೆ ಜಿಲ್ಲೆ ಡೊಂಬಿವಿಲಿಯ ಎಂಐಡಿಸಿಯ 2ನೇ ಹಂತದಲ್ಲಿರುವ ಅಮುದನ್ ಕೆಮಿಕಲ್ಸ್ ಘಟಕದಲ್ಲಿ ನಡೆದ ಸ್ಫೋಟದಲ್ಲಿ ಮೃತರ ಸಂಖ್ಯೆ ಒಂಬತ್ತಕ್ಕೆ ಏರಿಕೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ತಹಸೀಲ್ದಾರ್ ಸಚಿನ್ ಶೆಜಲ್ ಅವರು ಮಾಹಿತಿ ನೀಡಿ ಧ್ವಂಸಗೊಂಡ ಕಾರ್ಖಾನೆಯ ಆವರಣದಲ್ಲಿ ಹೆಚ್ಚಿನ ಶವಗಳು ಬಿದ್ದಿವೆ ಎಂದು ಅವರು ಶಂಕಿಸಿರುವುದರಿಂದ ಇದು ಹೆಚ್ಚಾಗಬಹುದು. ಅವಶೇಷಗಳನ್ನು ತೆರವುಗೊಳಿಸಲಾಗುತ್ತಿದೆ ಪ್ರಸ್ತುತ ಸಾವಿನ ಸಂಖ್ಯೆ ಒಂಬತ್ತಕ್ಕೆ ಏರಿದೆ ಹೇಳಿದರು.

ಸುತ್ತಮುತ್ತಲಿನ ಕಾರ್ಖಾನೆಗಳ ಅನೇಕ ಮಹಿಳೆಯರು ಸೇರಿದಂತೆ 64 ಜನರು ಗಾಯಗೊಂಡಿದ್ದು ಆರು ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಡೊಂಬಿವಿಲಿಯ ಏಮ್ಸ್ ಆಸ್ಪತ್ರೆಯಲ್ಲಿ 24 ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು. ನಿನ್ನೆ ಮಧ್ಯಾಹ್ನ ಕಾರ್ಖಾನೆಯಲ್ಲಿ ಬಾಯ್ಲರ್ ಸ್ಫೋಟಗೊಂಡಿತು ಇದರ ಪರಿಣಾಮ ಬೆಂಕಿಯು ಹೊತ್ತಿಕೊಂಡು ಅಕ್ಕ ಪಕ್ಕದ ಕಾರ್ಖಾನೆಗಳು ಮತ್ತು ಮನೆಗಳ ಕೂಡ ಹಾನಿಯಾಗಿದೆ.

**ಮೃತರ ಸಂಖ್ಯೆ ಒಂಬತ್ತಕ್ಕೆ ಏರಿಕೆ**

ಬೆಂಕಿ ನಂದಿಸಲು ಹತ್ತು ಅಗ್ನಿಶಾಮಕ ವಾಹನಗಳನ್ನು ಬಳಸಲಾಗಿ ಮಧ್ಯರಾತ್ರಿವರೆಗೂ ಕಾರ್ಯಾಚರಣೆಗಳು ನಡೆಯುತ್ತಿವೆ ಎಂದು ಕಲ್ಯಾಣ್-ಡೊಂಬಿವಿಲಿ ಮುನ್ಸಿಪಲ್ ಕಾರ್ಪೊರೇಷನ್ (ಕೆಡಿಎಂಸಿ) ಯ ವಿಪತ್ತು ನಿರ್ವಹಣಾ ಕೋಶದ ಕೈಲಾಸ್ ನಿಕಮ್ ಹೇಳಿದರು. ಇಡೀ ಪ್ರದೇಶವು ಸುಟ್ಟ ರಾಸಾಯನಿಕದ ಕೆಟ್ಟ ವಾಸನೆಯಿಂದ ತುಂಬಿದೆ ಪರಿಹಾರ ಕಾರ್ಯಾಚರಣೆ ನಡೆದಿದೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು. ಡೊಂಬಿವಿಲಿಯ ಮಾನ್ಪಾಡಾ ಪೊಲೀಸರು ಕಾರ್ಖಾನೆ ಮಾಲೀಕರ ವಿರುದ್ಧ ಭಾರತೀಯ ದಂಡ ಸಂಹಿತೆ 304 ಎ (ಅಪರಾಧೀಯ ನರಹತ್ಯೆ ) ಮತ್ತು ಸ್ಫೋಟಕ ವಸ್ತುಗಳು ಮತ್ತು ಅಪಾಯಕಾರಿ ರಾಸಾಯನಿಕಗಳ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಮೃತರ ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗಳಿಗೆ ರವಾನಿಸಲಾಗಿದೆ ದೇಹಗಳು ಗುರುತಿಸಲಾಗದಷ್ಟು ಸುಟ್ಟುಹೋಗಿವೆ.

# ತೈವಾನ್ ಸುತ್ತುವರೆದ ಚೀನಾ ಯುದ್ಧವಿಮಾನ-ನೌಕೆಗಳು



**ತೈಪೇಯಿ:** ದ್ವೀಪ ರಾಷ್ಟ್ರ ತೈವಾನ್‌ನ ಹೊಸ ನಾಯಕತ್ವದ ಆಯ್ಕೆಗೆ ಪ್ರತಿಕ್ರಿಯೆಯಾಗಿ ಸತತ ಎರಡನೇ ದಿನವಾದ ಶುಕ್ರವಾರ ಸಹ ತನ್ನ ಕರಾವಳಿಯ ಉದ್ದಕ್ಕೂ ಚೀನಾದ ಹತ್ತಾರು ಯುದ್ಧ ವಿಮಾನಗಳು ಮತ್ತು ನೌಕಾದಳದ ಹಡುಗುಗಳು ಜಮಾವಣೆಗೊಂಡಿರುವುದನ್ನು ತೈವಾನ್ ಪತ್ತೆ ಮಾಡಿದೆ. ತೈವಾನ್ ಅನ್ನು ತನ್ನ ಪಡೆಗಳು ಸುತ್ತುವರೆದಿರುವುದರ ಬಗ್ಗೆ ಚೀನಾದ ಆಡಳಿತಾರೂಢ ಕಮ್ಯೂನಿಸ್ಟ್ ಪಕ್ಷದ ಮಿಲಿಟರಿ ವಿಭಾಗವಾದ ದಿ ಪೀಪಲ್ಸ್ ಲಿಬರೇಷನ್ ಆರ್ಮಿ ವ್ಯಾಪಕ ಪ್ರಕಟಣೆಗಳನ್ನು ಮಾಧ್ಯಮಗಳಿಗೆ ಬಿಡುಗಡೆ ಮಾಡಿದೆ.

ಚೀನಾದ ಪಡೆಗಳು ತೈವಾನ್‌ನ್ನು ಎಲ್ಲಾ ದಿಕ್ಕುಗಳಿಂದ ಸುತ್ತುವರೆದಿರುವುದನ್ನು ಮತ್ತು ತೈವಾನ್ ಸಂಪೂರ್ಣ ಚೀನೀ ಪಡೆಗಿಂದ ಆವೃತ್ತವಾಗಿರುವುದನ್ನು ಹೊಸ ವಿಡಿಯೋ ಒಂದು ಅನಿಮೇಟೆಡ್ ರೀತಿ ಪ್ರದರ್ಶಿಸಿದೆ.

ಇದರ ಜೊತೆಗೆ 1949ರ ಕಹಿ ಮತ್ತು ರಕ್ತಸಿಕ್ತ ನಾಗರಿಕ ಸಮರದ ಬಳಿಕ ತೈವಾನ್‌ನ 23 ದಶಲಕ್ಷ ಜನತೆಗೆ ಅಪಾಯ ಸಂಭವಹಿಸಬಹುದೆಂದು ಆತಂಕ ವ್ಯಕ್ತವಾಗಿದೆ. ತೈವಾನ್‌ನ ಸಂಸತ್ತು ಶುಕ್ರವಾರ ನೀತಿ ನಿರೂಪಣಾ ಕ್ರಮಗಳನ್ನು ಕೈಗೊಂಡ ಬಗ್ಗೆ ರಾಜಕೀಯ ಪಕ್ಷಗಳ ವಾಗ್ವಾದಗಳಲ್ಲಿ ಮುಳುಗಿತ್ತು. ತೈಪೇಯಿಯ ಉದ್ವಿಗ್ನ ರಾಜಧಾನಿಯಲ್ಲಿ ಸಂಸದೀಯ ಕಲಾಪ ಎಂದಿನಂತೆ ಸಾಗಿತ್ತು.

ತಯವಾನ್ ಹಿಡಿತಲ್ಲಿರುವ ದ್ವೀಪ ಸಮುದಾಯಗಳಲ್ಲಿ ಸಾಗರ ನೌಕೆಗಲು ಭೂಮಿಯಿಂದ ಭೂಮಿಗೆ ನೆಗೆಯುವ ಕ್ಷಿಪಣಿಗಳು ಮತ್ತು ಕರಾವಳಿ ಕಾವಲು ಪಡೆಯನ್ನು ಕಟ್ಟೆಚ್ಚರದಲ್ಲಿರಿಸಲಾಗಿದೆ.

# ಪಪುವಾ ನ್ಯೂಗಿನಿಯಾದಲ್ಲಿ ಸಂಭವಿಸಿದ ಭೂಕುಸಿತ: 100ಕ್ಕೂ ಹೆಚ್ಚು ಜನರು ಸಾವು

**ಮೆಲ್ಬೋರ್ನ್:** ದೂರದ ಪಪುವಾ ನ್ಯೂಗಿನಿಯಾದಲ್ಲಿ ಇಂದು ಸಂಭವಿಸಿದ ಭೂಕುಸಿತದಲ್ಲಿ 100ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಎಂದು ಆಸ್ಟ್ರೇಲಿಯನ್ ಪೊಲೀಸರು ತಿಳಿಸಿದ್ದಾರೆ. ಆಸ್ಟ್ರೇಲಿಯಾದ ದಕ್ಷಿಣ ಪೆಸಿಫಿಕ್ ದ್ವೀಪ ರಾಷ್ಟ್ರದ ರಾಜಧಾನಿ ಪೋರ್ಟ್ ಮೊರೆಸ್ಬಿಯ ವಾಯುವ್ಯಕ್ಕೆ ಸುಮಾರು 600 ಕಿಲೋಮೀಟರ್ ದೂರದ ನ್ಯೂಗಿನಿಯಾದ ಎಂಗಾ ಪ್ರಾಂತ್ಯದ ಕಾಕಲಂ ಗ್ರಾಮ ಸ್ಥಳೀಯ ಕಾಲಮಾನ ಮುಂಜಾನೆ 3 ಗಂಟೆಯ ಸುಮಾರಿಗೆ ಈ ದುರಂತ ಸಂಭವಿಸಿದೆ ಎಂದು ಎಬಿಸಿ ವರದಿ ತಿಳಿಸಿದೆ.



ಪೊಲೀಸ್ ಅಧಿಕಾರಿಗಳು ಮೃತರ ಅಂಕಿ-ಅಂಶವನ್ನು ದೃಢ ಪಡಿಸದಿದ್ದರೂ, ಪ್ರಸ್ತುತ ಅಂದಾಜು ಸಾವಿನ ಸಂಖ್ಯೆ 100 ಕ್ಕಿಂತ ಹೆಚ್ಚಿದೆ ಎಂದು ಸ್ಥಳೀಯರು ಹೇಳುತ್ತಾರೆ. ಸತ್ತವರ ಸಂಖ್ಯೆ ಇನ್ನೂ ಹೆಚ್ಚಿರಬಹುದು ಎಂದು ಗ್ರಾಮಸ್ಥರು ಹೇಳುತ್ತಿದ್ದು, ನೂರಕ್ಕೂ ಹೆಚ್ಚು ಜನರು ಮಣ್ಣಿನಡಿ ಸಿಲುಕಿ ಮೃತಪಟ್ಟಿದ್ದಾರೆ. ಪರಿಹಾರ ಕಾರ್ಯಾಚರಣೆಗಳು ಶುರುವಾಗಿದ್ದು, ಮಣ್ಣಿನ ರಾಶಿಯನ್ನು ಅಗೆದು ದೇಹಗಳಿಗಾಗಿ ಹುಡುಕಾಟ ನಡೆಸಲಾಗುತ್ತಿದೆ. ಗುಡ್ಡಗಾಡು ಪ್ರದೇಶವಾದ ಇಲ್ಲಿ ಈ ಗ್ರಾಮಕ್ಕೆ ಭೇಟಿ ನೀಡಲು ಕೆಲವೇ ಕೆಲವು ರಸ್ತೆಗಳಿವೆ. ಆದರೆ, ಇಲ್ಲಿ 10 ಲಕ್ಷಕ್ಕೂ ಹೆಚ್ಚು ಮಂದಿ ಈ ದ್ವೀಪ ರಾಜ್ಯದಲ್ಲಿ ವಾಸವಿದ್ದು, ಪ್ರಗತಿಪರ ರೈತರಿದ್ದಾರೆ. ಸುಮಾರು 800 ಭಾಷೆಗಳನ್ನು ಮಾತನಾಡುತ್ತಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಗಡಿಗಳು ಸುರಕ್ಷಿತವಾಗಿದ್ದರೆ ಭಾರತವು ಹೆಚ್ಚು ವೇಗವಾಗಿ ಪ್ರಗತಿ ಹೊಂದುತ್ತಿತ್ತು

**ನವದೆಹಲಿ:** ತನ್ನ ಗಡಿಗಳು ಹೆಚ್ಚು ಸುರಕ್ಷಿತವಾಗಿದ್ದರೆ, ವಿರೋಧಿಗಳು ಇಲ್ಲದಿದ್ದರೆ ಭಾರತವು ಹೆಚ್ಚು ವೇಗದಲ್ಲಿ ಪ್ರಗತಿ ಹೊಂದುತ್ತಿತ್ತು ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಹೇಳಿದ್ದಾರೆ, ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಆಯೋಜಿಸಿದ್ದ ರುಸ್ತಮ್‌ಜಿ ಸ್ಮಾರಕ ಉಪನ್ಯಾಸದಲ್ಲಿ ಮಾತನಾಡಿ, ಕಳೆದ 10 ವರ್ಷಗಳಲ್ಲಿ ದೇಶದ ಶಕ್ತಿಯು ಅಗಾಧವಾಗಿ ಬೆಳೆದಿದೆ ಎಂದು ಒತ್ತಿ ಹೇಳಿದ್ದಾರೆ. ನಾವು ಹೆಚ್ಚು ಸುರಕ್ಷಿತ ಗಡಿಗಳನ್ನು ಹೊಂದಿದ್ದರೆ ಭಾರತದ ಆರ್ಥಿಕ ಪ್ರಗತಿಯು ಹೆಚ್ಚು ವೇಗವಾಗಿರುತ್ತಿತ್ತು ,ಮುಂಬರುವ ಭವಿಷ್ಯದಲ್ಲಿ, ನಮ್ಮ ವೇಗದ ಆರ್ಥಿಕ ಬೆಳವಣಿಗೆಗೆ ಅಗತ್ಯವಿರುವಷ್ಟು ನಮ ಗಡಿಗಳು ಸುರಕ್ಷಿತವಾಗಿರಲಿವೆ ಎಂದು ನಾನು ಭಾವಿಸುವುದಿಲ್ಲ. ಆದ್ದರಿಂದ, ಗಡಿ ಕಾವಲು ಪಡೆಗಳ ಮೇಲಿನ ಜವಾಬ್ದಾರಿಯು ತುಂಬಾ ಭಾರವಾಗಿದೆ.

ಅವರು ಮುಂದುವರಿಯಬೇಕಾಗಿದೆ. ನಮ ರಾಷ್ಟ್ರೀಯ ಹಿತಾಸಕ್ತಿ ಮತ್ತು ದೇಶವನ್ನು ರಕ್ಷಿಸಲಾಗಿದೆ ಶಾಶ್ವತವಾಗಿ 24★7 ಎಚ್ಚರದಿಂದಿರಬೇಕು ಎಂದು ಅವರು ಹೇಳಿದರು. ಗಡಿಗಳು ಮುಖ್ಯ ಏಕೆಂದರೆ ಅದು ನಮ್ಮ ಸಾರ್ವಭೌಮತ್ವವನ್ನು ವ್ಯಾಖ್ಯಾನಿಸುವ ಮಿತಿಯಾಗಿದೆ ಜಮೀನ್ ಪರ್ ಜೋ ಕಬ್ಜಾ ಹೈ ವೋ ಅಪ್ನಾ ಹೈ, ಬಾಕಿ ತೊ ಸಬ್ ಅದಾಲತ್ ಔರ್ ಕಚೆಹ್ರಿ ಕಾ ಕಾಮ್ ಹೈ, ಉಸ್ಸೆ ಫರಕ್ ನಹೀ ಪಡ್ತಾ (ನಮ್ಮ ಸ್ವಾಧೀನದಲ್ಲಿರುವ ಭೂಮಿ ನಮ್ಮದು, ಉಳಿದವು ನ್ಯಾಯಾಲಯದ ವಿಷಯ ಮತ್ತು ಅದು ಅಪ್ರಸ್ತುತ) ಎಂದು ದೋವಲ್ ಯೋಧರಿಗೆ ಹುರುಪು ತಂಬಿದರು.

ಕಳೆದ 10 ವರ್ಷಗಳಲ್ಲಿ ಗಡಿ ಭದ್ರತೆಗೆ ಸರ್ಕಾರವು ಹೆಚ್ಚಿನ ಗಮನವನ್ನು ನೀಡಿದೆ, ಈ ಅವಧಿಯಲ್ಲಿ ನಮ್ಮ ಸಮಗ್ರ ರಾಷ್ಟ್ರೀಯ ಶಕ್ತಿಯು ಅಗಾಧವಾಗಿ ಬೆಳೆದಿದೆ ಎಂದರು. ಭಾರತವು ಅತಿದೊಡ್ಡ ಉದ್ಯೋಗಿಗಳನ್ನು ಹೊಂದಿದ್ದು, ಉನ್ನತ ತಂತ್ರಜ್ಞಾನದ ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್‌ಗಳು, ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ರಕ್ಷಣಾ ಮತ್ತು ಭದ್ರತಾ ಉತ್ಪಾದನೆಯ ವಿವಿಧ ಕ್ಷೇತ್ರಗಳ ಕೇಂದ್ರವಾಗಲಿದೆ ಎಂದು ಅವರು ಹೇಳಿದರು.



**ಕಳೆದ 10 ವರ್ಷಗಳಲ್ಲಿ ದೇಶದ ಶಕ್ತಿಯು ಅಗಾಧವಾಗಿ ಬೆಳೆದಿದೆ**

**ಶಸ್ತ್ರಾಸ್ತ್ರಗಳ ಆಮದುದಾರನಾಗಿದ್ದ ದೇಶವು ಮಾರ್ಚ್ 31 ರವರೆಗೆ ಆ 2.5 ಶತಕೋಟಿ ಮೌಲ್ಯದ ಶಸ್ತ್ರಾಸ್ತ್ರಗಳನ್ನು ರಫ್ತು ಮಾಡಿದೆ, ಸರ್ಕಾರದ ಸ್ವಾವಲಂಬನೆ ಮತ್ತು ಆತ್ಮನಿರ್ಭರ್ ಭಾರತ್ ನೀತಿಯಿಂದಾಗಿ ದೊಡ್ಡ ರಫ್ತುದಾರನಾಗಿ ಹೊರಹೊಮ್ಮಿದೆ -ದೋವಲ್**

ಈ ಬದಲಾಗುತ್ತಿರುವ ಭಾರತದಲ್ಲಿ, ಸಮೃದ್ಧಿಯು ಸ್ವಲ್ಪ ಮಟ್ಟಿಗೆ ಭದ್ರತೆಯನ್ನು ಖಾತರಿಪಡಿಸುತ್ತದೆ ಮತ್ತು ಹೆಚ್ಚು ದೊಡ್ಡ ಪ್ರದೇಶಗಳಲ್ಲಿ ದುರ್ಬಲತೆಯನ್ನು ಹೆಚ್ಚಿಸುತ್ತದೆ ಎಂದು ಅವರು ಹೇಳಿದರು.

ಇವೆಲ್ಲವೂ ರಾಷ್ಟ್ರೀಯ ಶಕ್ತಿಯ ಅಂಶಗಳಾಗಿವೆ. ಚೀನೀಯರು ಸಮಗ್ರ ರಾಷ್ಟ್ರೀಯ ಶಕ್ತಿ ಎಂದು ಕರೆಯುತ್ತಾರೆ. ನಿಮ್ಮ ಆರ್ಥಿಕತೆ, ನಿಮ್ಮ ಭೌಗೋಳಿಕ ವಿಸ್ತಾರ, ನಿಮ್ಮ ಭೌಗೋಳಿಕ-ತಂತ್ರದ ಸ್ಥಾನೀಕರಣ, ರಕ್ಷಣಾ ಪಡೆಗಳು, ತಾಂತ್ರಿಕ ಸಾಧನೆಗಳು ಮತ್ತು ಭಾರತದ ಸಮಗ್ರ ರಾಷ್ಟ್ರೀಯ ಶಕ್ತಿಯು ತುಂಬಾ ಹೆಚ್ಚು ಎಂದು ಅವರು ಹೇಳಿದರು.

# ಎಐ ತಂತ್ರಜ್ಞಾನ ಎಲ್ಲಾ ಉದ್ಯೋಗಗಳನ್ನೂ ಇಲ್ಲವಾಗಿಸುತ್ತೆ

## • ಯಾರೊಬ್ಬರಿಗೂ ಉದ್ಯೋಗ ಇರಲ್ಲ, ನನ್ನ ಅತಿ ದೊಡ್ಡ ಭಯ ಎಐ : ಉದ್ಯಮಿ ಎಲಾನ್ ಮಸ್ಕ್ ಭವಿಷ್ಯ

**ಪ್ಯಾರಿಸ್:** ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನವು ಅಂತಿಮವಾಗಿ ಎಲ್ಲಾ ಉದ್ಯೋಗಗಳನ್ನೂ ಇಲ್ಲವಾಗಿಸುತ್ತೆ ಎಂದು ಟೆಸ್ಲಾ ಸಂಸ್ಥೆಯ ಸಿಇಒ ಹಾಗೂ ಅಮೆರಿಕದ ಬಿಲಿಯನೇರ್ ಉದ್ಯಮಿ ಎಲಾನ್ ಮಸ್ಕ್ ಎಚ್ಚರಿಕೆ ನೀಡಿದ್ದಾರೆ. ಅಷ್ಟೇ ಅಲ್ಲ, ಇದು ಕೆಟ್ಟ ಬೆಳವಣಿಗೆ ಏನೂ ಅಲ್ಲ ಎಂದೂ ಅವರು ವಿಶ್ಲೇಷಿಸಿದ್ದಾರೆ. ಫ್ರಾನ್ಸ್ ರಾಜಧಾನಿ ಪ್ಯಾರಿಸ್‌ನಲ್ಲಿ ಸ್ಟಾರ್ಟಪ್ ಹಾಗೂ ಟೆಕ್ ಶೃಂಗ ಸಭೆ ಉದ್ದೇಶಿಸಿ ಮಾತನಾಡಿದ ಎಲಾನ್ ಮಸ್ಕ್, ಬಹುಶಃ ಮುಂದಿನ ದಿನಗಳಲ್ಲಿ ನಮ್ಮಲ್ಲಿ ಯಾರೊಬ್ಬರಿಗೂ ಉದ್ಯೋಗವೇ ಇರೋದಿಲ್ಲ ಎಂದೂ ಹೇಳಿದ್ದಾರೆ.

ಈ ಶೃಂಗ ಸಭೆಗೆ ವರ್ಚ್ಯುವಲ್ ರೂಪದಲ್ಲಿ ಭಾಗಿಯಾಗಿದ್ದ ಎಲಾನ್ ಮಸ್ಕ್, ವೆಬ್ ಕ್ಯಾಬ್ ಮೂಲಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಮುಂದಿನ ದಿನಗಳಲ್ಲಿ ಉದ್ಯೋಗ ಅನ್ನೋದು 'ಐಚ್ಛಿಕ' ಆಯ್ಕೆ ಆಗಬಹುದು ಎಂದು ಮಸ್ಕ್ ಭವಿಷ್ಯ ನುಡಿದಿದ್ದಾರೆ. ಮುಂದಿನ ದಿನಗಳಲ್ಲಿ ನೀವು ಯಾವುದೋ ಒಂದು ರೀತಿಯ ಹವ್ಯಾಸದ ರೀತಿ ಉದ್ಯೋಗ ಮಾಡಬೇಕಾದ ಸನ್ನಿವೇಶ ಬರಬಹುದು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಹಾಗೂ ರೋಬೋಟಿಕ್ ತಂತ್ರಜ್ಞಾನಗಳು ನಿಮಗೆ ಬೇಕಿರುವ ಎಲ್ಲಾ ಸರಕು, ಸೇವೆಗಳನ್ನೂ ಸಮರ್ಪಕವಾಗಿ ಒದಗಿಸಲಿವೆ ಎಂದು ಮಸ್ಕ್ ಹೇಳಿದ್ದಾರೆ.

- ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಂತಿಮವಾಗಿ ಎಲ್ಲ ಉದ್ಯೋಗಗಳನ್ನೂ ಇಲ್ಲವಾಗಿಸುತ್ತೆ
- ಟೆಸ್ಲಾ ಸಂಸ್ಥೆಯ ಸಿಇಒ, ಅಮೆರಿಕದ ಬಿಲಿಯನೇರ್ ಉದ್ಯಮಿ ಎಲಾನ್ ಮಸ್ಕ್ ಎಚ್ಚರಿಕೆ
- ಇದು ಕೆಟ್ಟ ಬೆಳವಣಿಗೆ ಏನೂ ಅಲ್ಲ ಎಂದಿರುವ ಎಲಾನ್ ಮಸ್ಕ್!

ಇದೇ ವೇಳೆ ಜಾಗತಿಕ ಮೂಲ ವೇತನದ ಕುರಿತಾಗಿಯೂ ಮಾತನಾಡಿದ ಎಲಾನ್ ಮಸ್ಕ್, ಈ ವಿಚಾರವಾಗಿ ಹೆಚ್ಚು ವಿವರಣೆ ನೀಡದೆ ಸರಕು ಹಾಗೂ ಸೇವಾ ವಲಯದ ಕುರಿತಾಗಿಯೇ ತಮ್ಮ ಮಾತನ್ನು ಮುಂದುವರೆಸಿದರು. ಭವಿಷ್ಯದಲ್ಲಿ ಯಾವುದೇ ಸರಕು ಹಾಗೂ ಸೇವೆಗಳ ಕೊರತೆಯೇ ಎದುರಾಗೋದಿಲ್ಲ ಎಂದು ಹೇಳಿದ ಎಲಾನ್ ಮಸ್ಕ್, ಕಳೆದ ಕೆಲವು ವರ್ಷಗಳಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ಸಾಮರ್ಥ್ಯ ಅತಿ ವೇಗದಲ್ಲಿ ವೃದ್ಧಿಯಾಗುತ್ತಿದೆ ಎಂದರು. ಇನ್ನು ಈ ತಂತ್ರಜ್ಞಾನವನ್ನು ಜವಾಬ್ದಾರಿಯುತವಾಗಿ ಹೇಗೆ ಬಳಸಿಕೊಳ್ಳೋದು ಅನ್ನೋದ್ರ ಕುರಿತಾಗಿ ಆಯಾ ಸಂಸ್ಥೆಗಳು ಸೂಕ್ತ ಅಧ್ಯಯನ ನಡೆಸಬೇಕಾದ ಅನಿವಾರ್ಯತೆ ಇದೆ ಎಂದು ಮಸ್ಕ್ ಹೇಳಿದ್ದಾರೆ.

**ಎಲಾನ್ ಮಸ್ಕ್ ಎಚ್ಚರಿಕೆ**



ಇದೇ ವೇಳೆ ಪೋಷಕರು ತಮ್ಮ ಮಕ್ಕಳ ಮೇಲೆ ನಿಗಾ ಇರಿಸಬೇಕು ಎಂದು ಹೇಳಿರುವ ಮಸ್ಕ್, ಅದರಲ್ಲೂ ಸಾಮಾಜಿಕ ಜಾಲತಾಣಗಳಿಂದ ನಿಮ್ಮ ಮಕ್ಕಳು ದೂರ ಇರುವಂತೆ ನೋಡಿಕೊಳ್ಳಿ ಎಂದಿದ್ದಾರೆ. ಸಾಮಾಜಿಕ ಜಾಲತಾಣಗಳು ಉದ್ದೀಪನಗೊಳಿಸುವ ಎಐ ತಂತ್ರಜ್ಞಾನವನ್ನು ಒಳಗೊಂಡಿವೆ ಎಂದು ಮಸ್ಕ್ ಎಚ್ಚರಿಸಿದ್ದಾರೆ.

ಹಾಗೆ ನೋಡಿದರೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಎಲ್ಲಾ ವಲಯಗಳಲ್ಲೂ ವ್ಯಾಪಿಸುತ್ತಿರುವ ಇಂದಿನ ದಿನಗಳಲ್ಲಿ ಉದ್ಯೋಗ ಮಾರುಕಟ್ಟೆಯ ಸ್ಥಿತಿಗತಿಯೇ ಬದಲಾಗುತ್ತಿದೆ ಎಂದು ತಜ್ಞರು ಪದೇ ಪದೇ ತಮ್ಮ ಕಳವಳ ವ್ಯಕ್ತಪಡಿಸುತ್ತಲೇ ಇದ್ದಾರೆ.

ಇದೀಗ ಎಲಾನ್ ಮಸ್ಕ್ ಮಾತುಗಳು ತಜ್ಞರ ಈ ವಾದಕ್ಕೆ ಪುಷ್ಠಿ ನೀಡಿದೆ.

**ಎಐ ತಂತ್ರಜ್ಞಾನ ತಮ್ಮ ಅತಿ ದೊಡ್ಡ ಭಯ ಎಂದು ಹೇಳಿಕೊಂಡಿದ್ದ ಎಲಾನ್ ಮಸ್ಕ್, ಈ ಹಿಂದೆ ಕೂಡಾ ಗಮನ ಸೆಳೆದಿದ್ದರು. ಇದಕ್ಕೆ ಕಾರಣಗಳನ್ನೂ ಎಲಾನ್ ಮಸ್ಕ್ ವಿವರಿಸಿದ್ದಾರೆ. ಒಂದು ವೇಳೆ ಕಂಪ್ಯೂಟರ್ ಹಾಗೂ ರೋಬೋಟ್‌ಗಳು ನಮಗಿಂತಲೂ ಉತ್ತಮವಾಗಿ ಎಲ್ಲಾ ಕೆಲಸಗಳನ್ನೂ ಮಾಡುವಂತಿದ್ದರೆ ನಮ್ಮ ಜೀವ, ಜೀವನಕ್ಕೆ ಏನು ಮೌಲ್ಯವಿದೆ ಎಂಬ ಪ್ರಶ್ನೆಯನ್ನೂ ಎಲಾನ್ ಮಸ್ಕ್ ಕೇಳಿದ್ದಾರೆ.**

# ಮಿನಿ ನ್ಯೂಸ್

## ವಿಯೆಟ್ನಾಂನ ಕಟ್ಟಡದಲ್ಲಿ ಬೆಂಕಿ ದುರಂತ, 14 ಜನರ ಸಾವು

• ಉದಯವಾಹಿನಿ ಹನೋಯಿ

ವಿಯೆಟ್ನಾಂನ ಹನೋಯಿಯಲ್ಲಿನ ಕಟ್ಟಡದಲ್ಲಿ ತಡ ರಾತ್ರಿ, ಬೆಂಕಿ ಹೊತ್ತಿಕೊಂಡು ಅಲ್ಲಿದ್ದ 14 ಜನರು ಸಾವನ್ನಪ್ಪಿದ್ದಾರೆ. ಸುಮಾರು 12:30 ರ ಸುಮಾರಿಗೆ ಬೆಂಕಿ ಕಾಣಿಸಿಕೊಂಡಿದ್ದು ಸುಮಾರು 1 ತಾಸು ಬೆಂಕಿಯ ಕೆನ್ನಾಲಿಗೆ ಕಟ್ಟಡದ ಎಲ್ಲೆಡೆ ವ್ಯಾಪಿಸಿ ನಾಶಪಡಿಸಿದೆ ಎಂದು ಅಧಿಕೃತ ವಿಯೆಟ್ನಾಂ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಸುಮಾರು ಒಂದೂವರೆ ತಾಸು ಬೆಂಕಿ ನಂದಿಸಲು ಪ್ರಯಾಸಪಡಬೇಕಾಯಿತು. ಬೆಂಕಿ ಹೊತ್ತಿಕೊಂಡಾಗ ಒಳಗೆ ಎಷ್ಟು ಮಂದಿ ಇದ್ದರು ಎಂಬುದು ತಕ್ಷಣಕ್ಕೆ ತಿಳಿದುಬಂದಿಲ್ಲ.ಕಟ್ಟಡವು ಸೆಂಟ್ರಲ್ ಹನೋಯಿಯಲ್ಲಿ ಕಿರಿದಾದ ರಸ್ತೆಯಲ್ಲಿದ್ದು ಹಲವಾರು ಕೊಠಡಿಗಳು ಬಾಡಿಗೆಗೆ ನೀಡಲಾಗಿತ್ತು.ಹಲವರು ಗಾಯಗೊಂಡಿದ್ದು ಅವರನ್ನು ಆಸ್ಪತ್ರಗೆ ದಾಖಲಿಸಲಾಗಿದೆ.

## ಮಿನಿ ಬಸ್‌ಗೆ ಟ್ರಕ್ ಡಿಕ್ಕಿ, 7 ಮಂದಿ ಸಾವು

**ಅಂಬಾಲ:** ಟ್ರಕ್ ಮಿನಿ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಏಳು ಜನರು ಸಾವನ್ನಪ್ಪಿ, ಸುಮಾರು 25 ಜನರು ಗಾಯಗೊಂಡಿರುವ ಘಟನೆ ಇಂದು ಮುಂಜಾನೆ ಹರಿಯಾಣದ ಅಂಬಾಲಾದಲ್ಲಿ ನಡೆದಿದೆ ಕುಂಡ್ಲಿ-ಮನೇಸರ್-ಪಲ್ವಾಲ್ (ಕೆಎಂಪಿ) ಎಕ್ಸ್‌ಪ್ರೆಸ್ ವೇಯಲ್ಲಿ ಸುಮಾರು 2 ಮೀ ದೂರದಲ್ಲಿ ಈ ಘಟನೆ ನಡೆದಿದೆ. ಬಸ್‌ನಲ್ಲಿ ಸುಮಾರು 60 ಜನರು ಇದ್ದರು, ಎಲ್ಲರೂ ಪಂಜಾಬ್‌ನ ಹೋಶಿಯಾರ್ಪುರ ಮತ್ತು ಲುಧಿಯಾನ ನಿವಾಸಿಗಳು. ಇವರೆಲ್ಲರೂ ಮಥುರಾ ಮತ್ತು ವೃಂದಾವನದಿಂದ ಧಾರ್ಮಿಕ ತೀರ್ಥಯಾತ್ರೆಗಳನ್ನು ಮುಗಿಸಿ ಹಿಂತಿರುಗುತ್ತಿದ್ದರು. ಗಾಯಗೊಂಡವರೆಲ್ಲರೂ ಚೇತರಿಸಿಕೊಂಡಿದ್ದಾರೆ ಎಂದು ಸದರ್ ಠೌರು ಠಾಣಾಧಿಕಾರಿ, ಇನ್ಸ್‌ಪೆಕ್ಟರ್ ಜಿತೇಂದ್ರ ಕುಮಾರ್ ತಿಳಿಸಿದ್ದಾರೆ. ಅಪಘಾತದ ನಂತರ ಚಾಲಕ ಕುಡಿದು ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಅಪಘಾತದಲ್ಲಿ ಬದುಕುಳಿದವರು ತಿಳಿಸಿದ್ದಾರೆ. ಅಪಘಾತ ಸಂಭವಿಸಿದಾಗ ಬಸ್ಸಿನಲ್ಲಿದ್ದ ಎಲ್ಲಾ ಪ್ರಯಾಣಿಕರು ನಿದ್ರೆಯಲ್ಲಿದ್ದರು, ಮೃತರೆಲ್ಲಾ ಒಂದೇ ಕುಟುಂಬಕ್ಕೆ ಸೇರಿದವರು ಎಂದು ಅವರು ಹೇಳಿದ್ದಾರೆ.

## ಕೇದಾರನಾಥಗೆ ತೆರಳುತ್ತಿದ್ದ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶ: ಪ್ರಯಾಣಿಕರು ಸೇಫ್

**ಕೇದಾರನಾಥ:** ಕೇದಾರನಾಥ ಹೆಲಿಪ್ಯಾಡ್‌ನಿಂದ ಸುಮಾರು 100 ಮೀಟರ್ ದೂರದಲ್ಲಿ ತಾಂತ್ರಿಕ ದೋಷದಿಂದ 7 ಮಂದಿಯನ್ನು ಹೊತ್ತೊಯ್ಯುತ್ತಿದ್ದ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶ ಮಾಡಿದೆ. ಎಲ್ಲಾ 6 ಪ್ರಯಾಣಿಕರು ಮತ್ತು ಪೈಲಟ್ ಸುರಕ್ಷಿತವಾಗಿದ್ದಾರೆ.


ಸಿರ್ಸಿ ಹೆಲಿಪ್ಯಾಡ್‌ನಿಂದ ಕೇದಾರನಾಥ ಧಾಮಕ್ಕೆ ಪೈಲಟ್‌ನೊಂದಿಗೆ 6 ಮಂದಿ ಪ್ರಯಾಣಿಕರನ್ನು ಹೊತ್ತು ಬರುತ್ತಿದ್ದ ಕೆಸ್ಟ್ರೆಲ್ ಏವಿಯೇಷನ್‌ನ ಹೆಲಿಕಾಪ್ಟರ್ ಕೆಲವು ತಾಂತ್ರಿಕ ಸಮಸ್ಯೆಯಿಂದಾಗಿ ತುರ್ತು ಭೂಸ್ಪರ್ಶ ಮಾಡಿದೆ. ಈ ವರ್ಷ ಚಾರ್ ಧಾಮ್ ಯಾತ್ರೆಯು ಮೇ 10 ರಂದು ಪ್ರಾರಂಭವಾಯಿತು, ಗಂಗೋತ್ರಿ, ಯಮುನೋತ್ರಿ ಮತ್ತು ಕೇದಾರನಾಥ ಸೇರಿದಂತೆ ಮೂರು ನಾಲ್ಕು ದೇವಾಲಯಗಳನ್ನು ತೆರೆಯಲಾಯಿತು. ಮೇ 12 ರಂದು ಬದರಿನಾಥದ ಬಾಗಿಲು ತೆರೆಯಲಾಗಿತ್ತು.

## ತಾಳಿ ಕಟ್ಟುವಾಗ ವಧುವಿಗೆ ಮುತ್ತಿಟ್ಟ ವರ : ರಣರಂಗವಾದ ಮದುವೆ ಮನೆ

**ಲಖ್ನೋ:** ಮದುವೆಯೊಂದರಲ್ಲಿ ತಾಳಿ ಕಟ್ಟಿದ ಬಳಿಕ ವರ, ವಧುವಿಗೆ ಮುತ್ತಿಟ್ಟಿದ್ದಕ್ಕೆ ದೊಡ್ಡ ರಾಧಾಂತ ನಡೆದು ಮದುವೆ ಮಂಟಪವು ರಣರಂಗವಾದ ಘಟನೆ ಉತ್ತರಪ್ರದೇಶದ ಅಶೋಕನಗರದಲ್ಲಿ ತಡವಾಗಿ ಬೆಳಕಿಗೆ ಬಂದಿದೆ. ಹಾರ ಹಾಕಿದ ಬಳಿಕ ವರ ವಧುವಿಗೆ ಮುತ್ತು ಕೊಟ್ಟಿದ್ದಕ್ಕೆ ಎರಡೂ ಕಡೆಯ ಕುಟುಂಬಸ್ಥರು ಹೊಡೆದಾಡಿಕೊಂಡಿದ್ದಾರೆ. ವರನ ಮುತ್ತಿನಾಟಕ್ಕೆ ಸಿಟ್ಟಿಗೆದ್ದ ವಧುವಿನ ಕಡೆಯವರು ಜಗಳ ತೆಗೆದಿದ್ದಾರೆ. ಮಾತಿಗೆ ಮಾತು ಬೆಳೆದು ಕೈಕೈ ಮಿಲಾಯಿಸಿದ್ದಾರೆ. ವಧುವಿನ ಕುಟುಂಬಸ್ಥರು ದೊಣ್ಣೆ ಹಿಡಿದು ವೇದಿಕೆ ಮೇಲೆ ಏರಿ ವರನ ಮನೆಯವರಿಗೆ ಥಳಿಸಿದ್ದಾರೆ. ಘರ್ಷಣೆಯಲ್ಲಿ ವಧುವಿನ ತಂದೆ ಸೇರಿದಂತೆ ಆರು ಮಂದಿ ಗಾಯಗೊಂಡಿದ್ದಾರೆ.


ಪೊಲೀಸರ ಪ್ರಕಾರ, ರಾತ್ರಿ ವಧುವಿನ ತಂದೆ ತನ್ನ ಇಬ್ಬರು ಹೆಣ್ಣು ಮಕ್ಕಳ ಮದುವೆಯನ್ನು ಏರ್ಪಡಿಸಿದ್ದರು. ಮೊದಲ ಮದುವೆ ಯಾವುದೇ ತೊಂದರೆಯಿಲ್ಲದೆ ಮುಕ್ತಾಯಗೊಂಡರೆ, ಎರಡನೇ ಮದುವೆಯಿಂದ ದೊಡ್ಡ ರಾದ್ಧಾಂತವೇ ಸೃಷ್ಟಿಯಾಗಿತ್ತು. ವಧುವಿನ ಕುಟುಂಬವು ವರನು ವೇದಿಕೆಯ ಮೇಲೆ ಬಲವಂತವಾಗಿ ಚುಂಬಿಸಿದ್ದಾನೆ ಎಂದು ಆರೋಪಿಸಿದ್ದಾರೆ. ಆದರೆ ಹಾರ ಬದಲಾಯಿಸುವ ಸಮಾರಂಭದ ನಂತರ ವಧು ಚುಂಬಿಸುವಂತೆ ಒತ್ತಾಯಿಸಿದಳು ಎಂದು ವರ ಹೇಳಿದ್ದಾನೆ.

## ಡಾಗ್‌ಕಾಯಿನ್‌ಗೆ ಸ್ಫೂರ್ತಿಯಾಗಿದ್ದ ಜನಪ್ರಿಯ ಶ್ವಾನ ಕಬೊಸು ಇನ್ನಿಲ್ಲ



**ಟೋಕಿಯೋ:** ಸಾಮಾಜಿಕ ಜಾಲತಾಣ ಬಳಕೆ ಮಾಡುವವರು ಈ ಶ್ವಾನವನ್ನು ನೋಡದೆ ಇರಲು ಸಾಧ್ಯವಿಲ್ಲ. ಬಹುಶಃ ಈ ನಾಯಿಯ ಚಿತ್ರವನ್ನು ಬಳಸದ ಮೀಮ್ ಪೇಜ್‌ಗಳೇ ಇಲ್ಲ. ಜಗತ್ತಿನಾದ್ಯಂತ ವೈರಲ್ ಆಗಿದ್ದ, ಕೋಟ್ಯಂತರ ಜನರಲ್ಲಿ ನಗು ಮೂಡಿಸಿದ್ದ ಜಪಾನ್‌ನ ಬಹು ಜನಪ್ರಿಯ ಶ್ವಾನ ಕಬೊಸು ಶುಕ್ರವಾರ ಮೃತಪಟ್ಟಿದೆ.

19 ವರ್ಷದ ಕಬೊಸು ಮೇ 24ರಂದು ಮೃತಪಟ್ಟಿದ್ದು, ಅದರ ವಿದಾಯದ ಕೂಟವು ಮೇ 26ರಂದು ನಡೆಯಲಿದೆ ಎಂದು ಶ್ವಾನದ ಮಾಲಕಿ ಅತ್ಸುಕೊ ಸಾಟೊ ಅವರು ಬ್ಲಾಗ್ ಪೋಸ್ಟ್‌ನಲ್ಲಿ ಸಾವಿನ ಸುದ್ದಿ ಪ್ರಕಟಿಸಿದ್ದಾರೆ. ಶಿಬಾ ಇನು ತಳಿಗೆ ಸೇರಿದ ಕಬೊಸು ಹೆಸರಿನ ಹೆಣ್ಣು ನಾಯಿಯನ್ನು ಅತ್ಸುಕೊ ಅವರು 2008ರಲ್ಲಿ ದತ್ತು ಪಡೆದುಕೊಂಡಿದ್ದರು. ಕಬೊಸು, ಮೇ 24ರ ಬೆಳಿಗ್ಗೆ 7.50ಕ್ಕೆ ಗಾಢ ನಿದ್ರೆಗೆ ಜಾರಿದೆ. ಕಬೊಸು ಈಗ ವಿಶ್ರಾಂತಿಯಲ್ಲಿದೆ ಎಂದು ಅತ್ಸುಕೊ ಸಾಟೊ ಬರೆದಿದ್ದಾರೆ. ಮೇ 26ರ ಭಾನುವಾರದಂದು ಕಬೊ-ಚಾನ್‌ಗಾಗಿ ನಾವು ವಿದಾಯದ ಕೂಟ ಆಯೋಜಿಸಲಿದ್ದೇವೆ. ಇದು ಮಧ್ಯಾಹ್ನ 1ರಿಂದ 4 ಗಂಟೆಯವರೆಗೆ ನಾರಿಟಾ ಸಿಟಿಯ ಕೊತ್ಸುನೊ ಮೊರಿಯಲ್ಲಿನ ಫ್ಲವರ್ ಕಾವೊರಿಯಲ್ಲಿ ನಡೆಯಲಿದೆ ಎಂದು ಬ್ಲಾಗ್‌ನಲ್ಲಿ ಮಾಹಿತಿ ನೀಡಿದ್ದಾರೆ. ಕಬೊಸು ಶ್ವಾನವು ಚೊಲಂಗಿಯೊ ಹೆಪಟೈಟಿಸ್ ಮತ್ತು ಲಿಂಫೋಮಾ ಲ್ಯುಕೇಮಿಯಾದ ದೀರ್ಘಕಾಲೀನ ಕಾಯಿಲೆಗೆ ತುತ್ತಾಗಿರುವುದು 2022ರಲ್ಲಿ ಪತ್ತೆಯಾಗಿತ್ತು ಎಂದು ಅತ್ಸುಕೊ ತಿಳಿಸಿದ್ದಾರೆ. ಶಿಬಾ ಇನು ತಳಿತ ಕಬೊಸು ಶ್ವಾನದ ಚಿತ್ರಗಳು 2010ರಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿತ್ತು. ಸುಮಾರು ಒಂದೂವರೆ ದಶಕ ಕಳೆದರೂ 'ಡಾಗ್' ಹೆಸರಿನಲ್ಲಿ ಇದು ಈಗಲೂ ಇಂಟರ್ನೆಟ್‌ನಲ್ಲಿ ಬಹು ಜನಪ್ರಿಯವಾಗಿಯೇ ಉಳಿದಿದೆ.



# ಫೈನಲ್‌ನಲ್ಲಿ 'ಸನ್‌ರೈಸ್' ವಿರುದ್ಧ ಕೋಲ್ಕತ್ತಾ ಕದನ

## ಆರ್‌ಆರ್ ಮಣಿಸಿ 'ಸನ್‌ರೈಸ್' ಫೈನಲ್ ಪ್ರವೇಶ, ಫೈನಲ್ ಪಂದ್ಯದಲ್ಲಿ ಕೆಕೆಆರ್ ವಿರುದ್ಧ ಪ್ರಶಸ್ತಿಗಾಗಿ ಕಾದಾಟ




**ಚೆನ್ನೈ:** ಶುಕ್ರವಾರ ನಡೆದ ಐಪಿಎಲ್‌ನ ಕ್ವಾಲಿಫೈಯರ್-2 ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ರಾಜಸ್ಥಾನ್ ರಾಯಲ್ಸ್ ವಿರುದ್ಧ 36 ರನ್‌ಗಳ ಭರ್ಜರಿ ಗೆಲುವು ಸಾಧಿಸಿ ಫೈನಲ್ ಪ್ರವೇಶಿಸಿದೆ. ಮೇ 26ರಂದು ನಡೆಯುವ ಫೈನಲ್ ಪಂದ್ಯದಲ್ಲಿ ಕೆಕೆಆರ್ ವಿರುದ್ಧ ಪ್ರಶಸ್ತಿಗಾಗಿ ಕಾದಾಟ ನಡೆಸಲಿದೆ. ಈ ಪಂದ್ಯ ಕೂಡ ಚಿದಂಬರಂ ಸ್ಟೇಡಿಯಂನಲ್ಲೇ ನಡೆಯಲಿದೆ.

ಇಲ್ಲಿನ ಎಂ.ಎ. ಚಿದಂಬರಂ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಸೋತು ಬ್ಯಾಟಿಂಗ್ ಆಹ್ವಾನ ಪಡೆದ ಸನ್‌ರೈಸರ್ಸ್ ಹೈದರಾಬಾದ್ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್‌ಗೆ 175 ರನ್ ಬಾರಿಸಿತು. ಜವಾಬಿತ್ತ ರಾಜಸ್ಥಾನ್ ಉತ್ತಮ ಆರಂಭ ಪಡೆದರೂ ಕೂಡ ಆ ಬಳಿಕ ನಾಟಕೀಯ ಕುಸಿತ ಕಂಡು 7 ವಿಕೆಟ್‌ನಷ್ಟಕ್ಕೆ 139 ರನ್‌ಗಳಿಸಲಷ್ಟೇ ಶಕ್ತವಾಗಿ ಸೋಲೊಪ್ಪಿಕೊಂಡಿತು. ರಾಜಸ್ಥಾನ್ ತಂಡದ ಸೋಲು ಕಂಡು ಪುಟ್ಟ ಅಭಿಮಾನಿಯೊಬ್ಬಳು ಕಣ್ಣೀರು ಸುರಿಸಿದ ದೃಶ್ಯ ಕೂಡ ಕಂಡು ಬಂತು.

ಚೇಸಿಂಗ್ ವೇಳೆ ರಾಜಸ್ಥಾನ್ ತಂಡಕ್ಕೆ ಆಸರೆಯಾದದ್ದು ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ ಮಾತ್ರ. ತಂಡ 24 ರನ್ ಗಳಿಸಿದ್ದ ವೇಳೆ ಟಾಮ್ ಕೊಹ್ಲರ್-ಕ್ಯಾಡ್ಮೋರ್(10) ರೂಪದಲ್ಲಿ ಮೊದಲ ವಿಕೆಟ್ ಕಳೆದುಕೊಂಡಿತು. ದ್ವಿತೀಯ ವಿಕೆಟ್ ಗೆ ಜತೆಯಾದ ನಾಯಕ ಸಂಜು ಸ್ಯಾಮ್ಸನ್ ಮತ್ತು ಯಶಸ್ವಿ ಜೈಸ್ವಾಲ್ ಕೆಲ ಕಾಲ ಜವಾಬ್ದಾರಿಯುತ ಬ್ಯಾಟಿಂಗ್ ಮೂಲಕ ತಂಡಕ್ಕೆ ನೆರವಾದರು. ಆದರೆ ಈ ಜತೆಯಾಟ ಹೆಚ್ಚು ಹೊತ್ತು ಸಾಗಲಿಲ್ಲ. ಸ್ಯಾಮ್ಸನ್ 10 ರನ್ ಗಳಿಸಿದ್ದ ವೇಳೆ ವಿಕೆಟ್ ಕಳೆದುಕೊಂಡರು. ಆ ಬಳಿಕ ಬಂದ ರಿಯಾನ್ ಪರಾಗ್(6), ಆರ್ ಅಶ್ವಿನ್(0), ಶಿಮ್ರಾನ್ ಹೆಟ್ಮೆಯರ್(4) ಒಬ್ಬರ ಹಿಂದೆ ಒಬ್ಬರಂತೆ ವಿಕೆಟ್ ಒಪ್ಪಿಸಿ ಪೆವಿಲಿಯನ್ ಪರೇಡ್ ನಡೆಸಿದರು. ಯಾರೂ ಕೂಡ ತಂಡಕ್ಕೆ ಆಸರೆಯಾಗುವಲ್ಲಿ ಯಶಸ್ಸು ಕಾಣಲಿಲ್ಲ. ಜೈಸ್ವಾಲ್ 3 ಸಿಕ್ಸರ್ ಮತ್ತು 4 ಬೌಂಡರಿ ಬಾರಿಸಿ 42 ರನ್ ಗಳಿಸಿದರು.

ಅಂತಿಮ ಹಂತದಲ್ಲಿ ಧ್ರುವ್ ಜುರೇಲ್ ಅರ್ಧಶತಕ ಬಾರಿಸುವ ಮೂಲಕ ಶಕ್ತಿ ಮೀರಿದ ಬ್ಯಾಟಿಂಗ್ ಹೋರಾಟ ನಡೆಸಿದರು. ಇದೇ ವೇಳೆ ನಟರಾಜ್ ಓವರ್‌ನಲ್ಲಿ ಗಂಟಲಿಗೆ ಚೆಂಡು ತಾಗಿಸಿಕೊಂಡು ಸಣ್ಣ ಮಟ್ಟಿನ ಗಾಯಕ್ಕೆ ತುತ್ತಾದರು. ಆದರೆ ಅವರ ಆಟಕ್ಕೆ ಯಾವುದೇ ಅಡ್ಡಿಯಾಗಲಿಲ್ಲ. ಇವರಿಗೆ ಮತ್ತೊಂದು ತುದಿಯಲ್ಲಿ ಉತ್ತಮ ಸಾಥ್ ಸಿಗುತ್ತಿದ್ದರೆ ರಾಜಸ್ಥಾನ್‌ಗೆ ಗೆಲುವು ಒಲಿಯುವ ಸಾಧ್ಯತೆ ಇತ್ತು. ವೆಸ್ಟ್ ಇಂಡೀಸ್ ತಂಡದ ನಾಯಕ ರೋವ್ಮನ್ ಪೊವೆಲ್(6) ಕೂಡ ವಿಫಲರಾದರು. ಹೈದರಾಬಾದ್ ಪರ ಶಾಬಾಜ್ ಅಹ್ಮದ್ 4 ಓವರ್‌ಗೆ ಕೇವಲ 23 ರನ್ ಬಿಟ್ಟುಕೊಟ್ಟು ಪ್ರಮುಖ 3 ವಿಕೆಟ್ ಕಡೆವಿದರು. ಪಾರ್ಟ್ ಟೈಮ್‌ಬೌಲರ್ ಅಭಿಷೇಕ್ ಶರ್ಮ ಈ ಪಂದ್ಯದಲ್ಲಿ ಶ್ರೇಷ್ಠ ಬೌಲಿಂಗ್ ಪ್ರದರ್ಶನ ತೋರುವ ಮೂಲಕ 24 ರನ್‌ಗೆ 2 ವಿಕೆಟ್ ಕಿತ್ತರು.

ಮೊದಲು ಬ್ಯಾಟಿಂಗ್ ನಡೆಸಿದ ಹೈದರಾಬಾದ್‌ತಂಡ ಕಳೆದ ಕೆಕೆಆರ್ ವಿರುದ್ಧದ ಪಂದ್ಯದಲ್ಲಿ ಅನುಭವಿಸಿದಂತೆ ಈ ಪಂದ್ಯದಲ್ಲಿಯೂ ಆರಂಭಿಕ ಆಘಾತ ಎದುರಿಸಿತು. ಎಡಗೈ ಬ್ಯಾಟರ್ ಟ್ರೆಂಟ್ ಬೌಲ್ಟ್ ಅವರ ಮೊದಲ ಓವರ್‌ನಲ್ಲಿಯೇ ಬಡಬಡನೆ ತಲಾ ಒಂದು ಸಿಕ್ಸರ್ ಮತ್ತು ಬೌಂಡರಿ ಬಾರಿಸಿದರೂ ಈ ಬಿರುಸನ್ನು ಕಾಯ್ದುಕೊಳ್ಳಲು ಅವರಿಂದಾಗಲಿಲ್ಲ. ಇದೇ ಓವರ್‌ನ ಅಂತಿಮ ಎಸೆತದಲ್ಲಿ ಕ್ಯಾಚ್ ನೀಡಿ ವಿಕೆಟ್ ಕಳೆದುಕೊಂಡರು.

### ಆಪದ್ಬಾಂಧವ ಕ್ಲಾಸೆನ್

**ಬೌಲರ್‌ಗಳ ದಾಳಿಯ ನಡುವೆಯೂ ಹೆನ್ರಿಚ್ ಕ್ಲಾಸೆನ್ ಅರ್ಧಶತಕ ಬಾರಿಸಿ ಆಧರಿಸಿನಿಂತ ಪರಿಣಾಮ ತಂಡ 150ರ ಗಡಿ ದಾಟಿ ಉತ್ತಮ ರನ್ ಕಲೆಹಾಕಿತು. ಒಂದೆಡೆ ವಿಕೆಟ್‌ಗಳು ಬಡಬಡನೆ ಉರುಳುತ್ತಿದ್ದರೂ ಕ್ಲಾಸೆನ್ ಆಕ್ರಮಣಕಾರಿ ಆಟಕ್ಕೆ ಮುಂದಾದರು. ಇದು ಫಲ ಕೊಟ್ಟಿತು. ಕ್ಲಾಸೆನ್ ಹೊರತುಪಡಿಸಿದರೆ ಟ್ರಾವಿಸ್ ಹೆಡ್ ಪ್ರದರ್ಶನ ಗಮನಾರ್ಹ ಮಟ್ಟದಲ್ಲಿತ್ತು. ಹೆಡ್ 34 ರನ್ ಬಾರಿಸಿದರು. ಹೆಡ್ ಮತ್ತು ಕ್ಲಾಸೆನ್ ಸೇರಿಕೊಂಡು 4 ವಿಕೆಟ್‌ಗೆ 42 ರನ್‌ಗಳ ಜತೆಯಾಟ ನಡೆಸಿದರು. 18 ಓವರ್ ತನಕ ಬ್ಯಾಟಿಂಗ್ ನಡೆಸಿದ ಕ್ಲಾಸೆನ್ 34 ಎಸೆತಗಳಿಂದ ಭರ್ತಿ 50 ರನ್ ಗಳಿಸಿ ಸಂದೀಪ್ ಶರ್ಮಾ ಅವರ ಸ್ಲೋ ಯಾರ್ಕರ್ ಎಸೆತದ ಮರ್ಮವನ್ನು ಅರಿಯುವಲ್ಲಿ ವಿಫಲವಾಗಿ ಕ್ಲೀನ್ ಬೌಲ್ಡ್ ಆದರು. ಅವರ ಅರ್ಧಶತಕದ ಬ್ಯಾಟಿಂಗ್ ಇನಿಂಗ್ಸ್‌ನಲ್ಲಿ 4 ಸಿಕ್ಸರ್ ಸಿಡಿಯಿತು. ರಾಜಸ್ಥಾನ್ ಪರ ಚಹಲ್ ವಿಕೆಟ್ ಕೀಳದಿದ್ದರೂ ಕೂಡ ಪ್ರಮುಖ ಮೂರು ಆಟಗಾರರ ಕ್ಯಾಚ್ ಹಿಡಿದು ಮಿಂಚಿದರು. ಅವೇಶ್ ಖಾನ್ ಅವರು ಅಪಾಯಕಾರಿ ಅಬ್ದುಲ್ ಸಮದ್(0) ಮತ್ತು ನಿತೇಶ್ ರೆಡ್ಡಿ(5) ಅವರನ್ನು ಸತತ ಎಸೆತಗಳಿಂದ ಔಟ್ ಮಾಡಿದ್ದು ಹೈದರಾಬಾದ್‌ನ ದೊಡ್ಡ ಮೊತ್ತಕ್ಕೆ ಹಿನ್ನಡೆಯಾಯಿತು. ಅಂತಿಮ ಹಂತದಲ್ಲಿ ಶಹಬಾಜ್ ಅಹಮದ್ 18 ರನ್ ಬಾರಿಸಿದರು. ರಾಜಸ್ಥಾನ್ ಪರ ಬೌಲ್ಟ್ ಮತ್ತು ಅವೇಶ್ ಖಾನ್ ತಲಾ ವಿಕೆಟ್ ಕಿತ್ತರೆ, ಸಂದೀಪ್ ಶರ್ಮ 2 ವಿಕೆಟ್ ಪಡೆದರು.**

# ಭಾವನಾತ್ಮಕ ವಿಡಿಯೋ ಮೂಲಕ ದಿನೇಶ್ ಕಾರ್ತಿಕ್‌ಗೆ ವಿದಾಯ

ರಾಜಸ್ಥಾನ್ ವಿರುದ್ಧ ಸೋತ ಬಳಿಕ ಆರ್‌ಸಿಬಿ ಆಟಗಾರರು ಮೈದಾನದಲ್ಲೇ ಕಾರ್ತಿಕ್ ಅವರಿಗೆ ಭಾವಪೂರ್ಣ ವಿದಾಯ ಹೇಳಿದ್ದರು. ಇದೀಗ ಆರ್‌ಸಿಬಿ ಫ್ರಾಂಚೈಸಿ ಕಾರ್ತಿಕ್‌ಗಾಗಿ ವಿಶೇಷ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದೆ. ಇದರಲ್ಲಿ ವಿರಾಟ್ ಕೊಹ್ಲಿ ಮತ್ತು ಕಾರ್ತಿಕ್ ಪತ್ನಿ ದೀಪಿಕಾ ಪಳ್ಳಿಕಲ್, ದಿನೇಶ್ ಬಗ್ಗೆ ಮಾತನಾಡುತ್ತಿರುವುದು ಕಂಡುಬಂದಿದೆ.

ಟೀಂ ಇಂಡಿಯಾದ ಮಾಜಿ ಹಾಗೂ ಆರ್‌ಸಿಬಿಯ ಹಾಲಿ ಸ್ಟಾರ್ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ದಿನೇಶ್ ಕಾರ್ತಿಕ್ ಇಂಡಿಯನ್ ಪ್ರೀಮಿಯರ್ ಲೀಗ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಆದಾಗ್ಯೂ, ಇದು ಅವರ ಕೊನೆಯ ಐಪಿಎಲ್ ಸೀಸನ್ ಎಂದು ಕಾರ್ತಿಕ್ ಈಗಾಗಲೇ ಈ ಬಗ್ಗೆ ಹೇಳಿದ್ದರು. ಅದರಂತೆ ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ಕೊನೆಯ ಬಾರಿಗೆ ಆರ್‌ಸಿಬಿ ಪರ ಕಣಕ್ಕಿಳಿದಿದ್ದ ದಿನೇಶ್ ಕಾರ್ತಿಕ್ ಮಿಲಿಯನ್ ಡಾಲರ್ ಟೂರ್ನಿಗೆ ವಿದಾಯ ಹೇಳಿದ್ದಾರೆ. ಕೊನೆಯ ಆವೃತ್ತಿಯಲ್ಲೂ ಅವಕಾಶ ಸಿಕ್ಕಾಗಲೆಲ್ಲಾ ತಂಡದ ಪರ ಅದ್ಭುತ ಪ್ರದರ್ಶನ ನೀಡಿದ್ದ ಕಾರ್ತಿಕ್, ತಂಡವನ್ನು ಎಲಿಮಿನೇಟರ್‌ವರೆಗೂ ಕೊಂಡೊಯ್ಯುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

**ದಿನೇಶ್ ಪತ್ನಿ ದೀಪಿಕಾ ಭಾವುಕ:** ಆರ್‌ಸಿಬಿ ತನ್ನ ಎಕ್ಸ್ ಖಾತೆಯಲ್ಲಿ ದಿನೇಶ್ ಕಾರ್ತಿಕ್ ಬಗ್ಗೆ ವಿಶೇಷ ವೀಡಿಯೋವನ್ನು ಹಂಚಿಕೊಂಡಿದೆ. ಇದರಲ್ಲಿ ದಿನೇಶ್ ಕಾರ್ತಿಕ್ ಅವರ ಪತ್ನಿ ದೀಪಿಕಾ ಪಳ್ಳಿಕಲ್ ಅವರು ಉತ್ತಮ ಪ್ರದರ್ಶನ ನೀಡದಿದ್ದಾಗ ಅವರನ್ನು ತಂಡದಿಂದ ಕೈಬಿಡುವುದನ್ನು ನಾನು ನೋಡಿದ್ದೇನೆ. ಕಾರ್ತಿಕ್ ಸ್ಥಾನದಲ್ಲಿ ಬೇರೆ ಯಾರಾದರೂ ಇದ್ದಿದ್ದರೆ, ಅವರು ಬೇಗನೇ ಸೋಲೊಪ್ಪಿಕೊಳ್ಳುತ್ತಿದ್ದರೇನೋ ಆದರೆ ಕಾರ್ತಿಕ್ ಮಾತ್ರ ಎಂದಿಗೂ ಛಲ ಬಿಡಲಿಲ್ಲ. ಪ್ರತಿ ಬಾರಿ ಕಳಪೆ ಪ್ರದರ್ಶನ ನೀಡಿದಾಗಲೆಲ್ಲ ಅವರು ಮತ್ತೊಮ್ಮೆ ಪುಟಿದೆದ್ದು, ತಮ್ಮನ್ನು ತಾವು ಸಾಬೀತುಪಡಿಸಿದರು. ಅವರು ಈ ಧೋರಣೆಯನ್ನು ಎಂದಿಗೂ ಬಿಟ್ಟುಕೊಡುವುದಿಲ್ಲ. ಇದು ಅವರ ಬಗ್ಗೆ ಹೆಮ್ಮೆ ಪಡಬೇಕಾದ ಸಂಗತಿ ಎಂದಿದ್ದಾರೆ.

**ಒಡನಾಟ ಹಂಚಿಕೊಂಡ ವಿರಾಟ್ ಕೊಹ್ಲಿ:** ಈ ವಿಡಿಯೋದಲ್ಲಿ ಕಾರ್ತಿಕ್ ಜೊತೆ ಕಳೆದ ಕ್ಷಣಗಳನ್ನು ವಿರಾಟ್ ಕೊಹ್ಲಿ ನೆನಪಿಸಿಕೊಂಡಿದ್ದಾರೆ.




2009 ರಲ್ಲಿ ನಾವು ದಕ್ಷಿಣ ಆಫ್ರಿಕಾದಲ್ಲಿ ಚಾಂಪಿಯನ್ಸ್ ಟ್ರೋಫಿ ಆಡುತ್ತಿದ್ದಾಗ ನಾನು ಮೊದಲ ಬಾರಿಗೆ ದಿನೇಶ್ ಅವರನ್ನು ಭೇಟಿಯಾಗಿದ್ದೆ ಎಂದು ಕೊಹ್ಲಿ ಹೇಳಿದ್ದಾರೆ. ಆ ಸಮಯದಲ್ಲಿ ನಾವು ಮೊದಲ ಬಾರಿಗೆ ಡ್ರೆಸ್ಸಿಂಗ್ ಕೋಣೆಯನ್ನು ಹಂಚಿಕೊಂಡಿದ್ದೇವು. ದಿನೇಶ್ ಅವರ ಬಗ್ಗೆ ನಾನು ಹೇಳ ಬಯಸುವುದೇನೆಂದರೆ, ಅವರು ಎಂದಿಗೂ ನಿಲ್ಲಲಿಲ್ಲ. ಅವರು ಮೊದಲಿನಿಂದಲೂ ಶ್ರೇಷ್ಠ ಬ್ಯಾಟ್ಸ್‌ಮನ್. ಮೈದಾನದ ಹೊರಗೂ ದಿನೇಶ್ ಜೊತೆ ಮಾತನಾಡುತ್ತೇನೆ ಮತ್ತು ಕ್ರಿಕೆಟ್ ಜೊತೆಗೆ ಹಲವು ವಿಷಯಗಳ ಬಗ್ಗೆ ಅವರಿಗೆ ಜ್ಞಾನವಿದೆ. ನನ್ನ ಐಪಿಎಲ್ 2022 ರ ಸೀಸನ್ ಸರಿಯಾಗಿ ನಡೆಯದಿದ್ದಾಗ, ನಾನು ದಿನೇಶ್ ಅವರೊಂದಿಗೆ ಮಾತನಾಡಿದೆ ಮತ್ತು ಅವರು ನನ್ನ ಆತ್ಮವಿಶ್ವಾಸವನ್ನು ಹೆಚ್ಚಿಸಿದರು, ಅದು ನನಗೆ ಇಂದಿಗೂ ನೆನಪಿದೆ ಎಂದಿದ್ದಾರೆ.

# ಅಭಿಮಾನಿಗಳ ದುರಂಹಕಾರವೇ ಆರ್‌ಸಿಬಿ ಸೋಲಿಗೆ ಕಾರಣ

ಐಪಿಎಲ್ 17ನೇ ಆವೃತ್ತಿಯ ಲೀಗ್ ಹಂತದ ಕೊನೆಯಲ್ಲಿ ಸತತ ಆರು ಪಂದ್ಯಗಳನ್ನು ಗೆದ್ದ ನಂತರ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪ್ಲೇಆಫ್ ಹಂತಕ್ಕೆ ಏರಿತ್ತು. ಎಲಿಮಿನೇಟರ್ ನಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವನ್ನು ಸೋಲಿಸಿ ಕ್ವಾಲಿಫೈಯರ್ 2 ಗೆ ಪ್ರವೇಶಿಸುವ ಭರವಸೆ ಹೊಂದಿತ್ತು. ಆದಾಗ್ಯೂ, ಸಂಜು ಸ್ಯಾಮ್ಸನ್ ನೇತೃತ್ವದ ತಂಡವು ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಹಣಾಹಣಿಯಲ್ಲಿ ಫಾಫ್ ಡು ಪ್ಲೆಸಿಸ್ ಬಳಗವನ್ನು ಮಣಿಸಿತು. ನಾಲ್ಕು ವಿಕೆಟ್‌ಗಳಿಂದ ಸೋತ ಆರ್‌ಸಿಬಿ ನಿರಾಸೆಗೆ ಒಳಗಾಯಿತು. ಇದರೊಂದಿಗೆ ತಮ್ಮ ಮೊದಲ ಐಪಿಎಲ್ ಟ್ರೋಫಿಗಾಗಿ ಆರ್‌ಸಿಬಿಯ ಕಾಯುವಿಕೆ ಮುಂದುವರಿಯಿತು. ಆದರೆ, ಆರ್‌ಸಿಬಿ ಈ ಸೋಲಿಗೆ ದುರಂಹಕಾರವೇ ಕಾರಣ ಎಂಬುದಾಗಿ ತಮಿಳುನಾಡು ಮೂಲದ ಮಾಜಿ ಆಟಗಾರ ಹೇಳಿದ್ದಾರೆ.

ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಗೆಲ್ಲಲೇಬೇಕಾದ ಲೀಗ್ ಪಂದ್ಯದಲ್ಲಿ ಆರ್‌ಸಿಬಿ ಅಸಾಧಾರಣವಾಗಿ ಉತ್ತಮ ಪ್ರದರ್ಶನ ನೀಡಿತು. ಹೀಗಾಗಿ ಪ್ಲೇಆಫ್ಗೆ ಅರ್ಹತೆ ಪಡೆಯಿತು. ಇದರೊಂದಿಗೆ ಋತುರಾಜ್ ಗಾಯಕ್ವಾಡ್ ನೇತೃತ್ವದ ತಂಡವು ನಿರಾಶಾದಾಯಕವಾಗಿ ಋತುವನ್ನು ಕೊನೆಗೊಳಿಸಿತು. ಏತನ್ಮಧ್ಯೆ, ಪಂದ್ಯದ ನಂತರ, ಸಿಎಸ್‌ಕೆ ಅಭಿಮಾನಿಗಳು ದೂರೊಂದನ್ನು ನೀಡಿದ್ದರು. ಆರ್‌ಸಿಬಿ ಅಭಿಮಾನಿಗಳ ತಮ್ಮ ವಿರುದ್ಧ ಗೂಂಡಾಗಿರಿ ಮಾಡಿರುವ ಬಗ್ಗೆ ದೂರು ನೀಡಿದ್ದು. ಇದು ಒಂದು ಹಂತದಲ್ಲಿ ಎಕ್ಸ್ ನಲ್ಲಿ ಟ್ರೆಂಡಿಂಗ್ ಆಗಿತ್ತು. ಇದನ್ನು ಗಮನದಲ್ಲಿಟ್ಟುಕೊಂಡು, ಭಾರತದ ಮಾಜಿ ಕ್ರಿಕೆಟಿಗ ಕ್ರಿಸ್ ಶ್ರೀಕಾಂತ್ ಆರ್‌ಸಿಬಿಯ ಅಭಿಮಾನಿಗಳ ದುರಂಹಕಾರವೇ ಪ್ಲೇಆಫ್‌ನ ಸೋಲಿಗೆ ಕಾರಣ ಎಂದು ಹೇಳಿದ್ದಾರೆ. ಆರ್‌ಸಿಬಿ ಅಭಿಮಾನಿಗಳು ಆದಷ್ಟು ಮೌನವಾಗಿರಬೇಕು. ಸಿಎಸ್‌ಕೆ ತಂಡವನ್ನು ಸೋಲಿಸಿದ ನಂತರ ಅನಗತ್ಯ ವೀಡಿಯೋ ಪೋಸ್ಟ್ ಮಾಡಬಾರದಾಗಿತ್ತು ಎಂದು ಹೇಳಿದ್ದಾರೆ.

ಸಿಎಸ್‌ಕೆ ತಂಡವನ್ನು ಸೋಲಿಸಿದ ನಂತರ ಫ್ರ್ಯಾಂಚೈಸಿಯ ಆಟಗಾರರು ಮತ್ತು ಅಭಿಮಾನಿಗಳ ಜಂಭ ಹೆಚ್ಚಾಗಿತ್ತು. ಅದುವೇ ಎಲಿಮಿನೇಟರ್ ನಲ್ಲಿ ಆರ್‌ಆರ್ ವಿರುದ್ಧ ಸೋಲಿಗೆ ಕಾರಣ ಎಂದು 64 ವರ್ಷದ ಆಟಗಾರ ಹೇಳಿದ್ದಾರೆ.




''ಜೀವನದಲ್ಲಿ ನೀವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವಾಗ ನಿಮ್ಮ ಬಾಯಿ ಮುಚ್ಚಿಕೊಂಡು ಮುಂದುವರಿಯಿರಿ. ನೀವು ಮಾಡುತ್ತಿರುವ ಯಾವುದೇ ಕೆಲಸದ ವೇಳೆ ಗದ್ದಲ ಮಾಡಿದಾಗ ಆ ಕೆಲಸವನ್ನು ಉತ್ತಮವಾಗಿ ಮಾಡಲು ಸಾಧ್ಯವಿಲ್ಲ. ಆರ್‌ಸಿಬಿ ಅಭಿಮಾನಿಗಳು ಅನಗತ್ಯ ವೀಡಿಯೊಗಳನ್ನು ಪೋಸ್ಟ್ ಮಾಡುತ್ತಿದ್ದರು. ಅತಿಯಾಗಿ ತೋರಿಸುತ್ತಿದ್ದರು.

ಅದಕ್ಕಾಗಿಯೇ ಅಶ್ವಿನ್ ಮುಂದಿನ ಪಂದ್ಯದಲ್ಲಿ ಆರ್‌ಸಿಬಿಯ ಜಂಭ ಇಳಿಸಿದರು. ಅದಕ್ಕಾಗಿಯೇ ಕ್ರಿಕೆಟ್‌ನಲ್ಲಿ ನಿಮ್ಮ ಬಾಯಿ ಮುಚ್ಚಿ ಆಡಬೇಕು ಎಂದು ಹೇಳುವುದು ಎಂದು ಶ್ರೀಕಾಂತ್ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಹೇಳಿದ್ದಾರೆ.

ಆರ್‌ಸಿಬಿ ಆಟಗಾರರು ಚಪ್ಪಾಳೆಗಳನ್ನು ಪಡೆದಂತೆ ಟೀಕೆಗಳನ್ನು ಸ್ವೀಕರಿಸುವಂತೆ ಶ್ರೀಕಾಂತ್ ಕೋರಿಕೊಂಡರು. ತಂಡವು ಸತತವಾಗಿ ಆರು ಗೆಲುವುಗಳನ್ನು ಅತಿಯಾಗಿ ಸಂಭ್ರಮಿಸಲು ಪ್ರಾರಂಭಿಸಿತು. ಅಗತ್ಯವಿಲ್ಲದ ಆಕ್ರಮಣಶೀಲತೆಯನ್ನು ತೋರಿಸಿತು ಎಂದು ಅವರು ಶ್ರೀಕಾಂತ್ ಹೇಳಿದರು.

ನೀವು ಉತ್ತಮವಾಗಿ ಆಡಿದ್ದರೆ, ಅಭಿನಂದನೆಗಳು, ನೀವು ಕಳಪೆಯಾಗಿ ಆಡಿದ್ದರೆ ಟೀಕೆಗಳನ್ನು ಸ್ವೀಕರಿಸಿ. ನೀವು ಎಂದಿಗೂ ಬಾಯಿ ತೆರೆದು ಆಕ್ರಮಣಶೀಲತೆಯನ್ನು ತೋರಿಸಬಾರದು. ಸಿಎಸ್‌ಕೆ ಮತ್ತು ಮುಂಬೈ ಎರಡೂ ಪ್ರಶಸ್ತಿಗಳನ್ನು ಗೆದ್ದಿವೆ. ಆದರೆ ಎಂದಿಗೂ ಸದ್ದು ಮಾಡಿಲ್ಲ. ಆದರೆ ಆರ್‌ಸಿಬಿ ಆರು ಪಂದ್ಯಗಳನ್ನು ಗೆದ್ದಿತು. ಅವರು ಅರ್ಹತೆ ಪಡೆದ ತಕ್ಷಣ ಅವರು ಔಟ್ ಆಗಿದ್ದಾರೆ ಎಂದರು.

# ಕನ್ನಡಿಗನ ಸಾಧನೆಯನ್ನು ಹಾಡಿ ಹೊಗಳಿದ ಯಶ್



ಕಾನ್ ಫಿಲ್ಮ್ ಫೆಸ್ಟಿವೆಲ್‌ಗೆ ಮೈಸೂರಿನ ಹುಡುಗ ಚಿದಾನಂದ ನಾಯ್ಕ್ ನಿರ್ದೇಶನದಲ್ಲಿ ಮೂಡಿ ಬಂದಿರುವ 'ಸನ್ ಫ್ಲವರ್ಸ್ ವರ್ ದ ಫಸ್ಟ್ ಒನ್ಸ್ ಟು ನೋ' ಕಿರುಚಿತ್ರ ಆಯ್ಕೆಯಾಗಿತ್ತು. ಈ ಫೆಸ್ಟಿವೆಲ್‌ಗೆ ಆಯ್ಕೆಯಾದ ಮೊದಲ ಕನ್ನಡಿಗರ ಕಿರುಚಿತ್ರ ಇದಾಗಿದ್ದು, ಇದೀಗ ಮೊದಲ ಅತ್ಯುತ್ತಮ ಕಿರುಚಿತ್ರ ಪ್ರಶಸ್ತಿಯನ್ನು ಬಾಚಿಕೊಂಡಿರುವ ಚಿದಾನಂದ ಸಾಧನೆಗೆ ನ್ಯಾಷನಲ್ ಸ್ಟಾರ್ ಯಶ್ ಹಾಡಿ ಹೊಗಳಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ 'ಕೆಜಿಎಫ್ 2' ನಟ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಚಿದಾನಂದ ನಾಯಕ್‌ಗೆ ಅಭಿನಂದನೆಗಳು. ಕಾನ್ ಚಿತ್ರೋತ್ಸವದಲ್ಲಿ ಅತ್ಯುತ್ತಮ ಕಿರುಚಿತ್ರಕ್ಕಾಗಿ 'ಲಾ ಸಿನೆಫ್' ಪ್ರಶಸ್ತಿಯನ್ನು ಗೆದ್ದಿದ್ದಕ್ಕಾಗಿ 'ಸನ್ ಫ್ಲವರ್ಸ್ ವರ್ ದ ಫಸ್ಟ್ ಒನ್ಸ್ ಟು ನೋ' ಚಿತ್ರಕ್ಕೆ ಅಭಿನಂದನೆಗಳು ಎಂದು ಯಶ್ ಶುಭಕೋರಿದ್ದಾರೆ. ನೀವು ಕನ್ನಡ ಜಾನಪದವನ್ನು ಜಾಗತಿಕ ಹಂತಕ್ಕೆ ಕೊಂಡೊಯ್ಯುವುದನ್ನು ಮತ್ತು ಭಾರತೀಯ ಚಿತ್ರರಂಗಕ್ಕೆ ಹೊಸ ಮಾನದಂಡಗಳನ್ನು ಹೊಂದಿಸುವುದನ್ನು ನೋಡಲು ಹೆಮ್ಮೆಪಡುತ್ತೇನೆ ಎಂದು ಚಿದಾನಂದಗೆ ಯಶ್ ಎಕ್ಸ್‌ನಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ನಾನು ಸಿಂಗಲ್, ಹೊಸ ಸಂಬಂಧಕ್ಕೆ ಸಿದ್ಧಳಾಗಿದ್ದೇನೆ ಎಂದು ಬ್ರೇಕಪ್ ಬಗ್ಗೆ ತಿಳಿಸಿದ ರಚನೆ ಮತ್ತು ನಿರ್ದೇಶನದ ಜವಾಬ್ದಾರಿಯನ್ನು ಚಿದಾನಂದ ಹೊತ್ತಿದ್ದರೆ, ವಿ. ಮನೋಜ್ ಅವರ ಸಂಕಲನವಿದೆ. ಪುಣೆಯ ಫಿಲ್ಮ್ ಅಂಡ್ ಟೆಲಿವಿಷನ್ ಇನ್ ಸ್ಟಿಟ್ಯೂಟ್ ಈ ಚಿತ್ರವನ್ನು ನಿರ್ಮಾಣ ಮಾಡಿದೆ. ಅಲ್ಲದೇ ಕನ್ನಡದ ಅನೇಕ ಕಲಾವಿದರು ಈ ಕಿರುಚಿತ್ರದಲ್ಲಿ ನಟಿಸಿದ್ದಾರೆ.




# ಅಲ್ಲು ಅರ್ಜುನ್ ಜೊತೆ ಸೊಂಟ ಬಳುಕಿಸಲಿದ್ದಾರೆ ತೃಪ್ತಿ ದಿಮ್ರಿ



ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಸಿನಿಮಾದಲ್ಲಿ ಸ್ಪೆಷಲ್ ಹಾಡಿಗೆ ಹೆಜ್ಜೆ 'ಅನಿಮಲ್' ಖ್ಯಾತಿಯ ಬಾಬಿ 2 ಎಂಟ್ರಿ ಕೊಡ್ತಿದ್ದಾರೆ. ಅಂದರೆ, ನಟಿ ತೃಪ್ತಿ ದಿಮ್ರಿ ಪುಷ್ಪ 2ನಲ್ಲಿ ಐಟಂ ಹಾಡಿಗೆ ಹೆಜ್ಜೆ ಹಾಕಲು ಬರುತ್ತಿದ್ದಾರೆ. 'ಪುಷ್ಪ' ಸಿನಿಮಾ ಸಮಂತಾ ಸೊಂಟ ಬಳುಕಿಸಿದ ಹಾಡು ಸೂಪರ್ ಡೂಪರ್ ಹಿಟ್ ಆಗಿತ್ತು. ಅದೇ ರೀತಿ 'ಪುಷ್ಪ 2'ನಲ್ಲಿಯೂ ಐಟಂ ಸಾಂಗ್ ಇಟ್ಟರೇ ಫ್ಯಾನ್ಸ್‌ಗೆ ಕಿಕ್ ಕೊಡಲಿದೆ ಎಂಬುದು ಚಿತ್ರತಂಡದ ಲೆಕ್ಕಚಾರ. ಅದಕ್ಕಾಗಿ ಅನಿಮಲ್ ಖ್ಯಾತಿಯ ತೃಪ್ತಿ ದಿಮ್ರಿಗೆ ಸೊಂಟ ಬಳುಕಿಸಲು ಚಿತ್ರತಂಡ ಮಣೆ ಹಾಕಿದೆ. ನಾನು ಸಿಂಗಲ್, ಹೊಸ ಸಂಬಂಧಕ್ಕೆ ಸಿದ್ಧಳಾಗಿದ್ದೇನೆ ಎಂದು ಬ್ರೇಕಪ್ ಬಗ್ಗೆ ತಿಳಿಸಿದ 'ಸಲಾರ್' ನಟಿ ರಣ್‌ಬೀರ್ ಕಪೂರ್, ರಶ್ಮಿಕಾ ಜೊತೆ ನಟಿಸಿದ ತೃಪ್ತಿ ದಿಮ್ರಿ ಸಖತ್ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿದ್ದರು. ಪುಷ್ಪ 2ನಲ್ಲಿ ಇದೀಗ ತೃಪ್ತಿ ಸಖತ್ ಹಾಟ್ ಆಗಿ ಕಾಣಿಸಿಕೊಂಡು ಪಡ್ಡೆಹುಡುಗರ ನಿದ್ದೆ ಕದಿಯಲಿದ್ದಾರೆ. 'ಪುಷ್ಪ 2' ಚಿತ್ರದ ಮೂಲಕ ಮತ್ತೊಮ್ಮೆ ರಶ್ಮಿಕಾ ಸಿನಿಮಾಗೆ ತೃಪ್ತಿ ಎಂಟ್ರಿ ಕೊಡ್ತಿದ್ದಾರೆ. ಸಮಂತಾ ಐಟಂ ಡ್ಯಾನ್ಸ್ ಮಾಡಿರುವ ರೆಕಾರ್ಡ್ನ ತೃಪ್ತಿ ಬ್ರೇಕ್ ಮಾ ಡುತ್ತಾರಾ ಎಂದು ಕಾದುನೋಡಬೇಕಿದೆ.

# ಸಮಂತಾ ಎಂಟ್ರಿ ನೋಡ್ತಿದ್ದಂತೆ ನಾಚಿ ನೀರಾದ ನಾಗಚೈತನ್ಯ





ಟಾಲಿವುಡ್ ನಟ ನಾಗಚೈತನ್ಯ ಮತ್ತು ಸಮಂತಾ ನಟನೆಯ 'ಮನಂ' ಸಿನಿಮಾ ಮತ್ತೆ ಮರು ಬಿಡುಗಡೆಯಾಗಿದೆ. ಈ ಸಿನಿಮಾದ ವಿಶೇಷ ಪ್ರದರ್ಶನಕ್ಕೆ ಚಿತ್ರದ ನಿರ್ದೇಶಕ ವಿಕ್ರಮ್ ಕುಮಾರ್ ಜೊತೆ ನಾಗಚೈತನ್ಯ ಹಾಜರಿ ಹಾಕಿದ್ದಾರೆ. ಈ ವೇಳೆ, ಬೆಳ್ಳಿಪರದೆಯಲ್ಲಿ ಮಾಜಿ ಸಮಂತಾರನ್ನು ನೋಡುತ್ತಿದ್ದಂತೆ ನಾಗಚೈತನ್ಯ ಸ್ಮೈಲ್ ಮಾಡಿದ್ದಾರೆ. 2014ರಲ್ಲಿ ತೆರೆಕಂಡ 'ಮನಂ' ಇದೀಗ ಮತ್ತೆ ರೀ ರಿಲೀಸ್ ಆಗಿದೆ. ಹೈದರಾಬಾದ್, ವಿಜಯವಾಡ ಮತ್ತು ವಿಶಾಖಪಟ್ಟಣಂನ ಹಲವು ಚಿತ್ರಮಂದಿರಗಳಲ್ಲಿ ಮನಂ ಸಿನಿಮಾ ವಿಶೇಷ ಪ್ರದರ್ಶನ ಕಾಣುತ್ತಿದೆ. ಇದೇ ಮೇ 23ರ ರಾತ್ರಿ ಹೈದರಾಬಾದ್‌ನಲ್ಲಿ 'ಮನಂ' ಸಿನಿಮಾದ ವಿಶೇಷ ಪ್ರದರ್ಶನದ ವೇಳೆ, ಚಿತ್ರದ ನಿರ್ದೇಶಕನ ಜೊತೆಗೆ ನಾಗ ಚೈತನ್ಯ ಆಗಮಿಸಿದ್ದಾರೆ. ಅಭಿಮಾನಿಗಳ ಮಧ್ಯೆ ಕುಳಿತು ಸಿನಿಮಾ ನೋಡಿ ಎಂಜಾಯ್ ಮಾಡಿದ್ದಾರೆ. ಈ ಸಿನಿಮಾದಲ್ಲಿ ಸಮಂತಾ ಪ್ರಮುಖ ಪಾತ್ರವನ್ನು ನಿರ್ವಹಿಸಿದ್ದಾರೆ. ತೆರೆಯ ಮೇಲೆ ಸಮಂತಾ ಅವರನ್ನು ಮತ್ತೊಮ್ಮೆ ನೋಡಿ ಕಣ್ತುಂಬಿಕೊಂಡಿದ್ದಾರೆ. ಆಗ ಅವರ ಖುಷಿಗೆ ಪಾರವೇ ಇರಲಿಲ್ಲ. ಸಮಂತಾ ದೃಶ್ಯ ಸ್ಕ್ರೀನ್ ಮೇಲೆ ಬರುತ್ತಿದ್ದಂತೆ ನಾಗ ಚೈತನ್ಯ ನಕ್ಕಿದ್ದಾರೆ.

# ಪ್ರಶಾಂತ್ ನೀಲ್, ಜ್ಯೂ.ಎನ್‌ಟಿಆರ್ ಸಿನಿಮಾದಲ್ಲಿ ರಶ್ಮಿಕಾ ಮಂದಣ್ಣ ನಾಯಕಿ



'ದೇವರ' ಸಿನಿಮಾದ ಬಳಿಕ ಜ್ಯೂ.ಎನ್‌ಟಿಆರ್ ಮುಂದಿನ ಚಿತ್ರಕ್ಕಾಗಿ 'ಕೆಜಿಎಫ್ 2' ಡೈರೆಕ್ಟರ್ ಪ್ರಶಾಂತ್ ನೀಲ್ ಜೊತೆ ಕೈಜೋಡಿಸಿದ್ದಾರೆ. ಈ ಚಿತ್ರದಲ್ಲಿ ತಾರಕ್‌ಗೆ ರಶ್ಮಿಕಾ ಮಂದಣ್ಣ ನಾಯಕಿ ಎಂಬ ಸುದ್ದಿ ಇದೀಗ ಹರಿದಾಡುತ್ತಿದೆ. ಜ್ಯೂ.ಎನ್‌ಟಿಆರ್ ಮತ್ತು ಪ್ರಶಾಂತ್ ನೀಲ್ ಕಾಂಬಿನೇಷನ್‌ನ ಈ ಸಿನಿಮಾಗೆ 'ಡ್ರ್ಯಾಗನ್' ಎಂದು ಟೈಟಲ್ ಇಡಲಾಗಿದೆ. ಇದೇ ಆಗಸ್ಟ್‌ನಿಂದ ಶೂಟಿಂಗ್ ಮಾಡೋದಾಗಿ ತಾರಕ್ ಹುಟ್ಟುಹಬ್ಬದ ದಿನ (ಮೇ 20) ಚಿತ್ರತಂಡ ತಿಳಿಸಿದೆ. ಸಿನಿಮಾ ಘೋಷಣೆಯ ನಂತರ ಜ್ಯೂ.ಎನ್‌ಟಿಆರ್‌ಗೆ ನಾಯಕಿ ಯಾರಾಗ್ತಾರೆ ಎಂಬ ಸುದ್ದಿ ಭಾರೀ ಚರ್ಚೆಯಾಗಿತ್ತು. ಈಗ ಅದಕ್ಕೆ ಉತ್ತರ ಸಿಕ್ಕಿದೆ.

ಡ್ರ್ಯಾಗನ್ ಬಿಗ್ ಬಜೆಟ್‌ನಲ್ಲಿ ಮೂಡಿ ಬರುತ್ತಿರುವ ಪ್ಯಾನ್ ಇಂಡಿಯಾ ಸಿನಿಮಾ ಇದಾಗಿದ್ದು, ಸ್ಟಾರ್ ನಾಯಕಿನೇ ಬೇಕು ಎಂದು ಚಿತ್ರತಂಡ ರಶ್ಮಿಕಾರನ್ನು ಸಂಪರ್ಕಿಸಿದೆ ಎನ್ನಲಾಗಿದೆ. ಈ ಚಿತ್ರದಲ್ಲಿ ನಾಯಕಿ ಪಾತ್ರಕ್ಕೂ ತುಂಬಾನೇ ಪ್ರಾಮುಖ್ಯತೆ ಇದೆ. ಜ್ಯೂ.ಎನ್‌ಟಿಆರ್‌ಗೆ ಕನ್ನಡದ ನಟಿ ರಶ್ಮಿಕಾ ಸೂಕ್ತ ಎಂಬುದು ತಂಡದ ಅಭಿಪ್ರಾಯ ಎನ್ನಲಾಗಿದೆ. ಅಷ್ಟಕ್ಕೂ ಈ ಸುದ್ದಿ ನಿಜನಾ ಎಂಬುದು ಖಾತ್ರಿಯಾಗಿಲ್ಲ. ಚಿತ್ರತಂಡ ಈ ಕುರಿತು ಅಧಿಕೃತ ಘೋಷಣೆ ಮಾಡುವವರೆಗೂ ಕಾದುನೋಡಬೇಕಿದೆ. ಸದ್ಯ ಪ್ರಶಾಂತ್ ನೀಲ್ ಮತ್ತು ರಶ್ಮಿಕಾ ಮಂದಣ್ಣ ಕನ್ನಡದವರು. ಜ್ಯೂ.ಎನ್‌ಟಿಆರ್ ಕುಂದಾಪುರದವರಾಗಿದ್ದು, ಅವರಿಗೆ ಕನ್ನಡ ಭಾಷೆಯ ಮೇಲೆ ವಿಶೇಷ ಅಭಿಮಾನವಿದೆ.



# ರಾಗಿಣಿ ಹುಟ್ಟುಹಬ್ಬಕ್ಕೆ ಸ್ಪೆಷಲ್ ವಿಡಿಯೋ ರಿಲೀಸ್

**ವಿಜಯ್ ದೇವರಕೊಂಡ ಭಾಗಿ**

ತುಪ್ಪದ ಬೆಡಗಿ ರಾಗಿಣಿ ದ್ವಿವೇದಿ ಇಂದು (ಮೇ 24) ಹುಟ್ಟುಹಬ್ಬದ ಸಂಭ್ರಮದಲ್ಲಿದ್ದಾರೆ. ರಾಗಿಣಿ 34ನೇ ವರ್ಷದ ಬರ್ತ್‌ಡೇಯ ಸಂಭ್ರಮ ಡಬಲ್ ಮಾಡಲು 'ಸಂಜು ವೆಡ್ಸ್ ಗೀತಾ 2' ಚಿತ್ರತಂಡ ಸ್ಪೆಷಲ್ ವಿಡಿಯೋವೊಂದು ರಿಲೀಸ್ ಮಾಡಿ ನಟಿಗೆ ಶುಭಕೋರಿದ್ದಾರೆ. ರಿಲೀಸ್ ಮಾಡಿರುವ ಮೇಕಿಂಗ್ ವಿಡಿಯೋದಲ್ಲಿ ರಾಗಿಣಿ ಸಖತ್ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿದ್ದಾರೆ. ಬೆಳ್ಳಿಪರದೆಯಲ್ಲಿ ಸಮಂತಾ ಎಂಟ್ರಿ ನೋಡ್ತಿದ್ದಂತೆ ನಾಚಿ ನೀರಾದ ನಾಗಚೈತನ್ಯ ಅಂದಹಾಗೆ, ಕಾಡುವಂಥ ಪ್ರೇಮಕಥೆಗಳನ್ನು ತೆರೆಮೇಲೆ ಮೂಡಿಸಿದ ನಿರ್ದೇಶಕ ನಾಗಶೇಖರ್ ಇದೀಗ ಕನ್ನಡ ಸಿನಿರಸಿಕರಿಗಾಗಿ ಮತ್ತೊಂದು ಅದ್ಭುತ ಲವ್ ಸ್ಟೋರಿಯನ್ನು ಹೇಳಹೊರಟಿದ್ದಾರೆ. ದಶಕದ ಹಿಂದೆ ತಮ್ಮದೇ ನಿರ್ದೇಶನದಲ್ಲಿ ತೆರೆಕಂಡು, ಜನಮನ ಸೂರೆಗೊಂಡು ಯಶಸ್ವಿಯಾಗಿದ್ದ 'ಸಂಜು ವೆಡ್ಸ್ ಗೀತಾ' ಚಿತ್ರದ ಟೈಟಲ್ ಇಟ್ಟುಕೊಂಡು ನವನವೀನ ಪ್ರೇಮಕಥೆ ಹೆಣೆದು 'ಸಂಜು ವೆಡ್ಸ್ ಗೀತಾ 2' ಚಿತ್ರವನ್ನು ತೆರೆಗೆ ತರುತ್ತಿದ್ದಾರೆ.

ಶ್ರೀನಗರ ಕಿಟ್ಟಿ ಮತ್ತು ರಚಿತಾ ಪ್ರಧಾನ ಪಾತ್ರಗಳಲ್ಲಿ ಕಾಣಿಸಿಕೊಂಡಿರುವ ಈ ಚಿತ್ರದ ಹಾಡೊಂದರ ಚಿತ್ರೀಕರಣ ಇತ್ತೀಚೆಗೆ ನಡೆಯಿತು. ನಾಯಕ ಸಂಜು ಹಾಗೂ ನಾಯಕಿ ಗೀತಾ ಇಬ್ಬರ ವಿವಾಹ ವಾರ್ಷಿಕೋತ್ಸವದ ಸಂದರ್ಭದಲ್ಲಿ ಬರುವ ಪಾರ್ಟಿ ಸಾಂಗ್ ಅದಾಗಿದ್ದು, ವಿಶೇಷವಾಗಿ ಈ ಹಾಡಲ್ಲಿ ತುಪ್ಪದ ಬೆಡಗಿ ರಾಗಿಣಿ ಇವರಿಬ್ಬರ ಜೊತೆ ಸ್ಟೆಪ್ಸ್ ಹಾಕಿದ್ದಾರೆ. ಅದೇ ಸಂದರ್ಭದ ಸಣ್ಣ ತುಣುಕನ್ನು ಇದೀಗ ರಾಗಿಣಿ ಹುಟ್ಟುಹಬ್ಬದ ದಿನ ರಿಲೀಸ್ ಮಾಡಿದ್ದಾರೆ.

ಕುಂಬಳಗೋಡಿನ ಬಿಜಿಎಸ್ ಹೈಸ್ಕೂಲಿನ ಗ್ಲಾಸ್ ಹೌಸ್‌ನಲ್ಲಿ ಈ ಹಾಡಿನ ಚಿತ್ರೀಕರಣ ನಡೆಯಿತು. 200 ರಿಂದ 250 ಜನ ಡಾನ್ಸರ್ಸ್ ಈ ಹಾಡಲ್ಲಿ ಹೆಜ್ಜೆ ಹಾಕಿದ್ದಾರೆ.

ಖ್ಯಾತ ಗಾಯಕಿ ಮಂಗ್ಲಿ ಈ ಹಾಡಿಗೆ ದನಿಯಾಗಿದ್ದು, ಭಜರಂಗಿ ಮೋಹನ್ ಅವರು ಕೊರಿಯೋಗ್ರಾಫ್ ಮಾಡಿದ್ದಾರೆ. ಈ ವರ್ಷದ ಸೂಪರ್ ಹಿಟ್ ಸಾಂಗ್ ಇದಾಗಲಿದೆ. ಈಗಾಗಲೇ ಚಿತ್ರದ ಬಹುತೇಕ ಚಿತ್ರೀಕರಣ ಮುಗಿದಿದ್ದು, 2 ಫೈಟ್ಸ್, ಒಂದು ಹಾಡಿನ ಪ್ಯಾಚ್ ವರ್ಕ್ ಮಾತ್ರವೇ ಬಾಕಿಯಿದೆ. ರೇಷ್ಮೆ ನೂಲಿಗೆ ಉತ್ತಮ ಬೆಲೆ ಸಿಗಬೇಕೆಂದು ಹೋರಾಡುವ ನಮ್ಮ ಮಣ್ಣಿನ ಪ್ರೇಮಿಗಳ ಅದ್ಭುತ ಪ್ರೇಮಕಥೆ ಈ ಚಿತ್ರದಲ್ಲಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**